ಸಂಪುಟ: 06 ಸಂಚಿಕೆ: 112 ಪುಟಗಳು: 08 ಭಾನುವಾರ 05 ಜುಲೈ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಪ್ರತಿದಿನವೂ ನಮ್ಮಿಂದ ಸಾಧ್ಯವಿದೆ ಎಂದು ನಾವು ತಿಳಿದುಕೊಂಡಿದ್ದಕ್ಕಿಂತ ಸ್ವಲ್ಪ ಹೆಚ್ಚು ಕೆಲಸ ಮಾಡಿದರೆ ಯಶಸ್ಸು ನಮಗಾಗಿ ಕಾಯುತ್ತ ಮುಂದೆ ನಿಂತಿರುತ್ತದೆ!

## ಅಂಗನವಾಡಿ ಕಾರ್ಯಕರ್ತೆಯರಿಗೆ ಸರಿಯಾದ ಎಸ್ಐಆರ್ ತರಬೇತಿ ಇಲ್ಲ : ಶಾಸಕ ಎಚ್.ಡಿ.ರಂಗನಾಥ್

• ಉದಯವಾಹಿನಿ, ಬೆಂಗಳೂರು

ಮತದಾರರ ಪಟ್ಟಿ ಪರಿಷ್ಕರಣೆಗೆ ನಡೆಯುತ್ತಿರುವ ಎಸ್ಐಆರ್‌ನಲ್ಲಿ ತೊಡಗಿಸಿಕೊಂಡಿರುವ ಅಂಗನವಾಡಿ ಸಿಬ್ಬಂದಿಗಳಿಗೆ ಸರಿಯಾದ ತರಬೇತಿ ಇಲ್ಲ ಎಂದು ಕುಣಿಗಲ್ ಶಾಸಕ ಎಚ್.ಡಿ.ರಂಗನಾಥ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ದೇಶದ ಪ್ರತಿಯೊಬ್ಬ ಪ್ರಜೆಯ ಹಿತ ಕಾಪಾಡಲು ಪ್ರಯತ್ನಿಸುತ್ತಿದೆ. ಬಿಜೆಪಿಯವರು ಪ್ರತಿಯೊಂದರಲ್ಲೂ ಕಡಿವಾಣ ಹಾಕುವಂತಹ ಮನಃಸ್ಥಿತಿ ಹೊಂದಿದ್ದಾರೆ. ಆಂತರಿಕವಾಗಿ ಸಂವಿಧಾನವನ್ನು ವಿರೋಧಿಸುತ್ತಾ, ಬಹಿರಂಗವಾಗಿ ಸಂವಿಧಾನದ ಅನುಸಾರವೇ ಮತದಾರರ ಹಕ್ಕುಗಳನ್ನು ಕಸಿಯುವ ಹುನ್ನಾರ ನಡೆಸಿದ್ದಾರೆ ಎಂದು ಆರೋಪಿಸಿದರು.

ಬಿಜೆಪಿ ಎಲ್ಲದಕ್ಕೂ ವಿರೋಧ ಮಾಡುತ್ತಿದೆ. ಕಾನೂನಿನ ವಿರುದ್ಧವಾಗಿ ಹೋಗುತ್ತಿಲ್ಲ. ಬಿಎಲ್‌ಒಗಳು ಮತ್ತು ಬಿಎಲ್ಎಗಳು ಮನೆ ಮನೆಗೆ ತೆರಳಿ ಅರ್ಜಿ ನಮೂನೆಗಳನ್ನು ವಿತರಿಸುತ್ತಿದ್ದಾರೆ. ಕುಣಿಗಲ್‌ನಲ್ಲಿ ಎಲ್ಲಿಯೂ ಸಮುದಾಯ ಭವನಗಳಲ್ಲಿ ಎಸ್ಐಆರ್ ನಡೆಯುತ್ತಿಲ್ಲ ಎಂದು ಹೇಳಿದರು. ಕುಣಿಗಲ್ ತಾಲ್ಲೂಕಿನಲ್ಲಿ 142 ಬೂತ್‌ಗಳಿಗೆ ಅಂಗನವಾಡಿ ಕಾರ್ಯಕರ್ತರನ್ನು ನೇಮಿಸಲಾಗಿದೆ.

## ಶ್ರೀರಾಮನ ಚಿನ್ನಾಭರಣ ದೋಚಲು 200 ಖದೀಮರ ಜಾಲ: ಅಯೋಧ್ಯೆಯಿಂದ ರೈಲಿನಲ್ಲಿ ಕರ್ನಾಟಕಕ್ಕೆ ಬರ್ತಿತ್ತಾ ಕದ್ದ ಚಿನ್ನ?

• ಉದಯವಾಹಿನಿ, ಬೆಂಗಳೂರು

ಅಯೋಧ್ಯೆ ಶ್ರೀರಾಮನ ಹುಂಡಿ ಹಣ ಕಳ್ಳತನ ಕೇಸ್‌ಗೆ ಸಂಬಂಧಿಸಿದಂತೆ ಬಗೆದಷ್ಟು ಅಕ್ರಮ, ಕೆದಕಿದಷ್ಟು ವಂಚನೆ, ಹುಡುಕುತ್ತಾ ಹೋದಂತೆಲ್ಲಾ ಕಳ್ಳಾಟದ ಹೆಜ್ಜೆ ಜಾಡು ಪತ್ತೆ ಆಗುತ್ತಿದೆ. ಕೇವಲ ಕಾಣಿಕೆ, ದೇಣಿಗೆ, ಹುಂಡಿ ಹಣವನ್ನಷ್ಟೇ ಅಲ್ಲ. ದೇವರಿಗೆ ಸೇರಬೇಕಿದ್ದ ಚಿನ್ನಾಭರಣವನ್ನೂ ಅದೆಷ್ಟು ವ್ಯವಸ್ಥಿತವಾಗಿ ನುಂಗಿ ನೀರು ಕುಡಿದಿದ್ದಾರೆ ಅನ್ನೋದು ಎಸ್ಐಟಿ ತನಿಖೆಯಲ್ಲಿ ಬಟಾಬಯಲಾಗಿದೆ. ಅಷ್ಟೇ ಅಲ್ಲದೆ ಕರ್ನಾಟಕದ ಲಿಂಕ್ ಬೆಚ್ಚಿಬೀಳಿಸಿದೆ.

ಅಯೋಧ್ಯೆ ಶ್ರೀರಾಮನ ಹುಂಡಿ ಹಣ ಕಳ್ಳತನ ಕೇಸ್‌ನ ತನಿಖೆ ತೀವ್ರಗೊಂಡಂತೆಲ್ಲಾ ಒಂದೊಂದೇ ಸ್ಫೋಟಕ ಸತ್ಯಗಳು ಬಯಲಾಗುತ್ತಿವೆ. ಗರ್ಭಗುಡಿ ಪಕ್ಕದಲ್ಲೇ ಕೂತು ಹುಂಡಿ ಹಣ ಎಣಿಕೆಯಲ್ಲೇ ಕೈಚಳಕ ತೋರಿಸಿದ್ದ ಖದೀಮರು, ಭಕ್ತರು ದೇಣಿಗೆಯಾಗಿ ನೀಡುತ್ತಿದ್ದ ಚಿನ್ನಾಭರಣಗಳನ್ನೂ ಎಗರಿಸುತ್ತಿದ್ದರು. ಪೊಲೀಸರು ಹಾಗೂ ಎಸ್ಐಟಿ ಅಧಿಕಾರಿಗಳು 8 ಆರೋಪಿಗಳಿಂದ ಈವರೆಗೂ 80 ಲಕ್ಷಕ್ಕೂ ಹೆಚ್ಚು ಹಣ ಜಪ್ತಿ ಮಾಡಿದ್ದಾರೆ. ಆದರೆ ಈವರೆಗೂ ಕದ್ದ ದೇವರ ಆಭರಣಗಳನ್ನು ರಿಕವರಿ ಮಾಡಿಕೊಳ್ಳಲು ಆಗಿಲ್ಲ. ಕಾರಣ 200 ಜನರು ವ್ಯವಸ್ಥಿತ ಸಂಚು ಮಾಡಿದ್ದಾರೆ. ದೇವರಿಗೆ ಸಮರ್ಪಣೆಯಾದ ಚಿನ್ನಾಭರಣಗಳ ತೂಕದ ವೇಳೆ ದೊಡ್ಡ ಸಂಚೇ ನಡೀತಿದ್ದಂತೆ. ಅಂದರೆ ದೇವರಿಗೆ 26, 27 ಕೆಜಿಯಷ್ಟು ಚಿನ್ನಾಭರಣ ಬಂದರೆ ರೌಂಡ್ ಫಿಗರ್ ಆಗಿ 25 ಕೆಜಿ ಅಂತಾ ಲೆಕ್ಕ ತೋರಿಸುತ್ತಿದ್ದರಂತೆ.

ಚಿನ್ನ-ಬೆಳ್ಳಿಯನ್ನ ಸ್ಥಳೀಯವಾಗಿ ಕರಗಿಸಲು ಕೊಟ್ಟರೆ ಅಕ್ರಮ ಗೊತ್ತಾಗುತ್ತೆ ಅಂತಾ ಅಯೋಧ್ಯೆಯಿಂದ ಅದೂ ರೈಲಿನಲ್ಲಿ ಕರ್ನಾಟಕಕ್ಕೆ ಕಳಿಸಿ ಕೊಡುತ್ತಿದ್ದರಂತೆ. ಹೀಗೆ ಅಯೋಧ್ಯೆಯಿಂದ ಚಿನ್ನ ಕರ್ನಾಟಕಕ್ಕೆ ತರಲು 200 ಜನರು ವ್ಯವಸ್ಥಿತ ಜಾಲವೇ ಇತ್ತು ಅನ್ನೋದು ತನಿಖೆ ವೇಳೆ ಬಯಲಾಗಿದೆ.

## ರಾಜ್ಯದ ಹಲವೆಡೆ 2-3 ದಿನ ಮಳೆ ಮುನ್ಸೂಚನೆ; 3 ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಣೆ



• ಉದಯವಾಹಿನಿ, ಬೆಂಗಳೂರು


ರಾಜ್ಯದ ಹಲವು ಜಿಲ್ಲೆಗಳಲ್ಲಿ ಮುಂದಿನ ಎರಡ್ಮೂರು ದಿನ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಈ ತಿಂಗಳು ಮುಂಗಾರು ಬಿರುಸು ಪಡೆಯುವ ಸಾಧ್ಯತೆಯಿದ್ದು, 3 ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಹಾಗೂ 7 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರಾವಳಿ, ದಕ್ಷಿಣ ಒಳನಾಡಿನ ಜಿಲ್ಲೆಗಳಿಗೆ ಮಳೆ ಅಲರ್ಟ್ ಘೋಷಣೆ ಮಾಡಲಾಗಿದೆ. ಬೆಳಗಾವಿ, ಧಾರವಾಡ, ಹಾವೇರಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಲಾಗಿದೆ. ರಾಜ್ಯದ ಹಲವೆಡೆ ಈಗಾಗಲೇ ಉತ್ತಮ ಮಳೆಯಾಗುತ್ತಿದೆ. ಇನ್ನು ಸಿಲಿಕಾನ್ ಸಿಟಿ ಬೆಂಗಳೂರು ನಗರದಾದ್ಯಂತ ತುಂತುರು ಮಳೆ ಜೊತೆಗೆ ತಂಪು ಗಾಳಿ ಬೀಸುತ್ತಿರುವ ಪರಿಣಾಮ ತಂಪಾದ ವಾತಾವರಣ ನಿರ್ಮಾಣವಾಗಿದೆ.

## ಬೆಂಗಳೂರಲ್ಲಿ ಟ್ರಾಫಿಕ್ ಜಾಮ್ ಜಾಸ್ತಿ ಆಗ್ತಾ ಇರೋದು ವಾಹನಗಳ ಬ್ರೇಕ್ ಡೌನ್‌ನಿಂದ: ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಹೆಚ್ಚು ಟ್ರಾಫಿಕ್ ಜಾಮ್ ಆಗ್ತಾ ಇರೋದು ವಾಹನಗಳ ಬ್ರೇಕ್ ಡೌನ್ ನಿಂದ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. (ಜು.4) ಬೆಳಗ್ಗೆ ಕೆಆರ್. ಸರ್ಕಲ್‌ನಲ್ಲಿ ಆದ ಅಪಘಾತದ ವಿಚಾರವಾಗಿ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಅಪಘಾತದ ಬಗ್ಗೆ ಮಾಹಿತಿ ಇಲ್ಲ. ಮೊನ್ನೆ ಬೆಂಗಳೂರು ಟ್ರಾಫಿಕ್ ಬಗ್ಗೆ ರಿವ್ಯೂ ಮಾಡಿದಾಗ 66% ಟ್ರಾಫಿಕ್ ಜಾಮ್ ಆಗ್ತಾ ಇರೋದು ವಾಹನಗಳ ಬ್ರೇಕ್ ಡೌನ್‌ನಿಂದ. ಅದರಲ್ಲಿ ಹೆಚ್ಚಾಗಿ ಬಸ್‌ಗಳಲ್ಲಿ ಆಗ್ತಿದೆ. ಇದಕ್ಕಾಗಿ ಪ್ಲಾನ್ ಮಾಡುತ್ತಿದ್ದೇವೆ ಎಂದರು. ಸಮಸ್ಯೆ ಪರಿಹಾರ ಆಗಬೇಕಾದ್ರೆ ಸಂಬಂಧಪಟ್ಟವರು ಟ್ರಾಫಿಕ್ ಪೊಲೀಸ್, ಜಿಬಿಎ, ಕಾರ್ಪೊರೇಟ್ಸ್, ಶಿಕ್ಷಣ ಸಂಸ್ಥೆಗಳು ಸೇರಿ ಒಂದು ಮಿಷನ್ ಮಾಡಬೇಕು ಅಂತ ಆಲೋಚನೆ ಇದೆ. ವಾರ,10 ದಿನಗಳಲ್ಲಿ ಸಮಿತಿ ರಚನೆ ಮಾಡ್ತೀವಿ. ಇರೋ ವ್ಯವಸ್ಥೆ ಸಿಸ್ಟಮ್ ಹೇಗೆ ಸರಿ ಮಾಡಬಹುದು ಅಂತ ನೋಡ್ತೀವಿ. ಬೆಂಗಳೂರಿನಲ್ಲಿ ಒಂದು ಕೋಟಿ ಜನಸಂಖ್ಯೆ ಇದ್ದರೆ ಒಂದೂವರೆ ಕೋಟಿ ವಾಹನಗಳು ಇವೆ.

## ಪ್ರಧಾನಿ ಮೋದಿ ವಿದೇಶ ಪ್ರವಾಸ



ಮುಂದಿನ ವಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸುಮಾರು ಒಂದು ವಾರಗಳ ಕಾಲ ಮಹತ್ವದ ವಿದೇಶಿ ಪ್ರವಾಸಕ್ಕೆ ತೆರಳುತ್ತಿದ್ದಾರೆ ಅವರು ವಿದೇಶ ಪ್ರವಾಸ ಮುಗಿಸಿ ಭಾರತಕ್ಕೆ ಮರಳಿದ ಕೇವಲ ಒಂದು ವಾರದ ಅವಧಿಯಲ್ಲೇ (ಜುಲೈ 21ರಿಂದ) ಸಂಸತ್ತಿನ ಮಳೆಗಾಲದ ಅಧಿವೇಶನ ಆರಂಭವಾಗಲಿದೆ. ಸದ್ಯಕ್ಕೆ ಸರ್ಕಾರದ ಸಂಪೂರ್ಣ ಆದ್ಯತೆ ಅಧಿವೇಶನವನ್ನು ಯಶಸ್ವಿಯಾಗಿ ನಿರ್ವಹಿಸುವುದಾಗಿದೆ.



**ಸಂಸತ್ತಿನ ಮುಂಗಾರು ಅಧಿವೇಶನವು ಜುಲೈ 20ರಿಂದ ಪ್ರಾರಂಭವಾಗಲಿದ್ದು, ಆಗಸ್ಟ್ 13ರವರೆಗೆ ನಡೆಯಲಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಸುಮಾರು 24 ದಿನಗಳ ಕಾಲ ನಡೆಯಲಿರುವ ಈ ಅಧಿವೇಶನದಲ್ಲಿ ಹಲವು ಪ್ರಮುಖ ಶಾಸನಾತ್ಮಕ ಕಲಾಪಗಳು ಮತ್ತು ಮಸೂದೆಗಳ ಮಂಡನೆ ನಡೆಯಲಿದೆ. ಈ ಮುಂಗಾರು ಅಧಿವೇಶನದಲ್ಲಿ ಪೂರ್ಣ ಪ್ರಮಾಣದ ಕೇಂದ್ರ ಬಜೆಟ್ ಮಂಡನೆ ಮತ್ತು ಅದರ ಮೇಲಿನ ಚರ್ಚೆಗಳು ಅತ್ಯಂತ ಪ್ರಮುಖ ಆಕರ್ಷಣೆಯಾಗಿರಲಿವೆ. ಸರ್ಕಾರವು ದೇಶದ ಆರ್ಥಿಕತೆ, ಭದ್ರತೆ ಮತ್ತು ಆಡಳಿತ ಸುಧಾರಣೆಗೆ ಸಂಬಂಧಿಸಿದ ಹಲವಾರು ಪ್ರಮುಖ ವಿಧೇಯಕಗಳನ್ನು ಈ ಅಧಿವೇಶನದಲ್ಲಿ ಅಂಗೀಕರಿಸಲು ಯೋಜಿಸಿದೆ.**

# 20ರಂದು ಸಂಸತ್ ಮುಂಗಾರು ಚರ್ಚೆ ಜೋರು



**1** ಜುಲೈ 20ರಿಂದ ಸಂಸತ್ ಮುಂಗಾರು ಅಧಿವೇಶನ

**2** ಹಲವು ಪ್ರಮುಖ ಮಸೂದೆಗಳ ಮಂಡನೆ

**3** ಕೇಂದ್ರ ಸಚಿವ ಕಿರಣ್ ರಿಜಿಜು ಮಾಹಿತಿ

• ಜುಲೈ 20ರಿಂದ ಆಗಸ್ಟ್ 13ರವರೆಗೆ ಸಂಸತ್ ಮಳೆಗಾಲದ ಅಧಿವೇಶನ • ವಿಪಕ್ಷಗಳ 'ಬಂಡಾಯ' ಪ್ರತಿಧ್ವನಿಸುವ ಸಾಧ್ಯತೆ! • ಸಂಸತ್ತಿನ ಮಳೆಗಾಲ ಅಧಿವೇಶನಕ್ಕೆ ರಾಷ್ಟ್ರಪತಿ ಗ್ರೀನ್ ಸಿಗ್ನಲ್

• ಉದಯವಾಹಿನಿ, ನವದೆಹಲಿ

ಸಂಸತ್ತಿನ ಮಳೆಗಾಲದ ಅಧಿವೇಶನ ಜುಲೈ 20ರಿಂದ ಆಗಸ್ಟ್ 13ರವರೆಗೆ ನಡೆಯಲಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಶನಿವಾರ ತಿಳಿಸಿದ್ದಾರೆ. ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಯಲ್ಲಿ ಆಡಳಿತಾರೂಢ ಬಿಜೆಪಿಯ ಗೆಲುವಿನ ನಂತರ ನಡೆಯುತ್ತಿರುವ ಈ 25 ದಿನಗಳ ಅಧಿವೇಶನವು 19 ಸಭೆಗಳನ್ನು ಒಳಗೊಂಡಿರಲಿದೆ. ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮತ್ತು ಶಿವಸೇನೆ (ಯುಬಿಟಿ)ಯಲ್ಲಿ ಉಲ್ಬಣಗೊಂಡ ಬಂಡಾಯದ ವಿಚಾರಗಳು ಮುಂಬರುವ ಅಧಿವೇಶನದಲ್ಲಿ ಪ್ರಮುಖವಾಗಿ ಚರ್ಚೆಯಾಗಲಿವೆ. ಪ್ರತ್ಯೇಕ ಬಣಗಳಾಗಿ ಗುರುತಿಸಲು ಕೋರಿರುವ 20 ಟಿಎಂಸಿ ಮತ್ತು ಆರು ಶಿವಸೇನೆ (ಯುಬಿಟಿ) ಸಂಸದರ ಬೇಡಿಕೆಗಳ ಕುರಿತು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ನಿರ್ಧಾರ ಕೈಗೊಳ್ಳುವ ನಿರೀಕ್ಷೆಯಿದೆ.

ರಾಜ್ಯಸಭೆಯಲ್ಲಿ, ಹೊಸದಾಗಿ ಆಯ್ಕೆಯಾದ ಮತ್ತು ಮರು ಆಯ್ಕೆಯಾದ ಸಂಸದರು ಪ್ರಮಾಣ ವಚನ ಸ್ವೀಕರಿಸಿದ್ದು, ಆಡಳಿತಾರೂಢ ಎನ್‌ಡಿಎ ಸಂಖ್ಯಾಬಲವು ಮತ್ತಷ್ಟು ಹೆಚ್ಚಿದೆ. ಮೇಲ್ಮನೆಯ ಮೂವರು ಬಂಡಾಯ ಟಿಎಂಸಿ ಸಂಸದರು ರಾಜೀನಾಮೆ ನೀಡಿದ್ದಲ್ಲದೆ, ಉಪಚುನಾವಣೆಗಳಿಂದ ರಾಜ್ಯಸಭೆಯಲ್ಲಿ ಬಿಜೆಪಿಗೆ ಹೆಚ್ಚಿನ ಬಲ ಹೊಂದಲು ನೆರವಾಗಿವೆ.

ಸರ್ಕಾರದ ಶಿಫಾರಸಿನ ಮೇರೆಗೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು 2026ರ ಮಳೆಗಾಲದ ಅಧಿವೇಶನಕ್ಕಾಗಿ ಸಂಸತ್ತಿನ ಎರಡೂ ಸದನಗಳನ್ನು ಕರೆದಿದ್ದಾರೆ. ಅಧಿವೇಶನವು ಜುಲೈ 20, 2026ರಂದು ಪ್ರಾರಂಭವಾಗಿ ಆಗಸ್ಟ್ 13, 2026ರ ವರೆಗೆ ರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯಗಳ ಕುರಿತು ಅರ್ಥಪೂರ್ಣ ಚರ್ಚೆ ಮತ್ತು ನಿರ್ಧಾರ ಕೈಗೊಳ್ಳಲು ನಡೆಯಲಿದೆ ಎಂದು ರಿಜಿಜು ಅವರು ಎಕ್ಸ್‌ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. 2029ರಲ್ಲಿ ಶಾಸಕಾಂಗಗಳಲ್ಲಿ ಮಹಿಳೆಯರಿಗೆ ಮೀಸಲಾತಿಯನ್ನು ಜಾರಿಗೆ ತರುವ ಮತ್ತು ಲೋಕಸಭೆಯಲ್ಲಿ ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸುವ ಸಂವಿಧಾನ ತಿದ್ದುಪಡಿ ಮಸೂದೆಯು ಕಳೆದ ಅಧಿವೇಶನದಲ್ಲಿ ಕೆಳಮನೆಯಲ್ಲಿ ಸೋತಿದ್ದರಿಂದ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರಕ್ಕೆ ಹಿನ್ನಡೆಯಾಗಿತ್ತು. ಎಲ್ಲಾ ರಾಜ್ಯಗಳ ಲೋಕಸಭಾ ಸ್ಥಾನಗಳನ್ನು ಏಕರೂಪವಾಗಿ ಶೇಕಡಾ 50ರಷ್ಟು ಹೆಚ್ಚಿಸಲು ಸರ್ಕಾರ ಈಗ ಮಸೂದೆಯನ್ನು ಮರುರೂಪಿಸುತ್ತಿದೆ. ಜನಸಂಖ್ಯೆಗೆ ಸಂಬಂಧಿಸಿದ ಸ್ಥಾನಗಳ ಹೆಚ್ಚಳಕ್ಕೆ ದಕ್ಷಿಣದ ಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿವೆ.

**ಎನ್‌ಡಿಎ ರಾಜ್ಯಸಭೆ ಸಂಖ್ಯಾಬಲ ಹೆಚ್ಚಳ:** ಅಂತೆಯೇ ರಾಜ್ಯಸಭೆಯಲ್ಲಿ ನೂತನವಾಗಿ ಆಯ್ಕೆಯಾದ ಹಾಗೂ ಮರು ಆಯ್ಕೆಯಾದ ಸದಸ್ಯರು ಪ್ರಮಾಣವಚನ ಸ್ವೀಕರಿಸಿದ ಬಳಿಕ ಆಡಳಿತಾರೂಢ ಎನ್‌ಡಿಎ ಮೈತ್ರಿಕೂಟದ ಸಂಖ್ಯಾಬಲ ಮತ್ತಷ್ಟು ಹೆಚ್ಚಾಗಿದೆ. ರಾಜ್ಯಸಭೆಯ ಟಿಎಂಸಿಯ ಮೂವರು ಬಂಡಾಯ ಸಂಸದರು ರಾಜೀನಾಮೆ ನೀಡಿದ್ದು, ನಡೆಯಲಿರುವ ಉಪಚುನಾವಣೆಗಳ ಮೂಲಕ ಬಿಜೆಪಿಯ ಬಲ ರಾಜ್ಯಸಭೆಯಲ್ಲಿ ಇನ್ನಷ್ಟು ಹೆಚ್ಚಾಗುವ ಸಾಧ್ಯತೆಯಿದೆ ಎಂದು ವರದಿಗಳು ತಿಳಿಸಿವೆ. ಇದೇ ವೇಳೆ, ವಿವಾದಾತ್ಮಕ 130ನೇ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಪರಿಶೀಲಿಸುತ್ತಿರುವ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ಜುಲೈ 17ರಂದು ತನ್ನ ವರದಿಯನ್ನು ಅಂಗೀಕರಿಸುವ ನಿರೀಕ್ಷೆಯಿದೆ.

### ತಿದ್ದುಪಡಿ ಮಸೂದೆಗೆ ಅಂಗೀಕಾರ ಸಾಧ್ಯತೆ

ಗಂಭೀರ ಅಪರಾಧ ಪ್ರಕರಣದಲ್ಲಿ ಪ್ರಧಾನಮಂತ್ರಿ, ಮುಖ್ಯಮಂತ್ರಿಗಳು ಹಾಗೂ ಕೇಂದ್ರ ಅಥವಾ ರಾಜ್ಯ ಸಚಿವರು ಬಂಧನಕ್ಕೊಳಗಾಗಿ ಸತತ 30 ದಿನಗಳ ಕಾಲ ನ್ಯಾಯಾಂಗ ಬಂಧನದಲ್ಲಿದ್ದರೆ, ಅವರು ಸ್ವಯಂಚಾಲಿತವಾಗಿ ಹುದ್ದೆಯಿಂದ ಅನರ್ಹರಾಗುವಂತೆ ಮಾಡುವ ವಿವಾದಾತ್ಮಕ ವಿಧಿಯನ್ನು ಮಸೂದೆಯಲ್ಲಿ ಮುಂದುವರಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.ಆದರೆ, ಈ ವಿಧಿಯನ್ನು ರಾಜಕೀಯ ಪ್ರತೀಕಾರ ಅಥವಾ ದುರುದ್ದೇಶಪೂರಿತ ಪ್ರಕರಣಗಳಿಗೆ ದುರುಪಯೋಗಪಡಿಸಿಕೊಳ್ಳದಂತೆ ಅಗತ್ಯ ರಕ್ಷಣಾತ್ಮಕ ಕ್ರಮಗಳನ್ನು ವರದಿಯಲ್ಲಿ ಸೇರಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಈ ತಿದ್ದುಪಡಿ ಮಸೂದೆ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದ್ದು, ಬೆಂಬಲಿಗರು ಸಾರ್ವಜನಿಕ ಹುದ್ದೆಗಳಲ್ಲಿ ಉತ್ತರದಾಯಿತ್ವ ಹೆಚ್ಚಿಸಲು ಇದು ನೆರವಾಗಲಿದೆ ಎಂದು ವಾದಿಸಿದರೆ, ವಿರೋಧ ಪಕ್ಷಗಳು ರಾಜಕೀಯ ಪ್ರೇರಿತ ತನಿಖೆ ಮತ್ತು ಬಂಧನಗಳ ಮೂಲಕ ಚುನಾಯಿತ ಸರ್ಕಾರಗಳನ್ನು ಅಸ್ಥಿರಗೊಳಿಸಲು ಇದನ್ನು ಬಳಸಿಕೊಳ್ಳುವ ಅಪಾಯವಿದೆ ಎಂದು ಆತಂಕ ವ್ಯಕ್ತಪಡಿಸಿವೆ.ಜುಲೈ 17ರಂದು ನಡೆಯುವ ಸಭೆಯಲ್ಲಿ ಜೆಪಿಸಿ ತನ್ನ ವರದಿಯನ್ನು ಅಂತಿಮಗೊಳಿಸಿ ಅಂಗೀಕರಿಸಿದ ಬಳಿಕ, ಮುಂದಿನ ಚರ್ಚೆಗಾಗಿ ಅದನ್ನು ಸಂಸತ್ತಿಗೆ ಸಲ್ಲಿಸುವ ನಿರೀಕ್ಷೆಯಿದೆ.ಇದರ ಜೊತೆಗೆ, ಆಪರೇಷನ್ ಸಿಂಧೂರ್ ವೇಳೆ ಭಾರತೀಯ ಯೋಧರ ಸಾವಿನ ಕುರಿತು ಸಂಸತ್ತನ್ನು ದಾರಿ ತಪ್ಪಿಸುವ ಉದ್ದೇಶದಿಂದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸ್ಪಷ್ಟ ಸುಳ್ಳು ಹೇಳಿದ್ದಾರೆ ಎಂದು ಕಾಂಗ್ರೆಸ್ ಆರೋಪಿಸಿರುವ ಹಿನ್ನೆಲೆಯಲ್ಲಿ, ಅವರ ವಿರುದ್ಧದ ವಿಶೇಷ ಹಕ್ಕು ಉಲ್ಲಂಘನೆ ಪ್ರಕ್ರಿಯೆಯ ವಿಷಯವನ್ನೂ ಪ್ರತಿಪಕ್ಷಗಳು ಮುಂಗಾರು ಅಧಿವೇಶನದಲ್ಲಿ ಪ್ರಸ್ತಾಪಿಸುವ ಸಾಧ್ಯತೆಯಿದೆ.

### ಶಾಸನಗಳ ಮಂಡನೆಗೆ ಸರ್ಕಾರದ ಮೊದಲ ಆದ್ಯತೆ

ಮುಂಬರುವ ಮಳೆಗಾಲದ ಅಧಿವೇಶನದಲ್ಲಿ ಕೆಲವು ಅತ್ಯಂತ ಪ್ರಮುಖ ಹಾಗೂ ನಿರ್ಣಾಯಕ ಮಸೂದೆಗಳನ್ನು ಮಂಡಿಸಿ ಅಂಗೀಕಾರ ಪಡೆಯಲು ಕೇಂದ್ರ ಸರ್ಕಾರ ಸಿದ್ಧತೆ ನಡೆಸಿದೆ. ಸಂಪುಟ ಪುನಾರಚನೆಯ ಗೊಂದಲಗಳು ಅಧಿವೇಶನದ ಮೇಲೋ ಅಥವಾ ಹೊಸ ಸಚಿವ ಇಲಾಖಾ ಜವಾಬ್ದಾರಿಗಳ ಮೇಲೋ ನಕಾರಾತ್ಮಕ ಪರಿಣಾಮ ಬೀರಬಾರದು ಎಂಬುದು ಸರ್ಕಾರದ ಲೆಕ್ಕಾಚಾರವಾಗಿದೆ. ಹಾಗಾಗಿ, ಜುಲೈ ಮತ್ತು ಆಗಸ್ಟ್‌ನಲ್ಲಿ ನಡೆಯಲಿರುವ ಈ ಅಧಿವೇಶನ ಮುಗಿದ ಬಳಿಕ, ಪ್ರಧಾನಿಯವರು ಕೆಲವು ದಿನಗಳ ಕಾಲ ತಾವೇ ಖುದ್ದಾಗಿ ಸಮಯ ತೆಗೆದುಕೊಂಡು, ಸಚಿವರ ಕಾರ್ಯಕ್ಷಮತೆಯನ್ನು ಮೌಲ್ಯಮಾಪನ ಮಾಡಿ ಆ ನಂತರವೇ ಅಂತಿಮವಾಗಿ ಕೇಂದ್ರ ಸಂಪುಟ ಪುನಾರಚನೆ ಎನ್ನಲಾಗಿದೆ. ಅಲ್ಲಿಯವರೆಗೆ ಸಚಿವ ಸ್ಥಾನದ ಆಕಾಂಕ್ಷಿಗಳು ಕಾಯುವುದು ಅನಿವಾರ್ಯವಾಗಿದೆ.

## ರಾಜ್ಯದಲ್ಲಿ ಚುರುಕುಗೊಂಡ ನೈಋತ್ಯ ಮುಂಗಾರು, ಜಲಾಶಯಗಳ ಒಳಹರಿವು ಹೆಚ್ಚಳ

• ಉದಯವಾಹಿನಿ, ಬೆಂಗಳೂರು


ರಾಜ್ಯದಲ್ಲಿ ನೈಋತ್ಯ ಮುಂಗಾರು ಮತ್ತೆ ಚುರುಕು ಪಡೆದುಕೊಂಡಿದ್ದು, ಕರಾವಳಿ, ಮಲೆನಾಡು ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಮಳೆಯಾಗುತ್ತಿದ್ದು, ಜಲಾಶಯಗಳಿಗೆ ಒಳಹರಿವು ಹೆಚ್ಚಾಗುತ್ತಿದ್ದು, ಜೀವಕಳೆ ಬಂದಂತಾಗಿದೆ.

ಕೊಡಗು ಜಿಲ್ಲೆಯಲ್ಲಿ ಕೊನೆಗೂ ಮಳೆ ವೇಗ ಪಡೆದುಕೊಂಡಿದ್ದು ಕಳೆದ ಕೆಲವು ದಿನಗಳಿಂದ ಮಳೆಯಾಗುತ್ತಿದೆ. ಎಡೆಬಿಡದೆ ಸುರಿಯುತ್ತಿರುವ ಮಳೆಯೊಂದಿಗೆ ಚಳಿಯ ಪ್ರಮಾಣವೂ ಹೆಚ್ಚಾಗಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ.ಹಾರಂಗಿ ಜಲಾಶಯಕ್ಕೆ 1.470 ಕ್ಯೂಸೆಕ್ ಒಳಹರಿವು ಬರುತ್ತಿದ್ದು, ರೈತರಲ್ಲಿ ಮಂದಹಾಸ ಮೂಡಿದೆ. ಜಲಾಶಯದ ಒಟ್ಟು ನೀರಿನ ಸಂಗ್ರಹ ಸಾಮರ್ಥ್ಯ 8.5 ಟಿಎಂಸಿಯಾಗಿದ್ದು, ಪ್ರಸ್ತುತ 2.7 ಟಿಎಂಸಿ ನೀರು ಸಂಗ್ರಹವಾಗಿದೆ.

ಮುಂಬರುವ ದಿನಗಳಲ್ಲಿ ಜಿಲ್ಲೆಯಲ್ಲಿ ಉತ್ತಮ ಮಳೆಯಾಗುವ ನಿರೀಕ್ಷೆಯಿದ್ದು, ಹಾರಂಗಿ ಜಲಾಶಯದ ನೀರಿನ ಮಟ್ಟ ಏರಿಕೆಯಾಗುವ ಸಾಧ್ಯತೆಯಿದೆ.ಮಡಿಕೇರಿ, ಸೋಮವಾರಪೇಟೆ, ವಿರಾಜಪೇಟೆ, ಕೊಡಗು ಸೇರಿದಂತೆ ಹಲವು ಭಾಗದಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿದೆ.

ಮಳೆಯ ಪರಿಣಾಮ ಕಾವೇರಿ ನದಿನೀರಿನ ಮಟ್ಟವು ನಿಧಾನವಾಗಿ ಏರುತ್ತಿದೆ. ಕೊಡಗಿನಲ್ಲಿ ನಿನ್ನೆ ಸಂಜೆ 7 ಗಂಟೆಗೆ ಪ್ರಾರಂಭವಾದ ಮಳೆಯಿಂದ ಜನಜೀವನ ಅಸ್ತವ್ಯಸ್ಥಗೊಂಡಿದೆ. ಮಡಿಕೇರಿ ನಗರ ಸೇರಿದಂತೆ ಸೋಮವಾರಪೇಟೆ, ವಿರಾಜಪೇಟೆ, ಮೂರ್ನಾಡು ಭಾಗಗಳಲ್ಲಿ ನಿರಂತರವಾಗಿ ಮಳೆಯಾಗುತ್ತಿದ್ದು, ಹಳ್ಳಕೊಳ್ಳಗಳು ತುಂಬಿ ಹರಿಯುತ್ತಿದ್ದು, ರಸ್ತೆಯೆಲ್ಲಾ ಕೆರೆಯಂತಾಗಿದೆ. ವಾಹನ ಸವಾರರಿಗೆ ತೊಂದರೆಯಾಗಿದೆ.

ಮಹಾರಾಷ್ಟ್ರದ ಕೊಂಕಣ ಭಾಗದಲ್ಲಿ ಮಳೆಯಾಗುತ್ತಿದ್ದು, ರಾಜಾಪುರ ಬ್ಯಾರೇಜ್‌ನಿಂದ ನೀರು ಹೊರಬಿಡಲಾಗುತ್ತಿದ್ದು, ಕೃಷ್ಣಾ, ದೂಧ್‌ಗಂಗಾ, ವೇದ್‌ಗಂಗಾ ನದಿಗಳಿಗೆ ನೀರು ಹರಿದುಬರುತ್ತಿದೆ. ಮಲಪ್ರಭಾ ನದಿಯಲ್ಲೂ



ನೀರಿನ ಮಟ್ಟ ಏರಿಕೆಯಾಗಿದೆ.ಕರಾವಳಿ ಭಾಗದಲ್ಲಿ ಮಳೆಯಾಗುತ್ತಿದ್ದು, ತುಂಗಭದ್ರಾ, ಅಘನಾಶಿನಿ, ಕಾಳಿ, ಶರಾವತಿ ನದಿಗಳಲ್ಲಿ ನೀರಿನ ಮಟ್ಟ ಕೊಂಚ ಏರಿಕೆಯಾಗಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಭಾರೀ ಮಳೆಯಾಗುತ್ತಿದೆ. ಬಾಳೆಹೊನ್ನೂರು, ಶೃಂಗೇರಿ, ಎನ್.ಆರ್.ಪುರ, ಕಳಸ ಭಾಗದಲ್ಲಿ ಮಳೆಯ ಆರ್ಭಟ ಜೋರಾಗಿದೆ. ವಿದ್ಯುತ್ ಕಂಬಗಳು, ಮರಗಳು ಧರೆಗುರುಳಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಶಿವಮೊಗ್ಗ, ಧಾರವಾಡ, ಹಾವೇರಿ, ಬೀದರ್, ಯಾದಗಿರಿ, ವಿಜಯಪುರ, ದ.ಕನ್ನಡ, ಉ.ಕನ್ನಡ ಸೇರಿದಂತೆ ಮತ್ತಿತರೆಡೆ ಮಳೆಯಾಗುತ್ತಿದೆ.

## ಬಿಎಂಟಿಸಿ ಬಸ್‌ಗಳಲ್ಲಿ ಟಿಕೆಟ್‌ಗಾಗಿ ಯುಪಿಐ ಪಾವತಿಯಲ್ಲಿ ಬದಲಾವಣೆ; ಸ್ಥಿರ ಕ್ಯೂಆರ್ ಕೋಡ್ ಬದಲು ಡೈನಾಮಿಕ್ ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು




ಬಸ್‌ಗಳಲ್ಲಿ ಟಿಕೆಟ್ ಪಡೆಯಲು ಈ ಹಿಂದೆ ಅಳವಡಿಸಲಾಗಿದ್ದ ಹಳೆಯ/ಸ್ಥಿರ ಕ್ಯೂಆರ್ ಕೋಡ್‌ಗಳನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಹಿಂಪಡೆದಿದೆ. ಪ್ರಯಾಣಿಕರಿಗೆ ಪಾರದರ್ಶಕ ಹಾಗೂ ಸುಲಭ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಕಲ್ಪಿಸುವ ಉದ್ದೇಶದಿಂದ ತನ್ನ ಎಲೆಕ್ಟ್ರಾನಿಕ್ ಟಿಕೆಟಿಂಗ್ ಯಂತ್ರ (ಇಟಿಎಂ)ಗಳ ಮೂಲಕ ಟಿಕೆಟ್ ಹಾಗೂ ದಿನದ ಪಾಸ್ ವಿತರಣೆ ವ್ಯವಸ್ಥೆಯನ್ನು ಬಿಎಂಟಿಸಿ ಒದಗಿಸಿದೆ.

ಬಿಎಂಟಿಸಿ ಚಾಲೋ ಸಂಸ್ಥೆಯ ಸಹಯೋಗದೊಂದಿಗೆ ನಿರ್ವಾಹಕರಿಗೆ ನೂತನ ಎಲೆಕ್ಟ್ರಾನಿಕ್ ಟಿಕೆಟಿಂಗ್ ಯಂತ್ರಗಳನ್ನು ನೀಡಲಾಗಿದ್ದು, ಅವುಗಳಲ್ಲಿ ಡೈನಾಮಿಕ್ ಕ್ಯೂಆರ್ ಕೋಡ್ ಆಧಾರಿತ ಯುಪಿಐ ಪಾವತಿ ವ್ಯವಸ್ಥೆ ಅಳವಡಿಸಲಾಗಿದೆ. ಪ್ರತಿ ಟಿಕೆಟ್ ವಹಿವಾಟಿಗೂ ಪ್ರತ್ಯೇಕ ಡೈನಾಮಿಕ್ ಕ್ಯೂಆರ್ ಕೋಡ್ ಸೃಷ್ಟಿಯಾಗುವುದರಿಂದ ಪ್ರಯಾಣಿಕರ ಪಾವತಿ ಸುರಕ್ಷಿತವಾಗಿ ಹಾಗೂ ಸರಿಯಾದ ಖಾತೆಗೆ ಜಮೆಯಾಗಲಿದೆ.

ಕೋವಿಡ್ ಸಂದರ್ಭದಲ್ಲಿ ಸಾಮಾಜಿಕ ಅಂತರ ಕಾಪಾಡಲು ನಗದು ರಹಿತ ಟಿಕೆಟಿಂಗ್ ವ್ಯವಸ್ಥೆ ಹಾಗೂ ನಿಗಮದ ಬಸ್‌ಗಳಲ್ಲಿ ಚಿಲ್ಲರೆ ಸಮಸ್ಯೆಯನ್ನು ಕಡಿಮೆ ಮಾಡಲು 2021ರಿಂದ ಬಿಎಂಟಿಸಿ ಬಸ್‌ಗಳಲ್ಲಿ ಕ್ಯೂ ಆರ್ ಕೋಡ್ ಆಧಾರಿತ ಯುಪಿಐ ಪಾವತಿ ವ್ಯವಸ್ಥೆಗೆ ಚಾಲನೆ ನೀಡಲಾಗಿತ್ತು. ಬಸ್‌ಗಳಲ್ಲಿ ಅಂಟಿಸಲಾಗಿದ್ದ ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಪ್ರಯಾಣಿಕರು ತಮ್ಮ ಟಿಕೆಟ್ ಹಣ ಪಾವತಿಸಲು ಅವಕಾಶ ಕಲ್ಪಿಸಲಾಗಿತ್ತು. ಆರಂಭದಿಂದಲೂ ಈ ವ್ಯವಸ್ಥೆಗೆ ಪ್ರಯಾಣಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿತ್ತು. ಆದರೆ ಪ್ರಯಾಣಿಕರ ದಟ್ಟಣೆ ಹೆಚ್ಚಾಗಿದ್ದಾಗ ಸಮಯದ ಕೊರತೆ ಹಾಗೂ ನೆಟ್‌ವರ್ಕ್ ಸಮಸ್ಯೆಯಿಂದ ಟಿಕೆಟ್ ವಿತರಣೆ ವಿಳಂಬದಂತಹ ಸಮಸ್ಯೆಗಳು ತಲೆದೋರಲಾರಂಭಿಸಿದ್ದವು.ಆದ್ದರಿಂದ ಈಗ ಡೈನಾಮಿಕ್ ಕ್ಯೂಆರ್ ಕೋಡ್ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ. ಪ್ರಯಾಣಿಕರ ಮಾರ್ಗದ ವಿವರಗಳನ್ನು ನಮೂದಿಸಿದ ಬಳಿಕ ನಿರ್ವಾಹಕರ ಬಳಿಯಿರುವ ಎಲೆಕ್ಟ್ರಾನಿಕ್ ಟಿಕೆಟ್ ಮಷಿನ್ (ಇಟಿಎಂ)ನಲ್ಲಿಯೇ ಕ್ಯೂಆರ್ ಕೋಡ್ ಪ್ರದರ್ಶನವಾಗಲಿದ್ದು, ಅದನ್ನು ಸ್ಕ್ಯಾನ್ ಮಾಡುವ ಮೂಲಕ ಪ್ರಯಾಣಿಕರು ತಮ್ಮ ಟಿಕೆಟ್ ಹಣ ಪಾವತಿಸಬಹುದು. ಹಣ ಸ್ವೀಕೃತಗೊಳ್ಳುತ್ತಿದ್ದಂತೆ ಟಿಕೆಟ್ ಲಭ್ಯವಾಗಲಿದೆ. ಈ ಹಿನ್ನೆಲೆಯಲ್ಲಿ ಎಲ್ಲಾ ಪ್ರಯಾಣಿಕರು ಯುಪಿಐ ಮೂಲಕ ಪಾವತಿ ಮಾಡುವಾಗ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಬಿಎಂಟಿಸಿ ತಿಳಿಸಿದೆ.

ಇಟಿಎಂನಲ್ಲಿ ಪ್ರದರ್ಶವಾಗುವ ಡೈನಾಮಿಕ್ ಕ್ಯೂಆರ್ ಕೋಡ್ ಪ್ರತಿಯೊಂದು ವಹಿವಾಟಿಗೂ ಪ್ರತ್ಯೇಕವಾಗಿರುವುದರಿಂದ ಹಣ ತಪ್ಪು ಖಾತೆಗೆ ಹೋಗುವ ಸಾಧ್ಯತೆ ಇರುವುದಿಲ್ಲ. ಇದರಿಂದ ಡಿಜಿಟಲ್ ವಹಿವಾಟಿನಲ್ಲಿ ಹೆಚ್ಚಿನ ಸುರಕ್ಷತೆ, ಪಾರದರ್ಶಕತೆ ಹಾಗೂ ವಿಶ್ವಾಸಾರ್ಹತೆ ಖಾತ್ರಿಯಾಗುತ್ತದೆ. ಪ್ರಯಾಣಿಕರಿಗೆ ಅತ್ಯಾಧುನಿಕ ಹಾಗೂ ಸುರಕ್ಷಿತ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಬಿಎಂಟಿಸಿ ನಿರಂತರವಾಗಿ ಡಿಜಿಟಲ್ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುತ್ತಿದೆ.

# ಆಯೋಗದ ಆದೇಶಕ್ಕೆ ಕ್ಯಾರೆ ಎನ್ನದ ಬಿಎಲ್‌ಒಗಳು : ಮುಂದುವರೆದ ಅಕ್ರಮ

**ಕ್ಯಾರೆ ಎನ್ನದ ಬಿಎಲ್‌ಒಗಳು ಮತ್ತೆ ರಾಜ್ಯದ ನಾನಾ ಕಡೆ ಈ ಹಿಂದೆ ನಡೆಸಿದಂತೆ ಗುಂಪು ಪ್ರಕ್ರಿಯೆ ಮೂಲಕ ಎಸ್‌ಐಆರ್ ನಡೆಸುತ್ತಿರುವುದು ಬೆಳಕಿಗೆ ಬಂದಿದೆ.**

• ಉದಯವಾಹಿನಿ, ಬೆಂಗಳೂರು

ಚುನಾವಣಾ ಆಯೋಗದ ಕಟ್ಟುನಿಟ್ಟಿನ ನಿರ್ದೇಶನದ ಹೊರತಾಗಿಯೂ ರಾಜ್ಯದ ನಾನಾ ಕಡೆ ಮತ್ತೆ ಮತದಾರರ ವಿಶೇಷ ತೀವ್ರ ಪರಿಷ್ಕರಣೆ(ಎಸ್‌ಐಆರ್)ಯಲ್ಲಿ ಪುನಃ ಅಕ್ರಮಗಳ ಸರಮಾಲೆ ಮುಂದುವರೆದಿದೆ. ನಿಗದಿಪಡಿಸಿದ ಸ್ಥಳದಲ್ಲೇ ಎಸ್‌ಐಆರ್ ನಡೆಸಬೇಕೆಂದು ಚುನಾವಣಾ ಆಯೋಗ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಕೆಳಹಂತದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿತ್ತು. ಆದರೆ ಆಯೋಗದ ನಿರ್ದೇಶನಕ್ಕೆ ಕ್ಯಾರೆ ಎನ್ನದ ಬಿಎಲ್‌ಒಗಳು ಮತ್ತೆ ರಾಜ್ಯದ ನಾನಾ ಕಡೆ ಈ ಹಿಂದೆ ನಡೆಸಿದಂತೆ ಗುಂಪು ಪ್ರಕ್ರಿಯೆ ಮೂಲಕ ಎಸ್‌ಐಆರ್ ನಡೆಸುತ್ತಿರುವುದು ಬೆಳಕಿಗೆ ಬಂದಿದೆ.

ಬೆಂಗಳೂರಿನ ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ನಾನಾ ಕಡೆ ಬಿಎಲ್‌ಒ ಅಧಿಕಾರಿಗಳು ಅಂಗನವಾಡಿಗೆ ಸಾಮೂಹಿಕವಾಗಿ ಕರೆಸಿಕೊಂಡು ನಮೂನೆಗಳನ್ನು ಭರ್ತಿ ಮಾಡಿಕೊಳ್ಳುತ್ತಿರುವ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.ವಿಜಪುರ ಜಿಲ್ಲೆಯಲ್ಲೂ ಇದೇ ರೀತಿ ಬಿಎಲ್‌ಒಗಳು ಮನೆ ಮನೆಗೆ ತೆರಳದೆ ಅಂಗನವಾಡಿ ಕೇಂದ್ರದಲ್ಲಿ ಮತದಾರರನ್ನು ಸಾಮೂಹಿಕವಾಗಿ ಕೂರಿಸಿಕೊಂಡು ನಮೂನೆಗಳನ್ನು ಭರ್ತಿ ಮಾಡಿಕೊಳ್ಳುತ್ತಿದ್ದರು. ಚಿಕ್ಕಮಗಳೂರಿನಲ್ಲೂ ಇದೇ




ರೀತಿ ಸಾಮೂಹಿಕವಾಗಿ ಎಸ್‌ಐಆರ್ ಪ್ರಕ್ರಿಯೆ ನಡೆಸಿರುವುದು ಬೆಳಕಿಗೆ ಬಂದಿದೆ. ಇಲ್ಲಿನ ಅಂಗನವಾಡಿ ಕೇಂದ್ರದಲ್ಲಿ ಸುಮಾರು 200ಕ್ಕೂ ಹೆಚ್ಚು ಮತದಾರರನ್ನು ಏಕಕಾಲಕ್ಕೆ ಬಿಎಲ್‌ಒ ಅಧಿಕಾರಿಗಳು ಕರೆಸಿಕೊಂಡು ನಮೂನೆಗಳನ್ನು ಭರ್ತಿ ಮಾಡಿಕೊಂಡಿದ್ದಾರೆ. ಹೀಗೆ ರಾಜ್ಯದ ನಾನಾ ಕಡೆ ಶನಿವಾರವೂ ಎಸ್‌ಐಆರ್ ಪ್ರಕ್ರಿಯೆ ಒಂದು ರೀತಿ ಹೇಳುವವರು, ಕೇಳುವವರು ಇಲ್ಲದಂತೆ ಬೇಕಾಬಿಟ್ಟಿಯಾಗಿ ನಡೆಯುತ್ತಿರುವುದು ಪ್ರತಿಪಕ್ಷಗಳ ಆರೋಪಕ್ಕೆ ಮತ್ತೆ ಪುಷ್ಟಿ ನೀಡುವಂತಿದೆ. ಮೂಲಗಳ ಪ್ರಕಾರ ಆಯೋಗದ ನಿರ್ದೇಶನಕ್ಕೆ ಕವಡೆ ಕಾಸಿನ ಕಿಮ್ಮತ್ತು-ಬೆಲೆ ಕೊಡದೆ ಅಧಿಕಾರಿಗಳು ಸ್ಥಳೀಯ ರಾಜಕೀಯ ನಾಯಕರ ಪ್ರಭಾವಕ್ಕೆ ಒಳಗಾಗಿ ಎಲ್ಲೆಂದರಲ್ಲಿ ಈ ಪ್ರಕ್ರಿಯೆಯನ್ನು ನಡೆಸುತ್ತಿದ್ದಾರೆ ಎಂಬ ದೂರುಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಶಾಸಕರು ಬಿಎಲ್‌ಒಗಳ ಮೇಲೆ ಹೆಚ್ಚಿನ ಪ್ರಭಾವ ಬೀರುತ್ತಿದ್ದು, ತಾವು ಸೂಚಿಸಿದ ಸ್ಥಳದಲ್ಲಿ ಗಣತಿ ನಮೂನೆಗಳನ್ನು ಭರ್ತಿ ಮಾಡಿಸಿಕೊಳ್ಳಬೇಕು. ನಾವು ನಿಗದಿಪಡಿಸಿದ ಸ್ಥಳಕ್ಕೆ ಬಂದು ಪ್ರಕ್ರಿಯೆ ನಡೆಸದಿದ್ದರೆ ಕ್ರಮ ಜರುಗಿಸುತ್ತೇವೆ ಎಂಬ ಬೆದರಿಕೆಯನ್ನು ಪರೋಕ್ಷವಾಗಿ ಒಡ್ಡುತ್ತಿದ್ದಾರೆ ಎನ್ನಲಾಗಿದೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಬಹುತೇಕ ಶಿಕ್ಷಕರು, ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸೇರಿದಂತೆ ಸರ್ಕಾರದ ಬಹುತೇಕ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಇದರಲ್ಲಿ ಭಾಗಿಯಾಗಿದ್ದಾರೆ. ಆಯೋಗದ ನಿರ್ದೇಶನವನ್ನು ಪಾಲನೆ ಮಾಡಲು ಸ್ಥಳೀಯ ಶಾಸಕರೇ ಬಿಎಲ್‌ಒಗಳಿಗೆ ತೊಡರುಗಾಲಾಗಿ ಪರಿಣಮಿಸಿದ್ದಾರೆ ಎಂಬುದು ಬಹುತೇಕರ ಅಳಲು. ಒಂದು ವೇಳೆ ನಮ ಮಾತು ಪಾಲನೆ ಮಾಡದಿದ್ದರೆ ಎಸ್‌ಐಆರ್ ಮುಗಿದ ನಂತರ ನೋಡಿಕೊಳ್ಳುತ್ತೇವೆ ಇನ್ನು ಮುಂತಾದ ಬೆದರಿಕೆ ಮಾತುಗಳನ್ನು ಒಡ್ಡಲಾಗುತ್ತಿದೆ ಎಂದು ಹೆಸರು ಹೇಳಲಿಚ್ಛಿಸದ ಅನೇಕರು ತಮ ನೋವು ತೋಡಿಕೊಂಡಿದ್ದಾರೆ.

### ಮನೆಗೆ ಹೋಗದ ಅಧಿಕಾರಿಗಳು

ರಾಜ್ಯದ ಬಹುತೇಕ ಕಡೆ ಬಿಎಲ್‌ಒ ಅಧಿಕಾರಿಗಳು ಮನೆ ಮನೆಗೆ ತೆರಳದೆ ಅಂಗನವಾಡಿ, ಕಲ್ಯಾಣ ಮಂಟಪ , ಖಾಸಗಿ ಕಟ್ಟಡಗಳಲ್ಲೇ ಎಸ್‌ಐಆರ್ ಪ್ರಕ್ರಿಯೆಯನ್ನು ನಡೆಸುತ್ತಿರುವ ದೃಶ್ಯ ಎಲ್ಲೆಡೆ ಸರ್ವೇಸಾಮಾನ್ಯವಾಗಿ ಕಂಡುಬರುತ್ತಿದೆ.

ಮನೆ ಮನೆಗೆ ಕಡ್ಡಾಯವಾಗಿ ತೆರಳಬೇಕೆಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಕಟ್ಟುನಿಟ್ಟಿನ ಸೂಚನೆಯನ್ನು ಬಿಎಲ್‌ಒಗಳಿಗೆ ನೀಡಿದ್ದರು. ಇದ್ಯಾವುದಕ್ಕೂ ಸೊಪ್ಪು ಹಾಕದ ಅಧಿಕಾರಿಗಳು ಆಯೋಗ ನಿಗದಿಪಡಿಸಿದ ಸ್ಥಳವನ್ನು ಬಿಟ್ಟು ತಮಗೆ ಅನುಕೂಲಕರವಾದ ಸ್ಥಳದಲ್ಲಿ ಈ ಪ್ರಕ್ರಿಯೆಯನ್ನು ನಡೆಸುತ್ತಿದ್ದಾರೆ.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 14,673/Gram 24ct ₹13,450/Gram 22ct ಬೆಳ್ಳಿ: ₹250.00/Gram

# ಸಚಿವ ಸ್ಥಾನ ನೀಡುವಂತೆ ಜಮೀರ್ ಮುಖವಾಡ ಧರಿಸಿ ವಿನೂತನ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಹಾಗೂ ಚಾಮರಾಜಪೇಟೆ ಶಾಸಕ ಬಿ.ಜೆಡ್.ಜಮೀರ್ ಅಹಮದ್ ಖಾನ್ ಅವರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಚಿವ ಸಂಪುಟದಲ್ಲಿ ಅಹಿಂದ ಕೋಟಾದಡಿ ಸಚಿವ ಸ್ಥಾನ ನೀಡಬೇಕೆಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಮುಖಂಡರು ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಜಮೀರ್ ಅವರ ಮುಖವಾಡ ಧರಿಸಿ ದಲಿತ ನಾಯಕರು ಗಮನ ಸೆಳೆದರು. ಪ್ರೆಸ್ ಕ್ಲಬ್ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕರಾದ ಎನ್. ಶಂಕರ್, ಜಿ ಮದಿಯರಸನ್ ಹಾಗೂ ದಲಿತ ಸಮುದಾಯದ ಮುಖಂಡರು ಜಮೀರ್ ಖಾನ್ ಅವರಿಗೆ ಅಖಂಡ ಬೆಂಬಲ ವ್ಯಕ್ತಪಡಿಸಿದರು.ರಾಜ್ಯ ಸಂಚಾಲಕ ಎನ್. ಶಂಕರ್ ಮಾತನಾಡಿ, ಶಾಸಕ ಬಿ.ಜೆ. ಜಮೀರ್


ಉದಯವಾಹಿನಿ ಚಿತ್ರ

ಅಹಮದ್ ಖಾನ್ ಬಡವರ ಪರವಾಗಿ ನಿರಂತರವಾಗಿ ಕೆಲಸ ಮಾಡಿರುವ ಜನನಾಯಕರು. ಜಾತಿ, ಧರ್ಮ ಭೇದವಿಲ್ಲದೇ, ಹಿಂದೂ, ಮುಸ್ಲಿಂ, ಕ್ರೈಸ್ತ ಸೇರಿದಂತೆ ಎಲ್ಲಾ ಸಮುದಾಯಗಳ ಜನರ ವಿಶ್ವಾಸ ಹಾಗೂ ಪ್ರೀತಿಯನ್ನು ಅವರು ಗಳಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ವಸತಿ ಸಚಿವರಾಗಿ ಕಾರ್ಯನಿರ್ವಹಿಸಿದ ವೇಳೆ ಸಹಸ್ರಾರು ಬಡ ಕುಟುಂಬಗಳಿಗೆ ಸೂರು ಕಲ್ಪಿಸುವ ಮೂಲಕ ಜನಪರ ಆಡಳಿತ ನೀಡಿದ್ದರು. ಅವರ ಅನುಭವ ಹಾಗೂ ಜನಸೇವೆಯನ್ನು ಪರಿಗಣಿಸಿ ಮತ್ತೆ ಸಚಿವ ಸಂಪುಟದಲ್ಲಿ ಅವಕಾಶ ನೀಡಬೇಕು ಎಂದು ಅವರು ಆಗ್ರಹಿಸಿದರು.

ಈ ಹಿನ್ನೆಲೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರಿಗೆ ಮನವಿ ಸಲ್ಲಿಸಲಾಗುತ್ತಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ಅಹಿಂದ ವರ್ಗದ ಜನಸಂಖ್ಯೆ ಗಣನೀಯ ಪ್ರಮಾಣದಲ್ಲಿದ್ದು, ಜಮೀರ್ ಅಹಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವುದರಿಂದ ಅಹಿಂದ ಸಮುದಾಯಕ್ಕೆ ಮತ್ತಷ್ಟು ಬಲ ದೊರೆಯಲಿದೆ. ಜೊತೆಗೆ ಪ್ರಾತಿನಿಧ್ಯ ದೊರೆಯುವುದರ ಜೊತೆಗೆ ಕಾಂಗ್ರೆಸ್ ಪಕ್ಷಕ್ಕೂ ರಾಜಕೀಯವಾಗಿ ಅನುಕೂಲವಾಗಲಿದೆ ಎಂದು ಸಮಿತಿಯ ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದರು.

ಬೆಂಗಳೂರು ಪ್ರೆಸ್ ಕ್ಲಬ್‌ನಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ವತಿಯಿಂದ ಶಾಸಕ ಬಿ.ಜೆ. ಜಮೀರ್ ಅಹಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಅವರ ಮುಖವಾಡ ಧರಿಸಿ ವಿನೂತನ ಪ್ರತಿಭಟನೆ ನಡೆಸಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಸಂಚಾಲಕ ಎನ್. ಶಂಕರ್ ಸೇರಿದಂತೆ ಸಮಿತಿಯ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

## ಲಕ್ಷ್ಮಿ' ದೇವಿ ಬಗ್ಗೆ ಕೆಟ್ಟ ಪದ ಬಳಕೆ: ಆರ್ಯವರ್ಧನ್ ಗುರೂಜಿ ವಿರುದ್ಧ ದೂರು ದಾಖಲು!

• ಉದಯವಾಹಿನಿ, ಬೆಂಗಳೂರು

ಲಕ್ಷ್ಮಿ ದೇವತೆ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಆರ್ಯವರ್ಧನ ಗುರೂಜಿ ವಿರುದ್ಧ ದೂರು ನೀಡಲಾಗಿದೆ. ಬೆಂಗಳೂರಿನ ಶಂಕರಪುರಂ ಪೊಲೀಸ್ ಠಾಣೆಗೆ ಕರ್ನಾಟಕ ಗೋರಕ್ಷಕರ ಸೇನೆ ದೂರು ನೀಡಿದ್ದು ಗುರೂಜಿ ಹೇಳಿಕೆಯಿಂದ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗಿದೆ ಹೀಗಾಗಿ ಆರ್ಯವರ್ಧನ ಗುರೂಜಿ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಲಾಗಿದೆ. ಸಂದರ್ಶನವೊಂದರಲ್ಲಿ ಲಕ್ಷ್ಮಿ ದೇವರ ಬಗ್ಗೆ ಗುರೂಜಿ ಹೇಳಿಕೆ ನೀಡಿದ್ದರು. ಸಾಮಾಜಿಕ ಜಾಲತಾಣದಲ್ಲಿ ಆರ್ಯವರ್ಧನ ಗುರೂಜಿ ಹೇಳಿಕೆ ವೈರಲ್ ಆಗಿದೆ. ದೂರಿನಲ್ಲಿ, ಅವರು ಮಾನವ ದೇಹದ ಒಂದು ಅಂಗವನ್ನು ಉಲ್ಲೇಖಿಸಿ ಪೂಜೆ ಮಾಡಬೇಕು ಎಂಬ ಅರ್ಥ ಬರುವಂತೆ ಮಾತನಾಡಿದ್ದಾರೆ ಎಂದು ಉಲ್ಲೇಖಿಸಲಾಗಿದೆ. ಅವರ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಶಂಕರಪುರಂ ಠಾಣೆಗೆ ಗೋ ರಕ್ಷಕರ ಸೇನೆ ದೂರು ನೀಡಿದೆ.

## ಶ್ರೀಚನ್ನರಾಯಸ್ವಾಮಿಯ ದೇವಾಲಯದ ನೂತನ ರಾಜಗೋಪುರ ಕುಂಭಾಭೀಷೇಕವು ಹೋಮ ಹವನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಹದೇವಪುರ

ವರ್ತೂರಿನಲ್ಲಿರುವ ಚೋಳರ ಕಾಲದ ಪುರಾತನ ಪ್ರಸಿದ್ಧ ಶ್ರೀಭೂನೀಳಾ ಸಮೇತ ಶ್ರೀಚನ್ನರಾಯಸ್ವಾಮಿಯ ದೇವಾಲಯದ ನೂತನ ರಾಜಗೋಪುರ ಕುಂಭಾಭಿಷೇಕವು ಹೋಮ ಹವನ ದೊಂದಿಗೆ ಶಾಸ್ತ್ರೋಕ್ತವಾಗಿ ನೇರವೇರಿದೆ.

ಕಳೆದ ಮೂರು ದಿನಗಳಿಂದ ದೇವಾಲಯದ ಆವರಣದಲ್ಲಿ ವೈದಿಕ ಸಂಪ್ರದಾಯದಂತೆ ಯಾಗ, ಹೋಮಗಳ ಮಾಡುವ ಮೂಲಕ ವಿವಿಧ ಪೂಜಾ ಕೈಂಕರ್ಯಗಳು ನಡೆದವು. ವಿವಿಧ ಪವಿತ್ರ ನದಿಗಳಿಂದ ತಂದಿರುವ ನೀರಿನಲ್ಲಿ ಚಿನ್ನ, ಬೆಳ್ಳಿ ಅಥವಾ ತಾಮ್ರದ ಕುಂಭಗಳಲ್ಲಿ (ಕಲಶ) ಇರಿಸಿ, ಮಂತ್ರಗಳನ್ನು ಪಠಿಸಿ ದೈವಿಕ ಶಕ್ತಿಯನ್ನು ಆವಾಹನೆ ಮಾಡಲಾಯಿತುಗ್ರಾಮದ ನೂರಾರು ಮಹಿಳೆಯರು ಊರಿನ ಪ್ರಮುಖ ಬೀದಿಗಳಲ್ಲಿ ಕಳಸ ಹೊತ್ತು ದೇವರಿಗೆ ಶ್ರದ್ಧಾಭಕ್ತಿಯಿಂದ ವಿಶೇಷ ಪೂಜೆ ನೆರವೇರಿಸಿದರು. ಪವಿತ್ರ ಕಲಶಗಳಿಂದ ತುಂಬಿದ ನೀರು ದೇವಸ್ಥಾನದ ಗೋಪುರದ ಮೇಲೆ ಮತ್ತು ಮೂಲ ವಿಗ್ರಹಕ್ಕೆ ಅಭಿಷೇಕ ಮಾಡಲಾಯಿತು.

ರಾಜಗೋಪುರ ನಿರ್ಮಾಣದಿಂದ ದೈವಿಕ ಶಕ್ತಿ ಹೆಚ್ಚಾಗಲಿದ್ದು ಗ್ರಾಮದಲ್ಲಿ ಶಾಂತಿ ನೆಲೆಸಲಿದೆ ಎನ್ನುವ ಪ್ರತೀತಿ ಇದೆ, ಅಲ್ಲದೆ ದೇವಸ್ಥಾನ ಪ್ರಧಾನ ಅರ್ಚಕರಾಗಿದ್ದ ದಿವಂಗತ ಅನಂತ ರವರ ಆಶಯದಂತೆ ವರ್ತೂರು ಗ್ರಾಮದ ಸುತ್ತಮುತ್ತಲಿನ ಗ್ರಾಮಗಳ ದಾನಿಗಳ ನೆರವಿನಿಂದ ರಾಜಗೋಪುರ ನಿರ್ಮಾಣ ಮಾಡಲಾಗಿದೆ ಎಂದು ಸಮಿತಿಯ ಸದಸ್ಯರು ತಿಳಿಸಿದ್ದಾರೆ.

ದೇವಸ್ಥಾನ ಸಮಿತಿ ವತಿಯಿಂದ ಕುಂಭಾಭಿಷೇಕ ಆಗಮಿಸಿದ ಸಾವಿರಾರು ಭಕ್ತರಿಗೆ ಅನ್ನದಾನ ಏರ್ಪಡಿಸಲಾಗಿತ್ತು. ಮಾಜಿ ಸಚಿವ ಅರವಿಂದ ಲಿಂಬಾವಳಿ, ಎಚ್.ನಾಗೇಶ್, ಶಾಸಕಿ ಮಂಜುಳಾ ಲಿಂಬಾವಳಿ, ಮುಖಂಡರಾದ ರಾಜಾರೆಡ್ಡಿ, ಜೈ ಶ್ರೀರಾಮ್ ಸೇವಾ ಸಮಿತಿ ಅಧ್ಯಕ್ಷ ಕುಪ್ಪಿ ಮಂಜುನಾಥ್, ಭಂಗಿ ಮಂಜುನಾಥ್, ಕೆ.ಎನ್ ಚಿಕ್ಕಣ್ಣ, ಕೆ ಮಂಜುನಾಥ್, ಪಿ ಸುಬ್ಬಣ್ಣ, ಸ್ವಾತಿ ಸುರೇಶ್, ಎನ್ ಜಗದೀಶ್, ವೆಂಕಟರೆಡ್ಡಿ, ಪಿ ಕೃಷ್ಣಪ್ಪ, ಟಿ. ಶ್ರೀಧರ್, ಎಲ್ ಶ್ರೀನಿವಾಸ್ ರೆಡ್ಡಿ, ಪ್ರಧಾನ ಅರ್ಚಕರಾದ ನಾಗರಾಜ್ ಇದ್ದರೂ.

## ಎಲ್ ನಿನೊ ಪರಿಣಾಮದಿಂದ ಜಲ ವಿದ್ಯುತ್ ಉತ್ಪಾದನೆ ಕುಸಿತ ಸಾಧ್ಯತೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಎಲ್ ನಿನೊ ಪರಿಣಾಮದಿಂದಾಗಿ ಜಲ ವಿದ್ಯುತ್ ಉತ್ಪಾದನೆ ಕುಸಿಯುವ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು ವಿಶೇಷ ತುರ್ತು ಕಾರ್ಯಯೋಜನೆ ರೂಪಿಸುವ ಜೊತೆಗೆ ಸಂಗ್ರಹಣೆ ಮತ್ತು ಇತರೆ ಮೂಲಗಳ ಉತ್ಪಾದನೆಗೆ ತುರ್ತು ಗಮನ ಹರಿಸಿ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಸೂಚನೆ ನೀಡಿದರು.

ಮೊದಲ ಬಾರಿ ಇಂಧನ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದ ಮುಖ್ಯಮಂತ್ರಿಗಳು ಬರಗಾಲದ ಪರಿಸ್ಥಿತಿ ಎದುರಿಸಲು ಇಲಾಖೆ ಏನೇನು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದೆ ಎನ್ನುವ ಬಗ್ಗೆ ವಿವರಗಳನ್ನು ಪಡೆದು ಸಾರ್ವಜನಿಕ ಬಳಕೆಗೆ ತೊಂದರೆ ಆಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು.ಇಂಧನ ಭದ್ರತೆಗಾಗಿ ಸರ್ಕಾರಕ್ಕೆ ಮೀಸಲಾದ ಕಲ್ಲಿದ್ದಲು ಗಣಿಗಳನ್ನು ಕಾರ್ಯಾರಂಭಗೊಳಿಸಿ, ಸಾಕಷ್ಟು ಕಲ್ಲಿದ್ದಲು ಸಂಗ್ರಹವನ್ನು ನಿರಂತರವಾಗಿ ಕಾಯ್ದುಕೊಳ್ಳಬೇಕು ಎಂದು ಸೂಚನೆ ನೀಡಿದರು. ಹಿಂದಿನ ವರ್ಷಕ್ಕೆ ಹೋಲಿಸಿದರೆ ಸದ್ಯ ನಮ್ಮಲ್ಲಿ ವಿದ್ಯುತ್ ಸಂಗ್ರಹಣಾ ಸ್ಥಿತಿ ಸುಸ್ಥಿತಿಯಲ್ಲಿದೆ. ಹಿಂದಿನ ಮೂರು ವರ್ಷ ವಿದ್ಯುತ್ ಕಡಿತ ಇಲ್ಲದೆ ನಿರ್ವಹಿಸಿದ್ದೇವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

## ಬಾಂಗ್ಲಾದೇಶಿಯರನ್ನು ಮತದಾರರ ಪಟ್ಟಿಗೆ ಸೇರಿಸಲು ಕಾಂಗ್ರೆಸ್ ಸರ್ಕಾರ ಯತ್ನಿಸುತ್ತಿದೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಚುನಾವಣಾ ಆಯೋಗದ ಪರಿಶೀಲನಾ ಪ್ರಕ್ರಿಯೆಯ ಭಾರಿ ಪ್ರಮಾಣದ ಉಲ್ಲಂಘನೆಗಳ ಮೂಲಕ ಅಕ್ರಮ ಬಾಂಗ್ಲಾದೇಶಿ ವಲಸಿಗರನ್ನು ಮತದಾರರಾಗಿ ನೋಂದಾಯಿಸಲು ಕಾಂಗ್ರೆಸ್ ಸರ್ಕಾರ ಅವಕಾಶ ಮಾಡಿಕೊಡುತ್ತಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ಈ ಸಂಬಂಧ ದಾಖಲೆ ಆಧಾರಗಳನ್ನು ಭಾರತದ ಚುನಾವಣಾ ಆಯೋಗಕ್ಕೆ ಸಲ್ಲಿಸಿ, ಹೊಣೆಗಾರರ ವಿರುದ್ಧ ಕ್ರಿಮಿನಲ್ ಕ್ರಮ ಕೈಗೊಳ್ಳುವಂತೆ ಮನವಿ ಮಾಡುವುದಾಗಿ ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಆರ್ ಅಶೋಕ್, ಕರ್ನಾಟಕದಲ್ಲಿ, ಅದರಲ್ಲೂ ಬೆಂಗಳೂರು, ಕೊಡಗು, ಚಿಕ್ಕಮಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಸುಮಾರು 20ರಿಂದ 25 ಲಕ್ಷದವರೆಗೆ ಅಕ್ರಮ ಬಾಂಗ್ಲಾದೇಶಿ ವಲಸಿಗರು ನೆಲೆಸಿದ್ದಾರೆ ಎಂದು ಬಿಜೆಪಿ ಅಂದಾಜಿಸಿದೆ ಎಂದು ಹೇಳಿದರು. ಇವರು ಕಾಫಿ ತೋಟಗಳು, ಕಾರ್ಖಾನೆಗಳು ಹಾಗೂ ಇತರ ಕ್ಷೇತ್ರಗಳಲ್ಲಿ ಉದ್ಯೋಗದಲ್ಲಿದ್ದಾರೆ. ಬೆಂಗಳೂರು ಹೊರವಲಯದ ಕೋಗಿಲು ಪ್ರದೇಶದಲ್ಲಿರುವ ಸುಮಾರು 15 ಎಕರೆ ಭೂಮಿಯನ್ನು ಅಕ್ರಮ ಬಾಂಗ್ಲಾದೇಶಿ ವಲಸಿಗರಿಗಾಗಿ ನೂರಾರು ವಸತಿ ನಿವೇಶನಗಳಾಗಿ ಪರಿವರ್ತಿಸಲಾಗಿತ್ತು ಎಂದು ಆರೋಪಿಸಿದ ಅವರು, ಬಿಜೆಪಿ ನಡೆಸಿದ ಪ್ರತಿಭಟನೆಗಳ ಪರಿಣಾಮವಾಗಿ ಅಧಿಕಾರಿಗಳು ಆ ವಸತಿ ಪ್ರದೇಶವನ್ನು ತೆರವುಗೊಳಿಸಿದ್ದಾರೆ ಎಂದು ಹೇಳಿದರು.

# 'ಸೇಫ್ ಫುಟ್‌ಪಾತ್' ಅಭಿಯಾನ: ಒತ್ತುವರಿ ತೆರವು

## ಅಭಿಯಾನದ ಪ್ರಗತಿಯನ್ನು ಪರಿಶೀಲಿಸಿದ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಭೈರೇಗೌಡ


• ಉದಯವಾಹಿನಿ, ಬೆಂಗಳೂರು

'ಸೇಫ್ ಫುಟ್‌ಪಾತ್' ಅಭಿಯಾನವು ಇಂದು ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ನಗರದಾದ್ಯಂತ ಅತಿಕ್ರಮಣಕ್ಕೊಳಗಾಗಿದ್ದ 202.7 ಕಿಲೋ ಮೀಟರ್ ಪಾದಚಾರಿ ಮಾರ್ಗಗಳನ್ನು ನಾಗರಿಕ ಸಂಸ್ಥೆಗಳು 4 ದಿನಗಳಲ್ಲಿ ತೆರವುಗೊಳಿಸಿವೆ. ಈ ಕಾರ್ಯಾಚರಣೆಯು ಮುಖ್ಯವಾಗಿ ಪಾದಚಾರಿಗಳ ಓಡಾಟಕ್ಕೆ ಅಡ್ಡಿಯಾಗುವ ಭೌತಿಕ ಅತಿಕ್ರಮಣಗಳನ್ನು ತೆರವುಗೊಳಿಸುವುದರ ಮೇಲೆ ಕೇಂದ್ರೀಕರಿಸಿದ್ದು, ಇದು ಕೇವಲ ಬೀದಿಬದಿ ವ್ಯಾಪಾರಿಗಳನ್ನು ಗುರಿಯಾಗಿಸಿಕೊಂಡ ಅಭಿಯಾನವಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನ ಐದು ನಗರ ನಿಗಮಗಳ ವ್ಯಾಪ್ತಿಯಲ್ಲಿ ಒಟ್ಟು 61.45 ಕಿ.ಮೀ. ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಲಾಗಿದ್ದು, ಅಭಿಯಾನ ಆರಂಭವಾದ ಬಳಿಕ ಇದುವರೆಗೆ ತೆರವುಗೊಳಿಸಿರುವ ಒಟ್ಟು ಅತಿಕ್ರಮಿತ ಪಾದಚಾರಿ ಮಾರ್ಗಗಳ ಉದ್ದ 202 ಕಿ.ಮೀ.ಗಿಂತ ಹೆಚ್ಚಾಗಿದೆ.

ಮೊದಲ ಎರಡು ದಿನಗಳಲ್ಲಿ 141 ಕಿ.ಮೀ. ಅತಿಕ್ರಮಿತ ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ವೇಳೆ ಸಣ್ಣ ಅಂಗಡಿಗಳು, ತಳ್ಳುಗಾಡಿಗಳು, ಮೇಲ್ಛಾವಣಿ ರಚನೆಗಳು, ಶೆಡ್‌ಗಳು ಹಾಗೂ ರ್‍ಯಾಂಪ್ ಗಳನ್ನು ತೆರವುಗೊಳಿಸಲಾಯಿತು. ಕೆಲವು ನಗರ ನಿಗಮಗಳು ಸಾರ್ವಜನಿಕ ಪಾದಚಾರಿ ಮಾರ್ಗಗಳಲ್ಲಿ ಬಿಟ್ಟುಹೋಗಿದ್ದ ಅಥವಾ ಅಡ್ಡಿಯಾಗಿದ್ದ ದ್ವಿಚಕ್ರ ವಾಹನಗಳು ಹಾಗೂ ಕಾರುಗಳನ್ನು ಸಹ ತೆರವುಗೊಳಿಸಿವೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಇಲಾಖೆ ನೀಡಿದ ಮಾಹಿತಿಯ ಪ್ರಕಾರ, ಜುಲೈ 1ರಂದು 76.55 ಕಿ.ಮೀ., ಜುಲೈ 2ರಂದು 64.55 ಕಿ.ಮೀ. ಹಾಗೂ ಜುಲೈ 3ರಂದು 61.60 ಕಿ.ಮೀ. ಪಾದಚಾರಿ ಮಾರ್ಗಗಳ ಮೇಲಿನ ಅತಿಕ್ರಮಣವನ್ನು ತೆರವುಗೊಳಿಸಲಾಗಿದೆ.ಸರ್ಕಾರದ ಉದ್ದೇಶ ಜೀವನೋಪಾಯಕ್ಕೆ ಧಕ್ಕೆಯುಂಟುಮಾಡುವುದಲ್ಲ, ಬದಲಿಗೆ ಪಾದಚಾರಿಗಳಿಗೆ ಸುರಕ್ಷಿತ ಹಾಗೂ ಅಡೆತಡೆಯಿಲ್ಲದ ಸಂಚಾರವನ್ನು ಖಚಿತಪಡಿಸುವುದಾಗಿದೆ ಎಂದು ಅವರು ಸ್ಪಷ್ಟಪಡಿಸಿದರು. ಎಲ್ಲಾ ರಾಜಕೀಯ ಪಕ್ಷಗಳ ಶಾಸಕರು ಈ ಅಭಿಯಾನಕ್ಕೆ ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದ ಸಚಿವರು, ಸುಪ್ರೀಂ ಕೋರ್ಟ್‌ನ ನಿರ್ದೇಶನಗಳಿಗೆ ಅನುಗುಣವಾಗಿ ಈ ಕಾರ್ಯಾಚರಣೆಯನ್ನು ಜಾರಿಗೊಳಿಸಲಾಗುತ್ತಿದೆ ಎಂದರು. ಬೆಂಗಳೂರು ನಮ್ಮೆಲ್ಲರಿಗೂ ಬದುಕಲು ಹಾಗೂ ಬೆಳೆಯಲು ಅವಕಾಶ ನೀಡಿದೆ. ಆದ್ದರಿಂದ ನಗರವನ್ನು ಉತ್ತಮಗೊಳಿಸುವುದು ಸರ್ಕಾರ, ಸಂಸ್ಥೆಗಳು ಮತ್ತು ಪ್ರತಿಯೊಬ್ಬ ನಾಗರಿಕರ ಜಂಟಿ ಜವಾಬ್ದಾರಿಯಾಗಿದೆ ಎಂದು ಹೇಳಿದರು.ಆದರೆ, ಈ ಕಾರ್ಯಾಚರಣೆಗೆ ಕೆಲವು ನಾಗರಿಕರು ಹಾಗೂ ಬೀದಿಬದಿ ವ್ಯಾಪಾರಿಗಳ ಸಂಘದಿಂದ ವಿರೋಧ ವ್ಯಕ್ತವಾಗಿದೆ. ವಿಶೇಷವಾಗಿ ಹಿರಿಯ ನಾಗರಿಕರು, ಮಹಿಳೆಯರು ಮತ್ತು ಅಂಗವಿಕಲ ಬೀದಿಬದಿ ವ್ಯಾಪಾರಿಗಳ ವಸ್ತುಗಳನ್ನು ಕಾರ್ಯಾಚರಣೆಯ ವೇಳೆ ವಶಪಡಿಸಿಕೊಳ್ಳಲಾಗಿರುವುದು ಆಕ್ಷೇಪಕ್ಕೆ ಕಾರಣವಾಗಿದೆ.


ಉದಯವಾಹಿನಿ ಚಿತ್ರ

### ಪಾದಚಾರಿ ಮಾರ್ಗಗಳನ್ನು ತೆರವು

**ನಗರ ನಿಗಮವಾರು ಅಂಕಿಅಂಶಗಳ ಪ್ರಕಾರ, ಬೆಂಗಳೂರು ಪಶ್ಚಿಮ ವಲಯದಲ್ಲಿ ಅತಿ ಹೆಚ್ಚು 63.7 ಕಿ.ಮೀ. ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಲಾಗಿದ್ದು, ನಂತರದ ಸ್ಥಾನಗಳಲ್ಲಿ ಬೆಂಗಳೂರು ಉತ್ತರ (39.65 ಕಿ.ಮೀ.), ಬೆಂಗಳೂರು ಮಧ್ಯ (35.85 ಕಿ.ಮೀ.), ಬೆಂಗಳೂರು ದಕ್ಷಿಣ (32.9 ಕಿ.ಮೀ.) ಹಾಗೂ ಬೆಂಗಳೂರು ಪೂರ್ವ (30.6 ಕಿ.ಮೀ.) ವಲಯಗಳಿವೆ.**

**ಪಾದಚಾರಿಗಳ ಓಡಾಟ ಹೆಚ್ಚಿರುವ ಬೆಂಗಳೂರಿನ ಒಟ್ಟು ರಸ್ತೆ ಜಾಲದ ಕೇವಲ 20 ಶೇಕಡಾ ಭಾಗದಲ್ಲಿ ಮಾತ್ರ ಈ ಕಾರ್ಯಾಚರಣೆ ನಡೆಸಲಾಗುವುದು ಎಂದರು. ಉಳಿದ ರಸ್ತೆಗಳಲ್ಲಿ ಕಾನೂನಿನ ಪ್ರಕಾರ ವಾಣಿಜ್ಯ ಚಟುವಟಿಕೆಗಳು ಹಾಗೂ ಬೀದಿಬದಿ ವ್ಯಾಪಾರ ಮುಂದುವರಿಯಬಹುದು ಎಂದು ಹೇಳಿದರು.-ಸಚಿವ ಕೃಷ್ಣ ಭೈರೇಗೌಡ**

**ಜೀವನೋಪಾಯಕ್ಕೆ ತೊಂದರೆ ಉಂಟುಮಾಡುವುದು ನಮ್ಮ ಉದ್ದೇಶವಲ್ಲ. ಪ್ರತಿಯೊಬ್ಬ ನಾಗರಿಕರು ಸುರಕ್ಷಿತವಾಗಿ ನಡೆಯಲು ಸಾಧ್ಯವಾಗಬೇಕು ಎಂಬುದೇ ನಮ್ಮ ಗುರಿ. ಸಾರ್ವಜನಿಕ ಸುರಕ್ಷತೆ ಮತ್ತು ಸಾರ್ವಜನಿಕರ ಹಕ್ಕುಗಳಿಗೆ ಮೊದಲ ಆದ್ಯತೆ ನೀಡಬೇಕು ಎಂದು ಹೇಳಿದರು.-ಸಚಿವ ಕೃಷ್ಣ ಭೈರೇಗೌಡ**

**ಅನಾಥ ವಾಹನಗಳ ಶೀಘ್ರ ತೆರವು**

**ಒತ್ತುವರಿ ತೆರವುಗೊಳಿಸಿದ ರಸ್ತೆಗಳಲ್ಲಿ ತಕ್ಷಣವೇ ಅಭಿವೃದ್ಧಿ ಕಾಮಗಾರಿಗಳನ್ನು ಆರಂಭಿಸಬೇಕು. ಉತ್ತಮ ಗುಣಮಟ್ಟದ ಪಾದಚಾರಿ ಮಾರ್ಗಗಳನ್ನು ನಿರ್ಮಿಸಿ, ಬಳಿಕ ಸ್ಥಳೀಯ ನಾಗರಿಕರೊಂದಿಗೆ ಪರಿಶೀಲನೆ ನಡೆಸಿ ಸಾರ್ವಜನಿಕರ ಅಭಿಪ್ರಾಯವನ್ನೂ ಪಡೆಯಬೇಕು.ನಗರದ ರಸ್ತೆ ಬದಿಗಳಲ್ಲಿ ನಿಂತಿರುವ ಅನಾಥ ವಾಹನಗಳ ತೆರವು ಅಭಿಯಾನವನ್ನು ಜುಲೈ 10ರಿಂದ ಆರಂಭಿಸಲಾಗುವುದು. ನಗರ ಪಾಲಿಕೆ ಹಾಗೂ ಸಂಚಾರಿ ಪೊಲೀಸರು ಜಂಟಿಯಾಗಿ ಕಾರ್ಯಾಚರಣೆ ನಡೆಸಲಿದ್ದಾರೆ.**

**1** ಎರಡು ದಿನಗಳಲ್ಲಿ 141 ಕಿ.ಮೀ

**2** ಜುಲೈ 1ರಂದು 76.55 ಕಿ.ಮೀ

**3** ಜುಲೈ 2ರಂದು 64.55 ಕಿ.ಮೀ




## ರೈತರು ಬೆಳೆ ಬೆಳೆಯಬೇಡಿ ಎಂದಿರೋದು ಆಶ್ಚರ್ಯ: ಸಿಎಂ ಹೇಳಿಕೆಗೆ ವಿಜಯೇಂದ್ರ ಕಿಡಿ

• ಉದಯವಾಹಿನಿ, ಬೆಂಗಳೂರ

ರಾಜ್ಯದ ಜಲಾಶಯಗಳಲ್ಲಿ ನೀರಿಲ್ಲ, ರೈತರು ಬೆಳೆ ಬೆಳೆಯಬೇಡಿ ಎಂದು ಮುಖ್ಯಮಂತ್ರಿ ಹೇಳಿರುವುದು ಆಶ್ಚರ್ಯಕರ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕಿಡಿಕಾರಿದ್ದಾರೆ.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭೀಕರ ಬರಗಾಲದ ಮುನ್ಸೂಚನೆ ಇದೆ. ರಾಜ್ಯದ ಜಲಾಶಯಗಳಲ್ಲಿ ನೀರಿಲ್ಲ. ಅದಕ್ಕಾಗಿ ರೈತರು ಬೆಳೆ ಬೆಳೆಯಬೇಡಿ ಎಂದು ಸಿಎಂ ಹೇಳಿರುವುದು ಆಶ್ಚರ್ಯ ಹಾಗೂ ನೋವು ತಂದಿದೆ. ಮುಖ್ಯಮಂತ್ರಿಯವರ ಈ ಹೇಳಿಕೆ ರಾಜ್ಯದ ರೈತರ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ ಮಾಡಿದೆ. ಮುಖ್ಯಮಂತ್ರಿಗಳು ಬಹಳ ಪ್ರಬುದ್ಧತೆಯಿಂದ ಮಾತನಾಡಬೇಕು ಎಂದು ವಾಗ್ದಾಳಿ ನಡೆಸಿದರು.

ಕೃಷ್ಣರಾಜ ಸಾಗರ ಅಣೆಕಟ್ಟಿನಿಂದ ತಮಿಳುನಾಡಿಗೆ ಬಿಡುಗಡೆ ಮಾಡಲಾದ ಕಾವೇರಿ ನೀರಿನ ಪ್ರಮಾಣವನ್ನು ಬಹಿರಂಗಪಡಿಸುವಂತೆ ವಿಜಯೇಂದ್ರ ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಮಾತ್ರವಲ್ಲ, ಇಡೀ ದೇಶದಲ್ಲೇ ಬರದ ಛಾಯೆ ಆವರಿಸಿದೆ. ಪ್ರಕೃತಿ ಮುನಿಸಿಕೊಂಡಿರುವ ಈ ಸಂದರ್ಭದಲ್ಲಿ ರೈತರಿಗೆ ಅಭಯ ನೀಡಬೇಕು. ಮುಂದಿನ 15 ದಿನಗಳಲ್ಲಿ ಮಳೆಯಾಗುವ ನಿರೀಕ್ಷೆಯಿದೆ. ಆದರೆ ಸಿಎಂ ಬಿತ್ತನೆ ಮಾಡಬೇಡಿ ಎಂದು ಹೇಳಿದ್ದಾರೆ. ರೈತರು ಬಿತ್ತನೆ ಮಾಡದೇ ಇದ್ದರೆ ಅದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು. ಮಳೆ ಪ್ರಮಾಣ ಕಡಿಮೆಯಾಗಿರುವಾಗ ಸರ್ಕಾರದ ಆದ್ಯತೆ ಏನು


ಉದಯವಾಹಿನಿ ಚಿತ್ರ

ಜಿಲ್ಲಾಧಿಕಾರಿಗಳ ಖಾತೆಗೆ ಅಥವಾ ರೈತರಿಗೆ ಯಾವುದೇ ಅನುದಾನ ಬಿಡುಗಡೆ ಮಾಡಿದ್ದಾರೆಯೇ? ಯಾವುದನ್ನೂ ಮಾಡದೆ ಸಿಎಂ ಕೈಕಟ್ಟಿ ಕುಳಿತಿದ್ದಾರೆ ಎಂದು ಆರೋಪಿಸಿದರು. ರಾಜ್ಯದ ಜಲಾಶಯಗಳಿಂದ ಎಷ್ಟು ಪ್ರಮಾಣದ ನೀರು ಬಿಡಲಾಗಿದೆ ಎಂಬ ಮಾಹಿತಿ ಸರ್ಕಾರ ನೀಡಬೇಕು. ನಮ್ಮ ಜಲಾಶಯಗಳಿಂದ ಮನಸ್ಸೋ ಇಚ್ಛೆ ನೀರು ಬಿಟ್ಟಿದ್ದಾರೆ. ತಮಿಳುನಾಡಿನಲ್ಲಿ ಮೈತ್ರಿ ಪಕ್ಷವನ್ನು ಖುಷಿಪಡಿಸಲು ರಾತ್ರೋರಾತ್ರಿ ನೀರು ಬಿಟ್ಟರು.

**ಮಹಾರಾಷ್ಟ್ರ ಸರ್ಕಾರದೊಂದಿಗೆ ಮಾತುಕತೆ ನಡೆಸಿ ನೀರು ಬಿಡಿಸಿಕೊಳ್ಳಬೇಕಿತ್ತು. ನೀರು ಬಿಡುವಾಗ ಬರಗಾಲದ ಪರಿಸ್ಥಿತಿ ನೆನಪಾಗಲಿಲ್ಲವೇ ಈಗ ಯಾಕೆ ಈ ಕಪಟ ನಾಟಕ ರಿಯಲ್ ಎಸ್ಟೇಟ್ ಬಗ್ಗೆ ಮಾತ್ರ ಕಾಳಜಿ ಇರುವವರು ಆಡಳಿತ ನಡೆಸಿದರೆ ರಾಜ್ಯದ ಹಣೆಬರಹ ಇದೇ ಆಗುತ್ತದೆ ಎಂದು ವಿಜಯೇಂದ್ರ ವಾಗ್ದಾಳಿ ನಡೆಸಿದರು.**

## ಅಕ್ರಮ ಗಣಿಗಾರಿಕೆಗೆ ಕಡಿವಾಣ ಹಾಕುವಂತೆ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾದಿಂದ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ನಡೆಯುತ್ತಿರುವ ಅಕ್ರಮ ಕಲ್ಲು ಗಣಿಗಾರಿಕೆಗೆ ತಕ್ಷಣ ಕಡಿವಾಣ ಹಾಕಬೇಕು, ಕ್ವಾರಿ ದುರಂತಗಳಿಗೆ ಹೊಣೆಗಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಆರ್‌ಪಿಐ) ವತಿಯಿಂದ ಶನಿವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನೆಯಲ್ಲಿ ಸುಮಾರು 300ಕ್ಕೂ ಹೆಚ್ಚು ಕಾರ್ಯಕರ್ತರು ಹಾಗೂ ಮುಖಂಡರು ಭಾಗವಹಿಸಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ನೇತೃತ್ವವನ್ನು ಪಕ್ಷದ ರಾಜ್ಯಾಧ್ಯಕ್ಷ ಡಾ. ಎಂ. ವೆಂಕಟಸ್ವಾಮಿ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರತ್ನ ಎಂ.ವಹಿಸಿದ್ದರು. ಯುವ ಘಟಕದ ರಾಜ್ಯಾಧ್ಯಕ್ಷ ಪ್ರಶಾಂತ್, ಶಂಕರ ರಾಮಲಿಂಗಯ್ಯ ಸೇರಿದಂತೆ ದಲಿತ ಸಮುದಾಯದ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ


ಪ್ರತಿಭಟನೆಯ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರಿಗೆ ಉದ್ದೇಶಿಸಿ ಮನವಿ ಪತ್ರವನ್ನು ಸಲ್ಲಿಸಲಾಯಿತು. ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯಿಂದ ಸಂಭವಿಸುತ್ತಿರುವ ದುರಂತಗಳಲ್ಲಿ ಏಳು ಮಂದಿ ಕಾರ್ಮಿಕರು ಮೃತಪಟ್ಟಿದ್ದು, ಹಲವರು ಗಾಯಗೊಂಡಿರುವುದು ಅತ್ಯಂತ ವಿಷಾದನೀಯ. ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಮನವಿಯಲ್ಲಿ ಕ್ವಾರಿ ಕಾರ್ಮಿಕರ ಸಾವಿನ ಪ್ರಕರಣಕ್ಕೆ ನ್ಯಾಯಾಂಗ ತನಿಖೆ ನಡೆಸಬೇಕು, ಮಾದಾಪಟ್ಟ ಪ್ರದೇಶದ ಕ್ವಾರಿ ಮಾಲೀಕರು ಹಾಗೂ ಸಂಬಂಧಿತ ಗುತ್ತಿಗೆದಾರರನ್ನು ತಕ್ಷಣ ಬಂಧಿಸಬೇಕು, ಕರ್ತವ್ಯ ಲೋಪ ಎಸಗಿರುವ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳನ್ನು ಅಮಾನತುಗೊಳಿಸಬೇಕು ಎಂದು ಆಗ್ರಹಿಸಲಾಗಿದೆ.

ಇದಲ್ಲದೆ, ಮೃತಪಟ್ಟ ಪ್ರತಿಯೊಬ್ಬ ಕಾರ್ಮಿಕರ ಕುಟುಂಬಕ್ಕೆ 50 ಲಕ್ಷ ಪರಿಹಾರ ಘೋಷಿಸಬೇಕು, ಗಾಯಗೊಂಡವರಿಗೆ ಸೂಕ್ತ ಚಿಕಿತ್ಸೆ ಹಾಗೂ ಪರಿಹಾರ ಒದಗಿಸಬೇಕು ಮತ್ತು ಕ್ವಾರಿ ಕಾರ್ಮಿಕರ ಜೀವ ರಕ್ಷಣೆಗೆ ಕಠಿಣ ಸುರಕ್ಷತಾ ನಿಯಮಗಳನ್ನು ಜಾರಿಗೆ ತಂದು ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯನ್ನು ಸಂಪೂರ್ಣವಾಗಿ ನಿಯಂತ್ರಿಸಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

## ಪಾರ್ಟಿ ನೆಪದಲ್ಲಿ ಬೆಂಗಳೂರಿನಲ್ಲಿ ಯುವತಿಯ ಮೇಲೆ ಅತ್ಯಾಚಾರ : ಐವರು ಆರೋಪಿಗಳ ಬಂಧನ!

• ಉದಯವಾಹಿನಿ, ಬೆಂಗಳೂರ

ರಾಜಧಾನಿ ಬೆಂಗಳೂರಿನಲ್ಲಿ ಪಾರ್ಟಿ ನೆಪದಲ್ಲಿ ಯುವತಿ ಮೇಲೆ ಅತ್ಯಾಚಾರ ಎಸಗಿರುವ ಆರೋಪ ಕೇಳಿಬಂದಿದೆ. ತಲಘಟ್ಟಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಐವರು ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಘಟನೆಯಲ್ಲಿ ಭಾಗಿಯಾದ ಐವರ ಪೈಕಿ ಇಬ್ಬರು ಯುವಕರು ಸಂತ್ರಸ್ತ ಯುವತಿಗೆ ಮೊದಲೇ ಪರಿಚಯವಿದ್ದರು ಎನ್ನಲಾಗಿದೆ. ಆರೋಪಿಗಳಲ್ಲೊಬ್ಬನಾದ ಸೋಮಶೇಖರ್ ಎಂಬಾತ, ಕಲಬುರ್ಗಿಯಿಂದ ನಮ್ಮ ಸ್ನೇಹಿತರು ಬಂದಿದ್ದಾರೆ ಎಂದು ಹೇಳಿ ಪಾರ್ಟಿ ಮಾಡುವ ನೆಪದಲ್ಲಿ ಯುವತಿಯನ್ನು ಕರೆಸಿಕೊಂಡಿದ್ದಾನೆ. ಮೂಲತಃ ದೇವನಹಳ್ಳಿ ಭಾಗದಲ್ಲಿ ವಾಸವಿದ್ದ ಸಂತ್ರಸ್ತ ಯುವತಿ, ಸ್ನೇಹಿತನ ಮಾತನ್ನು ನಂಬಿ ನಿನ್ನೆ ಸಂಜೆ ಆರೋಪಿಗಳು ಪಾರ್ಟಿ ಮಾಡುತ್ತಿದ್ದ ಜಾಗಕ್ಕೆ ತೆರಳಿದ್ದಾಳೆ. ಈ ವೇಳೆ ಆರೋಪಿಗಳಲ್ಲೊಬ್ಬನಾದ ಅಂಬರೀಶ ಯುವತಿಯ ಮೇಲೆ ಅತ್ಯಾಚಾರ ಎಸಗಿದ್ದಾನೆ ಎಂದು ಆರೋಪಿಸಲಾಗಿದೆ.

ಸಂತ್ರಸ್ತ ಯುವತಿ ಹೇಗೋ ಧೈರ್ಯ ಮಾಡಿ ಐವರ ಗುಂಪಿನಿಂದ ಬಿಡಿಸಿಕೊಂಡು ಅಲ್ಲಿಂದ ತಪ್ಪಿಸಿಕೊಂಡು ಓಡಿ ಬಂದಿದ್ದಾಳೆ. ತಕ್ಷಣವೇ ಆಕೆ ಜಾಗರೂಕತೆಯಿಂದ '112' ತುರ್ತು ಸಹಾಯವಾಣಿಗೆ ಕರೆ ಮಾಡಿ ತನಗಾದ ಅನ್ಯಾಯ ಮತ್ತು ಘಟನೆಯ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದ್ದಾಳೆ.

# ವಾಯು ವಜ್ರ-ಬಿಎಂಟಿಸಿ ಬಸ್ಸುಗಳ ಡಿಕ್ಕಿ, ಗಾಯಾಳುಗಳ ಚಿಕಿತ್ಸಾ ವೆಚ್ಚ ಸರ್ಕಾರ ಭರಿಸುತ್ತದೆ

## ಮೆಜೆಸ್ಟಿಕ್‌ನಿಂದ ಅತ್ತಿಬೆಲೆ ಕಡೆಗೆ ತೆರಳುತ್ತಿದ್ದ ಮತ್ತೊಂದು ಬಿಎಂಟಿಸಿ ಬಸ್ ವೇಗವಾಗಿ ಬಂದು ಅದರ ಹಿಂಭಾಗಕ್ಕೆ ಡಿಕ್ಕಿ ಹೊಡೆದಿದೆ.

• ಉದಯವಾಹಿನಿ, ಬೆಂಗಳೂರ

ಶನಿವಾರ ಬೆಳಗ್ಗೆ ಬೆಂಗಳೂರು ನಗರದ ಹೃದಯಭಾಗದ ಕೆ.ಆರ್. ವೃತ್ತದಲ್ಲಿ ನಿಂತಿದ್ದ ವಾಯು ವಜ್ರ ಬಸ್‌ಗೆ ಹಿಂದಿನಿಂದ ಬಿಎಂಟಿಸಿ ಬಸ್ ಡಿಕ್ಕಿ ಹೊಡೆದ ಪರಿಣಾಮ ಹಲವು ಪ್ರಯಾಣಿಕರು ಗಾಯಗೊಂಡಿದ್ದು, ನಗರದ ಅತ್ಯಂತ ಜನನಿಬಿಡ ಜಂಕ್ಷನ್‌ಗಳಲ್ಲಿ ಒಂದಾದ ಈ ಪ್ರದೇಶದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿ, ಸಂಚಾರಕ್ಕೂ ಅಡಚಣೆ ಉಂಟಾಯಿತು.ಅಪಘಾತವು ಬೆಳಗ್ಗೆ ಸುಮಾರು 8.50 ಗಂಟೆಗೆ ಕೆ.ಆರ್. ವೃತ್ತದ ಸಮೀಪದ ಶೇಷಾದ್ರಿ ರಸ್ತೆಯಲ್ಲಿ ಸಂಭವಿಸಿದೆ. ಅನೇಕಲ್ ಕಡೆಗೆ ತೆರಳುತ್ತಿದ್ದ ವಾಯು ವಜ್ರ ಬಸ್ ಟ್ರಾಫಿಕ್ ಸಿಗ್ನಲ್ ಬಳಿ ನಿಂತಿದ್ದ ವೇಳೆ, ಮೆಜೆಸ್ಟಿಕ್‌ನಿಂದ ಅತ್ತಿಬೆಲೆ ಕಡೆಗೆ ತೆರಳುತ್ತಿದ್ದ ಮತ್ತೊಂದು ಬಿಎಂಟಿಸಿ ಬಸ್ ವೇಗವಾಗಿ ಬಂದು ಅದರ ಹಿಂಭಾಗಕ್ಕೆ ಡಿಕ್ಕಿ ಹೊಡೆದಿದೆ.

ಡಿಕ್ಕಿಯ ತೀವ್ರತೆಗೆ ಹಿಂದಿನಿಂದ ಬಂದ ಬಸ್‌ನ ಮುಂಭಾಗ ಸಂಪೂರ್ಣ ಜಖಂಗೊಂಡಿದ್ದು, ವಾಯು ವಜ್ರ ಬಸ್‌ನ ಹಿಂಭಾಗವೂ ತೀವ್ರವಾಗಿ ಹಾನಿಗೊಳಗಾಗಿದೆ. ಪೊಲೀಸರ ಪ್ರಕಾರ, ಅಪಘಾತ ಸಂಭವಿಸಿದ ವೇಳೆ ವಾಯು ವಜ್ರ ಬಸ್‌ನಲ್ಲಿ ಸುಮಾರು 20 ಪ್ರಯಾಣಿಕರು ಪ್ರಯಾಣಿಸುತ್ತಿದ್ದರು. ಹಲವರು ಗಾಯಗೊಂಡಿದ್ದು, ಹಿಂದಿನಿಂದ ಬಂದ ಬಸ್‌ನ ಚಾಲಕನಿಗೆ ತಲೆಗೆ ಗಂಭೀರ ಗಾಯಗಳಾಗಿದ್ದು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಸ್‌ನ ಮುಂಭಾಗದಲ್ಲಿ ಕುಳಿತಿದ್ದ ಮಹಿಳಾ ಪ್ರಯಾಣಿಕರೊಬ್ಬರ ಕಾಲು ವಾಹನದ ಜಖಂಗೊಂಡ ಭಾಗದಲ್ಲಿ ಸಿಲುಕಿಕೊಂಡ ಪರಿಣಾಮ ಅವರಿಗೆ ಗಂಭೀರ ಗಾಯಗಳಾಗಿವೆ. ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ರಕ್ಷಣಾ ಸಾಧನಗಳ ಸಹಾಯದಿಂದ ಬಸ್‌ನ ಮುರಿದು ಮಡಿದ ಕಬ್ಬಿಣದ ಭಾಗವನ್ನು ಕತ್ತರಿಸಿ ಅವರನ್ನು ಹೊರತೆಗೆದು ಆಸ್ಪತ್ರೆಗೆ ಸಾಗಿಸಿದರು. ಅವರಿಗೆ ತಲೆಯಲ್ಲೂ ಗಾಯವಾಗಿದೆ. ಅಪಘಾತದ ಬಳಿಕ ಪೊಲೀಸರು ಹಾನಿಗೊಳಗಾದ ಎರಡೂ ಬಸ್‌ಗಳನ್ನು ತೆರವುಗೊಳಿಸಿ ಸಂಚಾರವನ್ನು ಪುನಃ ಆರಂಭಿಸಿದರು. ಪ್ರಕರಣ ದಾಖಲಿಸಿಕೊಂಡು ಅಪಘಾತಕ್ಕೆ ನಿಖರ ಕಾರಣವೇನು ಎಂಬುದರ ಕುರಿತು ತನಿಖೆ ಮುಂದುವರಿಸಲಾಗಿದೆ. ಸ್ಥಳೀಯ ಬಿಎಂಟಿಸಿ ವಿಭಾಗೀಯ ನಿಯಂತ್ರಕರು ಹಾಗೂ ಟಾಟಾ ಸ್ಮಾರ್ಟ್ ಮೊಬಿಲಿಟಿ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಯ ಸಮನ್ವಯ ನಡೆಸಿದರು ಎಂದು ಬಿಎಂಟಿಸಿ ತಿಳಿಸಿದೆ. ಸಾರಿಗೆ ಸಚಿವ ಭೈರತಿ ಸುರೇಶ್, ಸಾರಿಗೆ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್ ಹಾಗೂ ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕ ರಘುನಂದನ್ ಮೂರ್ತಿ ಅವರು ಸೇಂಟ್ ಮಾರ್ತಾಸ್ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳು ಪ್ರಯಾಣಿಕರು ಹಾಗೂ ಚಾಲಕರ ಆರೋಗ್ಯ ವಿಚಾರಿಸಿದರು.


ಉದಯವಾಹಿನಿ ಚಿತ್ರ

**1** ಅಗ್ನಿಶಾಮಕ ತುರ್ತು ಸೇವೆಗಳ ಸಿಬ್ಬಂದಿ

**2** ಸಂಚಾರವನ್ನು ಪುನಃ ಆರಂಭಿಸಿದರು

**3** ಸಮಯಕ್ಕೆ ನಿಲ್ಲಿಸಲು ಸಾಧ್ಯವಾಗದೆ ಡಿಕ್ಕಿ

### ಅತ್ತಿಬೆಲೆ ಮಾರ್ಗ ಡಿಕ್ಕಿ

**ಅಪಘಾತಕ್ಕೀಡಾದ ಮುಂಭಾಗದ ಕೆಎ-01-ಎಎ-4163 ನೋಂದಣಿ ಸಂಖ್ಯೆಯ ವಾಯು ವಜ್ರ ಬಸ್ ಮೆಜೆಸ್ಟಿಕ್‌ನಿಂದ ಅನೇಕಲ್ ಕಡೆಗೆ ತೆರಳುತ್ತಿತ್ತು. ಹಿಂದಿನಿಂದ ಡಿಕ್ಕಿ ಹೊಡೆದ ಕೆಎ-51-ಎಜೆ-6163 ನೋಂದಣಿ ಸಂಖ್ಯೆಯ ಬಿಎಂಟಿಸಿ ಬಸ್ ಮೆಜೆಸ್ಟಿಕ್‌ನಿಂದ ಅತ್ತಿಬೆಲೆ ಮಾರ್ಗದಲ್ಲಿ ಸಂಚರಿಸುತ್ತಿತ್ತು.**

**ಘಟನೆ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಪಶ್ಚಿಮ ಸಂಚಾರ ವಿಭಾಗದ ಡಿಸಿಪಿ ಅನೂಪ್ ಶೆಟ್ಟಿ, ಪ್ರಾಥಮಿಕ ತನಿಖೆಯ ಪ್ರಕಾರ ಮುಂಭಾಗದ ಬಸ್ ಟ್ರಾಫಿಕ್ ಸಿಗ್ನಲ್‌ಗೆ ನಿಂತಿದ್ದರೂ, ಹಿಂದಿನಿಂದ ಬಂದ ಬಸ್ ಸಮಯಕ್ಕೆ ನಿಲ್ಲಿಸಲು ಸಾಧ್ಯವಾಗದೆ ಡಿಕ್ಕಿ ಹೊಡೆದಿದೆ.-ಡಿಸಿಪಿ ಅನೂಪ್ ಶೆಟ್ಟಿ**

**ಪ್ರಾಥಮಿಕ ಮಾಹಿತಿಯ ಪ್ರಕಾರ, ಮುಂಭಾಗದ ಬಸ್ ಸಿಗ್ನಲ್ ಕಂಡು ನಿಂತಿತ್ತು. ಅದರ ಹಿಂದೆ ಬರುತ್ತಿದ್ದ ಬಸ್ ಅದಕ್ಕೆ ಡಿಕ್ಕಿ ಹೊಡೆದಿದೆ. ನಾಲ್ವರು ಗಾಯಗೊಂಡಿದ್ದಾರೆ. ಚಾಲಕನಿಗೆ ತಲೆಗೆ ಗಾಯವಾಗಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ. ಮಹಿಳೆಯೊಬ್ಬರಿಗೆ ಕಾಲಿಗೆ ಗಂಭೀರ ಗಾಯವಾಗಿದೆ. ಯಾವುದೇ ಸಾವಿನ ವರದಿಯಾಗಿಲ್ಲ.-ಸಚಿವ ಭೈರತಿ ಸುರೇಶ್**

ಅಂತರಾಳದಿಂದ... EDITORIAL

# ಶಾಲಾ ಮಕ್ಕಳ ಸುರಕ್ಷೆ ಹೈಕೋರ್ಟ್ ತೀರ್ಪು ಸಮುಚಿತ




ಶಾಲಾ ವಾಹನಗಳಲ್ಲಿ ಪ್ರಯಾಣಿಸುವ ಮಕ್ಕಳ ಸುರಕ್ಷೆ ಮತ್ತು ಜವಾಬ್ದಾರಿ ಆಯಾಯ ಶಾಲಾಡಳಿತ ಮಂಡಳಿಯದ್ದೇ ಆಗಿದೆ ಎಂದು ಅಭಿಪ್ರಾಯಪಟ್ಟಿರುವ ಕರ್ನಾಟಕ ಹೈಕೋರ್ಟ್, ಮಕ್ಕಳ ರಕ್ಷಣೆ ಶಾಲಾಡಳಿತ ಮಂಡಳಿಗಳ ಬಾಧ್ಯತೆಯಾಗಿದ್ದು ಇದರಿಂದ ಎಂದೂ ನುಣುಚಿಕೊಳ್ಳುವಂತಿಲ್ಲ ಎಂದು ಖಡಕ್ ಮಾತುಗಳಲ್ಲಿ ಹೇಳಿದೆ.

ಹೈಕೋರ್ಟ್ ಏಕಸದಸ್ಯ ನ್ಯಾಯಪೀಠದ ಈ ತೀರ್ಪು ವಾಹನ ಸೌಲಭ್ಯವನ್ನು ಒದಗಿಸಿ ಮಕ್ಕಳು ಮತ್ತವರ ಪೋಷಕರಿಗೆ ಅನುಕೂಲ ಕಲ್ಪಿಸಿಕೊಟ್ಟಿದ್ದೇವೆ ಎಂಬಂತೆ ವರ್ತಿಸುವ ಶಾಲಾಡಳಿತ ಮಂಡಳಿಗಳಿಗೆ ಎಚ್ಚರಿಕೆಯ ಕರೆಗಂಟೆಯಾಗಿದೆ.

ಮಂಡ್ಯ ಜಿಲ್ಲೆಯ ಮದ್ದೂರಿನ ಖಾಸಗಿ ಶಾಲೆಯೊಂದರ ಬಸ್‌ನಲ್ಲಿ ಮಕ್ಕಳನ್ನು ಮರಳಿ ಕರೆದೊಯ್ಯುವ ವೇಳೆ ಸ್ಪಾರ್ಕ್‌ರ್ ಸಿಡಿದು 4ನೇ ತರಗತಿಯ ಮಗು ತನ್ನ ಕಣ್ಣಿನ ದೃಷ್ಟಿ ಕಳೆದುಕೊಂಡದ್ದೇ ಅಲ್ಲದೆ ದೇಹದ ಶೇ. 40ರಷ್ಟು ಭಾಗ ಅಂಗವಿಕಲತೆಗೆ ಒಳಗಾಗಿತ್ತು. ಈ ಸಂಬಂಧ ಮಕ್ಕಳ ಪೋಷಕರು ಶಾಲಾಡಳಿತ ಮಂಡಳಿಯ ವಿರುದ್ಧ ಪ್ರಕರಣ ದಾಖಲಿಸಿದ್ದರು. ಸದ್ಯ ಈ ಪ್ರಕರಣ ಮದ್ದೂರಿನ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿದೆ. ಈ ಕ್ರಿಮಿನಲ್ ಪ್ರಕರಣವನ್ನು ರದ್ದುಗೊಳಿಸುವಂತೆ ಕೋರಿ ಖಾಸಗಿ ಶಾಲಾಡಳಿತ ಮಂಡಳಿ ಹೈಕೋರ್ಟ್‌ನ ಮೊರೆ ಹೋಗಿತ್ತು. ಈ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ಏಕಸದಸ್ಯ ಪೀಠ ಈ ಪ್ರಕರಣ ಗಂಭೀರವಾಗಿದ್ದು, ಸದ್ಯ ವಿಚಾರಣೆಯ ಹಂತದಲ್ಲಿರುವುದರಿಂದ ರದ್ದುಗೊಳಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಮಾತುಗಳಲ್ಲಿ ತಿಳಿಸಿತು. ಅಷ್ಟು ಮಾತ್ರವಲ್ಲದೆ ಶಾಲಾ ವಾಹನಗಳಲ್ಲಿ ಅಳವಡಿಸಲಾಗಿರುವ ಸಿಸಿ ಕೆಮರಾಗಳ ಸುವ್ಯವಸ್ಥಿತ ನಿರ್ವಹಣೆ, ಶಾಲಾ ಬಸ್ ಗಳಲ್ಲಿ ಸಹಾಯಕ ಸಿಬಂದಿಯ ನಿಯೋಜನೆ, ನಿಷೇಧಿತ ಮತ್ತು ಅಪಾಯಕಾರಿ ವಸ್ತುಗಳನ್ನು ಶಾಲಾ ಬಸ್‌ನಲ್ಲಿ ಸಾಗಿಸಲು ಅನುಮತಿ ನೀಡಿದ್ದು ಹೇಗೆ, ಸಿಬಂದಿ ಮತ್ತು ಚಾಲಕ ಹಾಗೂ ಮಕ್ಕಳಿಗೆ ಪಾಲಿಸಬೇಕಾದ ಸುರಕ್ಷಾ ನಿಯಮಾವಳಿಗಳ ಬಗೆಗೆ ಮನವರಿಕೆ ಮಾಡಿಕೊಡಲಾಗಿರಲಿಲ್ಲವೇ ಹಾಗೂ ಶಾಲಾವಾಹನಗಳಿಗೆ ಸಂಬಂಧಿಸಿದ ಮೇಲ್ವಿಚಾರಣೆಯ ಕರ್ತವ್ಯದಲ್ಲಿ ವಿಫಲವಾಗಿತ್ತೇ ಎಂಬೆಲ್ಲ ಪ್ರಶ್ನೆಗಳ ಕುರಿತಂತೆ ಕೂಲಂಕಷವಾಗಿ ತನಿಖೆ ನಡೆಯಬೇಕಿದೆ ಎಂದು ನ್ಯಾಯಮೂರ್ತಿಗಳು ತಮ್ಮ ಆದೇಶದಲ್ಲಿ ತಿಳಿಸುವ ಮೂಲಕ ಶಾಲಾ ವಾಹನಗಳ ಸೌಲಭ್ಯವನ್ನು ಒದಗಿಸುತ್ತಿರುವ ಶಾಲಾಡಳಿತ ಮಂಡಳಿಗಳ ಹೊಣೆಗಾರಿಕೆ, ಕರ್ತವ್ಯವನ್ನು ಜ್ಞಾಪಿಸಿದೆ. ನ್ಯಾಯಾಧೀಶರು ನೀಡಿರುವ ತೀರ್ಪಿನ ಪ್ರತಿಯೊಂದು ಅಂಶವೂ ಅತ್ಯಂತ ಸಕಾಲಿಕ ಮತ್ತು ಸಮುಚಿತವಾದುದಾಗಿದ್ದು ಇತ್ತ ಶಾಲಾಡಳಿತ ಮಂಡಳಿಗಳು ಲಕ್ಷ್ಯ ಹರಿಸಬೇಕು.

### ಶಾಲಾಡಳಿತ ಮಂಡಳಿಗಳ ಜವಾಬ್ದಾರಿ

**ನ್ಯಾಯಾಧೀಶರು ಅರ್ಜಿಯನ್ನು ವಜಾಗೊಳಿಸುವ ಸಂದರ್ಭದಲ್ಲಿ ಹಲವು ಮಹತ್ವದ ವಿಷಯಗಳು ಅರ್ಜಿದಾರರ ಗಮನ ಸೆಳೆದಿದ್ದು, ಮಕ್ಕಳಿಗೆ ಶಾಲಾ ವಾಹನಗಳ ಸೌಲಭ್ಯವನ್ನು ಒದಗಿಸುತ್ತಿರುವ ಎಲ್ಲ ಶಾಲೆಗಳ ಆಡಳಿತ ಮಂಡಳಿಗಳು ಕೂಡ ಈ ಬಗ್ಗೆ ಪರಾಮರ್ಶೆ ನಡೆಸಬೇಕಾದ ಅಗತ್ಯವನ್ನು ಸಾರಿ ಹೇಳಿದೆ. ಶಾಲಾ ವಾಹನಗಳಲ್ಲಿ ಮಕ್ಕಳನ್ನು ಶಾಲೆಗೆ ಕರೆದೊಯ್ದು ಅವರನ್ನು ಸುರಕ್ಷಿತವಾಗಿ ಪೋಷಕರ ಕೈಸೇರಿಸುವುದು ಶಾಲಾಡಳಿತ ಮಂಡಳಿಗಳ ಜವಾಬ್ದಾರಿಯಾಗಿದೆ. ಮಕ್ಕಳ ರಕ್ಷಣೆಯ ಹೊಣೆ ಕೇವಲ ಶಾಲಾವರಣಕ್ಕೆ ಸೀಮಿತವಾಗಿರದೆ ತಾವೇ ವ್ಯವಸ್ಥೆ ಮಾಡಿದ ಶಾಲಾವಾಹನಗಳಲ್ಲಿಯೂ ಮಕ್ಕಳನ್ನು ಸುರಕ್ಷಿತವಾಗಿ ಕರೆದೊಯ್ಯುವುದು ಶಾಲಾಡಳಿತ ಮಂಡಳಿಯ ಜವಾಬ್ದಾರಿಯಾಗಿದೆ.**


ಇಂತಹ ದುರ್ಘಟನೆಗಳು ಸಂಭವಿಸದಂತೆ ಪ್ರತಿಯೊಂದೂ ಶಾಲಾಡಳಿತ ಮಂಡಳಿ ಎಚ್ಚರ ವಹಿಸಬೇಕು. ಇನ್ನು ಮಕ್ಕಳ ಪೋಷಕರು ಕೂಡ ಮಕ್ಕಳನ್ನು ಶಾಲಾ ವಾಹನಗಳಲ್ಲಿ ಕಳುಹಿಸುವಾಗ ಜಾಗ್ರತೆ ವಹಿಸುವಂತೆ ತಿಳಿಹೇಳಬೇಕು. ಮಕ್ಕಳ ಸುರಕ್ಷೆಯ ವಿಷಯದಲ್ಲಿ ಪೋಷಕರಾಗಲಿ, ಶಾಲಾಡಳಿತ ಮಂಡಳಿಗಳಾಗಲಿ ನಿರ್ಲಕ್ಷ್ಯ ಧೋರಣೆ ತಾಳದೆ ನಿಗಾ ವಹಿಸಬೇಕು. ಜಾಗೃತಿ ಮತ್ತು ಜಾಗ್ರತೆಯಷ್ಟೇ ಮಕ್ಕಳನ್ನು ಇಂತಹ ದುರ್ಘಟನೆಗಳಿಂದ ಪಾರು ಮಾಡಲು ಸಾಧ್ಯ.

## ಮಾನ್ಸೂನ್‌ನಲ್ಲಿ ಕೀಲು ನೋವು ಏಕೆ ಹೆಚ್ಚಾಗುತ್ತದೆ? ಈ ಸಮಸ್ಯೆಗೆ ಕಾರಣಗಳು ಮತ್ತು ತಡೆಗಟ್ಟುವ ಕ್ರಮಗಳ ಬಗ್ಗೆ ವೈದ್ಯರ ಸಲಹೆ



ಮಳೆಗಾಲದಲ್ಲಿ ಕೀಲು ನೋವು ಕಾಣಿಸಲು ವಾಯುಮಂಡಲದ ಒತ್ತಡದಲ್ಲಿನ ಇಳಿಕೆ, ಗಾಳಿಯಲ್ಲಿನ ಅತಿಯಾದ ತೇವಾಂಶ ಹಾಗೂ ತಂಪಾದ ವಾತಾವರಣ ಪ್ರಮುಖ ಕಾರಣಗಳಾಗಿವೆ. ಹವಾಮಾನ ಬದಲಾವಣೆಗಳು ದೇಹದ ಕೀಲುಗಳು, ಇವುಗಳ ಸುತ್ತಲಿನ ಸ್ನಾಯುಗಳ ಮೇಲೆ ನೇರ ಪರಿಣಾಮ ಬೀರುತ್ತವೆ. ಮಳೆ ಬರುವ ಮುನ್ನ ವಾತಾವರಣದಲ್ಲಿ ಬ್ಯಾರೊಮೆಟ್ರಿಕ್ (ವಾಯುಮಂಡಲದ) ಒತ್ತಡ ಕಡಿಮೆಯಾಗುತ್ತದೆ. ಇದರಿಂದಾಗಿ ಕೀಲುಗಳ ಸುತ್ತಲಿನ ಮೃದು ಅಂಗಾಂಶಗಳು ಮತ್ತು ಸೈನೋವಿಯಲ್ ದ್ರವವು ಸ್ವಲ್ಪ ವಿಸ್ತರಣೆಗೊಂಡು, ನರಗಳ ಮೇಲೆ ಒತ್ತಡ ಹೇರುವುದರಿಂದ ನೋವು ಉಂಟಾಗುತ್ತದೆ.

ಗಾಳಿಯಲ್ಲಿ ತೇವಾಂಶ ಹೆಚ್ಚಾದಾಗ ಕೀಲುಗಳಲ್ಲಿನ ದ್ರವವು ದಪ್ಪಗಾಗಬಹುದು ಇಲ್ಲವೇ ಕೀಲುಗಳ ಒಳಭಾಗದಲ್ಲಿ ಸೂಕ್ಷ್ಮವಾದ ಊತ ಕಾಣಿಸಿಕೊಳ್ಳಬಹುದು. ಇದು ಕೀಲುಗಳ ಚಲನೆಯನ್ನು ಬಿಗಿಗೊಳಿಸುತ್ತದೆ. ಮಳೆಗಾಲದ ತಂಪು ಗಾಳಿಯು ದೇಹದ ಸ್ನಾಯುಗಳು ಮತ್ತು ರಕ್ತನಾಳಗಳು ಸಂಕುಚಿತಗೊಳ್ಳುವಂತೆ ಮಾಡುತ್ತದೆ. ಇದರಿಂದಾಗಿ ರಕ್ತ ಪರಿಚಲನೆ ಕಡಿಮೆಯಾಗಿ ಕೀಲುಗಳಲ್ಲಿ ಜಡತ್ವ ಹಾಗೂ ಬಿಗಿತ ಕೂಡ ಹೆಚ್ಚಾಗುತ್ತದೆ. ನಿರಂತರ ಮಳೆಯಿಂದಾಗಿ ಜನರು ಹೆಚ್ಚಾಗಿ ಮನೆಗಳಲ್ಲೇ ಉಳಿಯುತ್ತಾರೆ. ವಾಕಿಂಗ್ ಮತ್ತು ವ್ಯಾಯಾಮದ ಕೊರತೆಯಿಂದ ಕೀಲುಗಳು ಸರಿಯಾಗಿ ಚಲಿಸದೆ ನೋವು ಮತ್ತು ಬಿಗಿತ ತೀವ್ರಗೊಳ್ಳುತ್ತದೆ. ಈಗಾಗಲೇ ಸಂಧಿವಾತ (ಆರ್ಥರೈಟಿಸ್) ಇರುವವರಿಗೆ ಅಥವಾ ಹಳೆಯ ಮೂಳೆ ಗಾಯಗಳಾದವರಿಗೆ ಹವಾಮಾನದ ಈ ಸಣ್ಣ ಬದಲಾವಣೆಗಳು ಬೇಗನೆ ತಟ್ಟುತ್ತವೆ. ಮಾನ್ಸೂನ್ ಸಮಯದಲ್ಲಿ ತಂಪು ಅಧಿಕವಾಗಿರುವ ಸಂದರ್ಭದಲ್ಲಿ ತಕ್ಷಣ ಮೊಣಕಾಲುಗಳು, ಭುಜಗಳು, ಕೆಳ ಬೆನ್ನು ಮತ್ತು ಕಣಕಾಲುಗಳಲ್ಲಿ ನೋವು ಅಥವಾ ಬಿಗಿತ ಪ್ರಾರಂಭವಾಗುತ್ತದೆ. ಗಮನಾರ್ಹವಾಗಿ ಈ ಸಮಸ್ಯೆ ಸಂಧಿವಾತ ರೋಗಿಗಳಿಗೆ ಮಾತ್ರ ಸೀಮಿತವಾಗಿಲ್ಲ. ಅನೇಕ ಆರೋಗ್ಯವಂತ ವ್ಯಕ್ತಿಗಳಿಗೆ ಕೂಡ ಮಳೆಗಾಲದಲ್ಲಿ ಕೀಲು ನೋವಿನ ಸಮಸ್ಯೆ ಕಾಡಬಹುದು. ಮಳೆಗಾಲದಲ್ಲಿ ಈ ನೋವಿಗೆ ಹಲವಾರು ಅಂಶಗಳು ಕಾರಣವಾಗಬಹುದು, ಈ ಕಾರಣಗಳು ವ್ಯಕ್ತಿಯಿಂದ ವ್ಯಕ್ತಿಗೆ ಬದಲಾಗಬಹುದು. ಈ ಸಮಯದಲ್ಲಿ ಕೀಲು ನೋವು ಏಕೆ ಹೆಚ್ಚಾಗುತ್ತದೆ. ಈ ಸಮಸ್ಯೆಗೆ ಪರಿಹಾರ ಕಂಡುಹಿಡಿಯಲು ಯಾವ ಕ್ರಮಗಳನ್ನು ತೆಗೆದುಕೊಳ್ಳಬಹುದು ಹಾಗೂ ಯಾವ ಲಕ್ಷಣಗಳನ್ನು ನಿರ್ಲಕ್ಷಿಸಬಾರದು ಎಂಬುದರ ಬಗ್ಗೆ ಶೃಂಗೇರಿಯ ಅಭಿನವ ವಿದ್ಯಾತೀರ್ಥ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಆರ್ಥೋಪೆಡಿಕ್ ಡಾ.ಅಭಿಷೇಕ್ (ಎಂಬಿಬಿಎಸ್ ಎಂಎಸ್- ಆರ್ಥೋ, ಎಂಆರ್‌ಸಿಎಸ್, ಗ್ಲಾಸ್ಗೊ, ಯು.ಕೆ) ವಿವರಿಸಿದ್ದಾರೆ. ಮಳೆಗಾಲದಲ್ಲಿ ವಾತಾವರಣದ ಒತ್ತಡ ಕಡಿಮೆಯಾಗುತ್ತದೆ, ಕೀಲುಗಳ ಸುತ್ತಲಿನ ಅಂಗಾಂಶಗಳ ಮತ್ತು ಸೈನೋವಿಯಲ್ ದ್ರವವು ಸ್ವಲ್ಪ ವಿಸ್ತರಣೆಗೊಂಡು ಒತ್ತಡ ಉಂಟಾಗಲು ಕಾರಣವಾಗುತ್ತದೆ. ಇದರಿಂದಾಗಿ ಕೀಲುಗಳ ಸುತ್ತಲಿನ ಮೃದು ಅಂಗಾಂಶಗಳು ನರಗಳ ಮೇಲೆ ಒತ್ತಡ ಹೇರುವುದರಿಂದ ನೋವು ಹೆಚ್ಚಾಗುತ್ತದೆ. ಇದು ಮೊಣಕಾಲುಗಳು ಮತ್ತು ಇತರೆ ಕೀಲುಗಳಲ್ಲಿ ನೋವು ಮತ್ತು ಬಿಗಿತ ಅಧಿಕ ಕಾಣಿಸುತ್ತದೆ. ಗಾಳಿಯಲ್ಲಿ ತೇವಾಂಶ ಹೆಚ್ಚಾದಾಗ ಕೀಲುಗಳಲ್ಲಿನ ದ್ರವವು ದಪ್ಪಗಾಗಬಹುದು ಇಲ್ಲವೇ ಕೀಲುಗಳ ಒಳಭಾಗದಲ್ಲಿ ಸೂಕ್ಷ್ಮವಾದ ಊತ ಉಂಟಾಗಬಹುದು. ಇದು ಕೀಲುಗಳ ಚಲನೆಯನ್ನು ಬಿಗಿಗೊಳಿಸುತ್ತದೆ. ಮಾನ್ಸೂನ್ ಸಮಯದಲ್ಲಿ ಗಾಳಿಯಲ್ಲಿನ ಆರ್ದ್ರತೆಯ ಮಟ್ಟವು ಸ್ನಾಯುಗಳು, ಕೀಲುಗಳ ಮೇಲೆ ಪರಿಣಾಮ ಬೀರುತ್ತದೆ. ಹೆಚ್ಚಿನ ಬಿಗಿತ ಮತ್ತು ಅಸ್ವಸ್ಥತೆಗೆ ಕಾರಣವಾಗುತ್ತದೆ ಎಂದು ವೈದ್ಯರು ವಿವರಿಸುತ್ತಾರೆ. ನಿರಂತರ ಮಳೆಯಿಂದಾಗಿ ಜನರು ಹೆಚ್ಚಾಗಿ ಮನೆಗಳಲ್ಲೇ ಉಳಿಯಬೇಕಾಗುತ್ತದೆ. ಇದರಿಂದ ಶಾರೀರಿಕ ಚಟುವಟಿಕೆಗಳ ಕೊರತೆಗೆ ಕಾರಣವಾಗುತ್ತದೆ.






ಲೇಖಕರು
ವಿಶ್ವಾಸ್ .ಡಿ.ಗೌಡ
ಲೇಖಕರು
ಸಾಮಾಜಿಕ ಚಿಂತಕರು

# ವಕೀಲ (Lawyer) ಅಂದ್ರೆ ಯಾರು? ಅಡ್ವೋಕೇಟ್ (Advocate) ಅಂದ್ರೆ, ಯಾರು? ಈ ಎರಡರ ನಡುವಿನ ವ್ಯತ್ಯಾಸವೇನು?

ಸಾಮಾನ್ಯವಾಗಿ ಸಮಾಜದಲ್ಲಿ ವಕೀಲ ಮತ್ತು ಅಡ್ವೋಕೇಟ್ ಎಂಬ ಪದಗಳನ್ನು ಒಂದೇ ಅರ್ಥದಲ್ಲಿ ಬಳಸಲಾಗುತ್ತದೆ. ನ್ಯಾಯಾಲಯಕ್ಕೆ ಹೋಗುವ ಪ್ರತಿಯೊಬ್ಬ ಕಪ್ಪು ಕೋಟ್ ಧರಿಸಿದ ವ್ಯಕ್ತಿಯನ್ನೂ ಅಡ್ವೋಕೇಟ್ ಅಥವಾ ವಕೀಲ ಎಂದು ಕರೆಯುವುದು ಸಾಮಾನ್ಯ. ಆದರೆ ಕಾನೂನಿನ ದೃಷ್ಟಿಯಿಂದ ಈ ಎರಡು ಪದಗಳ ನಡುವೆ ಮಹತ್ವದ ವ್ಯತ್ಯಾಸವಿದೆ. ಈ ವ್ಯತ್ಯಾಸವನ್ನು ತಿಳಿದುಕೊಳ್ಳುವುದು ಪ್ರತಿಯೊಬ್ಬ ನಾಗರಿಕನಿಗೂ ಅಗತ್ಯವಾಗಿದೆ. ಮೊದಲನೆಯದಾಗಿ (ವಕೀಲ) ಎಂಬ ಪದವನ್ನು ನೋಡೋಣ. ಕಾನೂನು ವಿಷಯದಲ್ಲಿ ಪದವಿ ಪಡೆದ ವ್ಯಕ್ತಿಯನ್ನು ಸಾಮಾನ್ಯವಾಗಿ ಎಂದು ಕರೆಯಲಾಗುತ್ತದೆ. ಅಂದರೆ, ಎಲ್.ಎಲ್.ಬಿ. ಪದವಿಯನ್ನು ಪಡೆದವರು ಕಾನೂನು ಜ್ಞಾನ ಹೊಂದಿರುವ ವೃತ್ತಿಪರರು. ಅವರು ಕಾನೂನು ಸಲಹೆ ನೀಡಬಹುದು, ಒಪ್ಪಂದಗಳನ್ನು ಸಿದ್ಧಪಡಿಸಬಹುದು, ಕಾನೂನು ದಾಖಲೆಗಳನ್ನು ರಚಿಸಬಹುದು, ಕಂಪನಿಗಳಿಗೆ ಅಥವಾ ಖಾಸಗಿ ಸಂಸ್ಥೆಗಳಿಗೆ ಕಾನೂನು ಸಲಹೆಗಾರರಾಗಿ ಕೆಲಸ ಮಾಡಬಹುದು. ಆದರೆ ಕೇವಲ ಕಾನೂನು ಪದವಿ ಪಡೆದಿದ್ದರೆ ಮಾತ್ರ ನ್ಯಾಯಾಲಯದಲ್ಲಿ ಕಕ್ಷಿದಾರರ ಪರವಾಗಿ ವಾದ ಮಂಡಿಸುವ ಹಕ್ಕು ದೊರೆಯುವುದಿಲ್ಲ.ಇದಕ್ಕೆ ವಿರುದ್ಧವಾಗಿ (ಅಡ್ವೋಕೇಟ್) ಎಂಬುದು ಕಾನೂನಿನ ಪ್ರಕಾರ ವಿಶೇಷ ಮಾನ್ಯತೆ ಪಡೆದ ವೃತ್ತಿಪರ ಹುದ್ದೆಯಾಗಿದೆ.

ಎಲ್.ಎಲ್.ಬಿ. ಪದವಿ ಪಡೆದ ನಂತರ ಸಂಬಂಧಿತ ರಾಜ್ಯದ ಬಾರ್ ಕೌನ್ಸಿಲ್‌ನಲ್ಲಿ ನೋಂದಣಿ ಮಾಡಿಸಬೇಕು. ನಂತರ ಅಗತ್ಯ ಅರ್ಹತೆಗಳನ್ನು ಪೂರೈಸಿ ವಕಾಲತ್ತು ನಡೆಸುವ ಅನುಮತಿ ಪಡೆಯಬೇಕು. ಪ್ರಸ್ತುತ ಭಾರತದಲ್ಲಿ ಅನೇಕ ಸಂದರ್ಭಗಳಲ್ಲಿ ಯಶಸ್ವಿಯಾಗಿ ಉತ್ತೀರ್ಣರಾದ ನಂತರವೇ ನ್ಯಾಯಾಲಯಗಳಲ್ಲಿ ವಾದ ಮಂಡಿಸುವ ಹಕ್ಕು ದೊರೆಯುತ್ತದೆ. ಆಗ ಮಾತ್ರ ಆ ವ್ಯಕ್ತಿಯನ್ನು ಎಂದು ಕರೆಯಲಾಗುತ್ತದೆ.

ಸರಳವಾಗಿ ಹೇಳುವುದಾದರೆ,ಅಡ್ವೋಕೇಟ್‌ಗಳು ವಕೀಲರು. ವಕೀಲರು ಅಡ್ವೋಕೇಟ್‌ಗಳಲ್ಲ.

ಇದೇ ಈ ಎರಡರ ನಡುವಿನ ಪ್ರಮುಖ ವ್ಯತ್ಯಾಸವಾಗಿದೆ. ಉದಾಹರಣೆಗೆ, ಒಬ್ಬ ವಿದ್ಯಾರ್ಥಿ ಎಲ್.ಎಲ್.ಬಿ. ಪದವಿ ಪೂರ್ಣಗೊಳಿಸಿ ಕಂಪನಿಯಲ್ಲಿ ಕಾನೂನು ಸಲಹೆಗಾರನಾಗಿ ಕೆಲಸ ಮಾಡುತ್ತಿದ್ದಾನೆ ಎಂದುಕೊಳ್ಳಿ. ಆತ ಆಗಿದ್ದಾನೆ. ಆದರೆ ಆತ ಬಾರ್ ಕೌನ್ಸಿಲ್‌ನಲ್ಲಿ ನೋಂದಾಯಿಸಿಕೊಂಡು ನ್ಯಾಯಾಲಯದಲ್ಲಿ ವಾದ ಮಂಡಿಸುವ ಅಧಿಕಾರ ಪಡೆಯದಿದ್ದರೆ ಆಗಿರುವುದಿಲ್ಲ. ಇನ್ನೊಂದೆಡೆ, ಬಾರ್ ಕೌನ್ಸಿಲ್‌ನಲ್ಲಿ ನೋಂದಾಯಿಸಿಕೊಂಡು ನ್ಯಾಯಾಲಯದಲ್ಲಿ ಕಕ್ಷಿದಾರರ ಪರವಾಗಿ ವಾದ ಮಂಡಿಸುವ ವ್ಯಕ್ತಿ ಆಗಿರುತ್ತಾನೆ. ಆತ ಕಾನೂನು ಸಲಹೆ ನೀಡುವುದರ ಜೊತೆಗೆ ನ್ಯಾಯಾಲಯದಲ್ಲಿ ವಕಾಲತ್ತು ಕೂಡ ನಡೆಸಬಹುದು.

ಭಾರತದಲ್ಲಿ 1961 ಎಂಬ ಕಾನೂನಿನ ಅಡಿಯಲ್ಲಿ ಅಡ್ವೋಕೇಟ್ ವೃತ್ತಿಯನ್ನು ನಿಯಂತ್ರಿಸಲಾಗುತ್ತದೆ. ಈ ಕಾನೂನಿನ ಪ್ರಕಾರ ನೋಂದಾಯಿತ ಅಡ್ವೋಕೇಟ್‌ಗಳಿಗೆ ಮಾತ್ರ ನ್ಯಾಯಾಲಯಗಳಲ್ಲಿ ವಾದ ಮಂಡಿಸುವ ಕಾನೂನುಬದ್ಧ ಅಧಿಕಾರವಿದೆ. ಇದರ ಮೇಲ್ವಿಚಾರಣೆಯನ್ನು ರಾಜ್ಯ ಬಾರ್ ಕೌನ್ಸಿಲ್‌ಗಳು ಹಾಗೂ ನಿರ್ವಹಿಸುತ್ತವೆ.

ಇತ್ತೀಚಿನ ದಿನಗಳಲ್ಲಿ ಕಾನೂನು ಕ್ಷೇತ್ರದಲ್ಲಿ ಹಲವು ಹೊಸ ಅವಕಾಶಗಳು ಮೂಡಿಬಂದಿವೆ. ಕಾನೂನು ಪದವಿ ಪಡೆದವರು ನ್ಯಾಯಾಲಯಕ್ಕೆ ಮಾತ್ರ ಸೀಮಿತವಾಗದೇ, ಕಾರ್ಪೊರೇಟ್ ಕಂಪನಿಗಳು, ಬ್ಯಾಂಕ್‌ಗಳು, ವಿಮಾ ಸಂಸ್ಥೆಗಳು, ಬಹುರಾಷ್ಟ್ರೀಯ ಕಂಪನಿಗಳು, ಶಿಕ್ಷಣ ಸಂಸ್ಥೆಗಳು, ಸರ್ಕಾರಿ ಇಲಾಖೆಗಳು, ಮಾನವ ಹಕ್ಕುಗಳ ಸಂಸ್ಥೆಗಳು, ಎನ್‌ಜಿಒಗಳು ಹಾಗೂ ನ್ಯಾಯಾಂಗ ಸೇವೆಗಳಲ್ಲಿ ತಮ್ಮ ವೃತ್ತಿಜೀವನವನ್ನು ರೂಪಿಸಬಹುದು.

ಇವರೆಲ್ಲರೂ ಆಗಿರಬಹುದು. ಆದರೆ ನ್ಯಾಯಾಲಯದಲ್ಲಿ ವಾದ ಮಂಡಿಸಲು ಆಗಿರುವುದು ಅಗತ್ಯ. ಇಂದಿನ ಸಮಾಜದಲ್ಲಿ ಕಾನೂನಿನ ಅರಿವು ಪ್ರತಿಯೊಬ್ಬರಿಗೂ ಬೇಕಾಗಿದೆ. ನ್ಯಾಯ, ಹಕ್ಕುಗಳು ಮತ್ತು ಕರ್ತವ್ಯಗಳ ಬಗ್ಗೆ ತಿಳಿದಿರುವ ನಾಗರಿಕರು ಉತ್ತಮ ಸಮಾಜ ನಿರ್ಮಾಣಕ್ಕೆ ಕಾರಣರಾಗುತ್ತಾರೆ. ಹಾಗೆಯೇ ಕಾನೂನು ಪದಗಳನ್ನು ಸರಿಯಾದ ಅರ್ಥದಲ್ಲಿ ಬಳಸುವುದು ಸಹ ನಾಗರಿಕ ಪ್ರಜ್ಞೆಯ ಭಾಗವಾಗಿದೆ.

ವಕೀಲ ಮತ್ತು ಅಡ್ವೋಕೇಟ್ ಎಂಬ ಪದಗಳನ್ನು ಒಂದೇ ಅರ್ಥದಲ್ಲಿ ಬಳಸುವುದು ಸಾಮಾನ್ಯವಾದರೂ, ಕಾನೂನಿನ ದೃಷ್ಟಿಯಿಂದ ಅವು ವಿಭಿನ್ನವಾಗಿವೆ. ಕಾನೂನು ಶಿಕ್ಷಣ ಪಡೆದ ವ್ಯಕ್ತಿ. ಎಂದರೆ ಕಾನೂನು ಶಿಕ್ಷಣದ ಜೊತೆಗೆ ಬಾರ್ ಕೌನ್ಸಿಲ್‌ನಲ್ಲಿ ನೋಂದಾಯಿಸಿಕೊಂಡು ನ್ಯಾಯಾಲಯದಲ್ಲಿ ವಾದ ಮಂಡಿಸುವ ಕಾನೂನುಬದ್ಧ ಹಕ್ಕು ಪಡೆದ ವ್ಯಕ್ತಿ. ಹೀಗಾಗಿ ಮುಂದಿನ ಬಾರಿ ಯಾರನ್ನಾದರೂ ಅಡ್ವೋಕೇಟ್ ಎಂದು ಕರೆಯುವ ಮೊದಲು ಅವರು ಕೇವಲ ಕಾನೂನು ಪದವೀಧರರೇ ಅಥವಾ ನ್ಯಾಯಾಲಯದಲ್ಲಿ ವಕಾಲತ್ತು ನಡೆಸುವ ನೋಂದಾಯಿತ ಅಡ್ವೋಕೇಟ್‌ರೇ ಎಂಬುದನ್ನು ಅರಿತುಕೊಳ್ಳುವುದು ಉತ್ತಮ.

### ಕೊನೆಯ ಮಾತು

**ಜ್ಞಾನವು ಕೇವಲ ಪುಸ್ತಕಗಳಲ್ಲಿ ಇರಬಾರದು ಅದು ನಮ್ಮ ದೈನಂದಿನ ಜೀವನದಲ್ಲೂ ಉಪಯೋಗವಾಗಬೇಕು. ಮತ್ತು ನಡುವಿನ ಈ ಸಣ್ಣದಾದರೂ ಮಹತ್ವದ ವ್ಯತ್ಯಾಸವನ್ನು ತಿಳಿದುಕೊಳ್ಳುವುದರಿಂದ ಕಾನೂನು ವ್ಯವಸ್ಥೆಯ ಬಗ್ಗೆ ನಮ್ಮ ಅರಿವು ಇನ್ನಷ್ಟು ವಿಸ್ತಾರವಾಗುತ್ತದೆ. ಸರಿಯಾದ ಪದವನ್ನು ಸರಿಯಾದ ಸಂದರ್ಭದಲ್ಲಿ ಬಳಸುವುದು ನಮ್ಮ ಕಾನೂನು ಜಾಗೃತಿಯ ಸಂಕೇತವಾಗಿದೆ.**

# ಆರೋಗ್ಯಕರ ವೈವಾಹಿಕ ಸಂಬಂಧಕ್ಕಾಗಿ ನವವಿವಾಹಿತರು ಅನುಸರಿಸಬೇಕಾದ ತಜ್ಞರ ಸೂಪರ್ ಟಿಪ್ಸ್ ಇವು

ಖಾಲಿ ಕ್ಯಾನ್ವಾಸ್‌ನ ಮೇಲೆ ಸುಂದರವಾದ ವರ್ಣಚಿತ್ರವನ್ನು ರಚಿಸಲು ಕಲಾವಿದ ಸರಿಯಾದ ಬಣ್ಣಗಳು ಮತ್ತು ಕುಂಚಗಳನ್ನು ಆರಿಸಿಕೊಳ್ಳಬೇಕಾಗುತ್ತದೆ. ನವ ವೈವಾಹಿಕ ಜೀವನವು ಖಾಲಿ ಕ್ಯಾನ್ವಾಸ್‌ನಂತಿದ್ದು, ಅದನ್ನು ಗಂಡ ಮತ್ತು ಹೆಂಡತಿ ತಮ್ಮ ಅನುಭವಗಳು, ಭಾವನೆಗಳು ಮತ್ತು ಪರಸ್ಪರ ತಿಳುವಳಿಕೆಯ ಬಣ್ಣಗಳಿಂದ ತುಂಬುತ್ತಾರೆ. ಕಲೆಯಂತೆಯೇ ಈ ಸುಂದರ ಪ್ರಯಾಣದ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಲು ಕೆಲವು ಮೂಲಭೂತ ಅಂಶಗಳಿಗೆ ಗಮನ ಹರಿಸಬೇಕಾಗುತ್ತದೆ. ನವವಿವಾಹಿತರು ತಮ್ಮ ಕನಸುಗಳೊಂದಿಗೆ ಹೊಂದಿಕೊಂಡ ಭವಿಷ್ಯವನ್ನು ನಿರ್ಮಿಸಲು, ಉತ್ತಮ ಬಾಂಧವ್ಯ ಹಾಗೂ ಪರಸ್ಪರ ತಿಳಿವಳಿಕೆ ನಿರ್ಣಾಯಕವಾಗಿದೆ ಎಂದು ಮನೋವೈದ್ಯರು ತಿಳಿಸುತ್ತಾರೆ.

ಇದನ್ನು ಸಾಧಿಸಲು ನವದಂಪತಿಗಳು ಕೆಲವು ಪ್ರಮುಖ ಅಂಶಗಳ ಮೇಲೆ ಕೇಂದ್ರೀಕರಿಸಬೇಕಾಗುತ್ತದೆ. ಆ ಪ್ರಮುಖ ವಿಷಯಗಳು ಯಾವುವು ಎಂಬುದನ್ನು ಅರಿತುಕೊಳ್ಳೋಣ.ತಜ್ಞರು ಆರ್ಥಿಕ ಗುರಿಗಳನ್ನು ಚರ್ಚಿಸುವುದು, ಒಟ್ಟಿಗೆ ಯೋಜಿಸುವುದು. ಇಬ್ಬರೂ ಪಾಲುದಾರರು ಬಜೆಟ್, ಉಳಿತಾಯ ಮತ್ತು ವೆಚ್ಚಗಳ ಬಗ್ಗೆ ಸ್ಪಷ್ಟ ತಿಳಿವಳಿಕೆಯನ್ನು ಹೊಂದಿದ್ದರೆ ಹಣಕ್ಕೆ ಸಂಬಂಧಿಸಿದ ಭವಿಷ್ಯದ ಘರ್ಷಣೆಗಳನ್ನು ತಪ್ಪಿಸಬಹುದು.


ಇದನ್ನು ಸುಲಭಗೊಳಿಸಲು ಬಜೆಟ್ ಪರಿಶೀಲಿಸಲು ನೀವು ತಿಂಗಳಿಗೊಮ್ಮೆ ಹಣಕಾಸು ಚರ್ಚೆಯ ದಿನ ಗೊತ್ತುಪಡಿಸಬಹುದು ಎಂದು ತಜ್ಞರು ತಿಳಿಸುತ್ತಾರೆ. ಮನೆಯನ್ನು ಸುಂದರಗೊಳಿಸುವತ್ತ ಗಮನಹರಿಸಬೇಕಾಗುತ್ತದೆ. ಮನೆಯ ಅಲಂಕಾರವು ಎರಡೂ ಸಂಗಾತಿಗಳ ಆದ್ಯತೆಗಳು ಮತ್ತು ಆಲೋಚನೆಗಳನ್ನು ಪ್ರತಿಬಿಂಬಿಸಬೇಕು. ಮನೆಯಲ್ಲಿ ಶಾಂತಿಯುತ ವಾತಾವರಣವನ್ನು ಸೃಷ್ಟಿಸುವುದು. ನೀವು ಹಿಂದಿರುಗಿದ ನಂತರ ದಿನದ ಆಯಾಸ ಕಡಿಮೆಮಾಡಿ, ಮನಸ್ಸನ್ನು ಸಂತೋಷ ಹಾಗೂ ಶಾಂತವಾಗಿರಿಸುತ್ತದೆ ಎನ್ನುತ್ತಾರೆ ತಜ್ಞರು. ನವವಿವಾಹಿತರು ತಮ್ಮ ಭಾವನೆಗಳನ್ನು ಮುಕ್ತವಾಗಿ ಮತ್ತು ಪ್ರಾಮಾಣಿಕವಾಗಿ ವ್ಯಕ್ತಪಡಿಸುವುದು ಅತ್ಯಗತ್ಯವಾಗಿದೆ. ನಿಮ್ಮ ದೈನಂದಿನ ಚಟುವಟಿಕೆಗಳು, ಅನುಭವಗಳು, ಸಂತೋಷಗಳು ಹಾಗೂ ಕಾಳಜಿಗಳನ್ನು ಪರಸ್ಪರ ಹಂಚಿಕೊಳ್ಳಲು ನೀವು ನಿತ್ಯ ಸಮಯವನ್ನು ಮೀಸಲಿಡಬೇಕು. ಹೀಗೆ ಮಾಡುವುದರಿಂದ ನಿಮ್ಮ ಸಂಗಾತಿಯನ್ನು ಅರ್ಥಮಾಡಿಕೊಳ್ಳಲಾಗಿದೆ ಹಾಗೂ ಗೌರವಿಸಲಾಗಿದೆ ಎಂದು ಭಾವಿಸಬಹುದು. ಬಲವಾದ ಹಾಗೂ ಆರೋಗ್ಯಕರ ಸಂಬಂಧಕ್ಕೆ ಅಡಿಪಾಯ ಹಾಕಲಾಗುತ್ತದೆ. ತಜ್ಞರು ನಿಮ್ಮ ಸಂಗಾತಿಯ ಸ್ನೇಹಿತರನ್ನು ತಿಳಿದುಕೊಳ್ಳಲು ಸೂಚಿಸುತ್ತಾರೆ. ಅವರು ತಮ್ಮ ಸ್ನೇಹಿತರ ಗುಂಪನ್ನು ಮನೆಗೆ ಆಹ್ವಾನಿಸಿ ಅವರಿಗೆ ಆತಿಥ್ಯ ವಹಿಸಬೇಕು. ಇದು ನಿಮ್ಮ ಸಂಗಾತಿ ಬೆಳೆದ ಪರಿಸರ, ಸ್ನೇಹ ಹಾಗೂ ಸಂಬಂಧಗಳ ಮೇಲೆ ಅವರು ನೀಡುವ ಮೌಲ್ಯವನ್ನು ಅರ್ಥಮಾಡಿಕೊಳ್ಳಲು ನಿಮಗೆ ಸಹಾಯ ಮಾಡುತ್ತದೆ. ಅಂತಹ ಸಂವಹನಗಳು ಪತಿ, ಪತ್ನಿಯ ನಡುವಿನ ಬಾಂಧವ್ಯವನ್ನು ಬಲಪಡಿಸಬಹುದು.

ತಿಂಗಳಿಗೊಮ್ಮೆಯಾದರೂ ಒಟ್ಟಿಗೆ ಹೋಗುವ ಅಭ್ಯಾಸವನ್ನು ಮಾಡಿಕೊಳ್ಳಬೇಕಾಗುತ್ತದೆ. ರೆಸ್ಟೋರೆಂಟ್‌ಗೆ ಭೇಟಿ ನೀಡಿ. ಬಹುಶಃ ತಿಂಗಳ ಕೊನೆಯ ಭಾನುವಾರ ಅಥವಾ ಇನ್ನಾವುದೇ ದಿನ, ಸಂಭಾಷಣೆ ನಡೆಸುವಾಗ ಮೋಜಿನ ಭೋಜನ ಆನಂದಿಸಿ. ಹೆಚ್ಚುವರಿಯಾಗಿ, ನೀವು ಆನಂದಿಸುವ ಸ್ಥಳಗಳಿಗೆ ಮತ್ತೆ ಭೇಟಿ ನೀಡಬೇಕಾಗುತ್ತದೆ. ದೈನಂದಿನ ದಿನಚರಿಗಳಿಂದ ಮುಕ್ತವಾಗಲು ನಿಮಗೆ ಸಹಾಯ ಮಾಡುತ್ತದೆ ಎಂದು ತಜ್ಞರು ತಿಳಿಸುತ್ತಾರೆ.

# ಮಳೆಗಾಲದಲ್ಲಿ ನಿಮ್ಮ ದೇಹದಲ್ಲಿ ರೋಗನಿರೋಧಕ ಶಕ್ತಿ ಕುಗ್ಗುತ್ತದೆಯೇ? ಇಮ್ಯೂನಿಟಿ ಪವರ್ ವೃದ್ಧಿಸುವ ಮನೆ ಮದ್ದುಗಳಿವು!

ಬೇಸಿಗೆ ಕಳೆದುಹೋಗಿದ್ದು, ಇದೀಗ ಮಾನ್ಸೂನ್ ಶುರುವಾಗಿದೆ. ಈ ಸಮಯದಲ್ಲಿ ಋತುಮಾನದ ಕಾಯಿಲೆಗಳು ಹೆಚ್ಚಾಗಿ ಕಾಡುತ್ತವೆ. ದೇಹದ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವುದು ಇವುಗಳನ್ನು ಎದುರಿಸಲು ಸಹಾಯ ಮಾಡುತ್ತದೆ. ಇದಕ್ಕಾಗಿ ನಿಮಗೆ ಮಾತ್ರೆಗಳ ಅಗತ್ಯವಿಲ್ಲ. ಮನೆಯಲ್ಲಿ ಲಭ್ಯವಿರುವ ನೈಸರ್ಗಿಕ ಪದಾರ್ಥಗಳನ್ನು ಬಳಸುವುದು ಸಾಕು. ಅರಿಶಿನವು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವಲ್ಲಿ ಹೆಚ್ಚು ಪರಿಣಾಮಕಾರಿಯಾಗಿದೆ.ಅರಿಶಿನವು ಕರ್ಕ್ಯುಮಿನ್ ಎಂಬ ಸಂಯುಕ್ತವನ್ನು ಹೊಂದಿರುತ್ತದೆ. ಇದು ಪ್ರಬಲವಾದ ಉರಿಯೂತದ ಗುಣಗಳನ್ನು ಹೊಂದಿದೆ. ಇದು ಮಳೆಗಾಲದಲ್ಲಿ ರೋಗನಿರೋಧಕ ಶಕ್ತಿಯನ್ನು ಬೆಂಬಲಿಸುವ ಮೂಲಕ ಸೋಂಕುಗಳ ಅಪಾಯವನ್ನು ಕಡಿಮೆ ಮಾಡಲು ತುಂಬಾ ಸಹಾಯ ಮಾಡುತ್ತದೆ. ಕರಿಮೆಣಸಿನೊಂದಿಗೆ ಅರಿಶಿನವನ್ನು ಸೇವಿಸುವುದರಿಂದ ಕರ್ಕ್ಯುಮಿನ್ ಹೀರಿಕೊಳ್ಳುವಿಕೆ ಹೆಚ್ಚಾಗುತ್ತದೆ. ಅರಿಶಿನದ ರೋಗನಿರೋಧಕ ಶಕ್ತಿಯನ್ನು ಬಲಪಡಿಸುವ ಪರಿಣಾಮಗಳನ್ನು ಮತ್ತಷ್ಟು ಹೆಚ್ಚಿಸುತ್ತದೆ. ನೀವು ಪ್ರತಿದಿನ ಅರಿಶಿನವನ್ನು ಸೇವಿಸಲು ಬಯಸಿದರೆ, ನೀವು ಗೋಲ್ಡನ್ ಮಿಲ್ಕ್ ಅನ್ನು ತಯಾರಿಸಬಹುದು.

ಇದನ್ನು ಬೆಚ್ಚಗಿನ ಹಾಲಿಗೆ ಅರಿಶಿನವನ್ನು ಸೇರಿಸಿ ಕುದಿಸಿ ತಯಾರಿಸಲಾಗುತ್ತದೆ. ಅದೇ ರೀತಿಯಾಗಿ ರೈಸ್ ಅನ್ನು ತುಪ್ಪ ಮತ್ತು ಕರಿಮೆಣಸಿನೊಂದಿಗೆ ಒಗ್ಗರಣೆ ಮಾಡುವಾಗ ಅಥವಾ ನಿಮ್ಮ ಚಹಾಕ್ಕೆ ಸೇರಿಸುವಾಗ ನೀವು ಇದನ್ನು ಬಳಸಬಹುದು. ಇಂತಹ ಸಾಂಪ್ರದಾಯಿಕ ಅಭ್ಯಾಸಗಳು ಮಳೆಗಾಲದಲ್ಲಿ ಅನಾರೋಗ್ಯವನ್ನು ದೂರವಿಡಲು ಸಹಾಯ ಮಾಡುತ್ತದೆ. ಶುಂಠಿಯು ಜಿಂಜರಾಲ್ ಎಂಬ ಜೈವಿಕ ಸಕ್ರಿಯ ಸಂಯುಕ್ತವನ್ನು ಹೊಂದಿದ್ದು, ಇದು ಆಯಂಟಿ ವೈರಲ್ ಮತ್ತು ಉರಿಯೂತ ನಿವಾರಕ ಗುಣಗಳನ್ನು ಹೊಂದಿದೆ. ಇದು ಮಳೆಗಾಲದಲ್ಲಿ ಆಗಾಗ್ಗೆ ಸಂಭವಿಸುವ ಶೀತ ಹಾಗೂ ಜೀರ್ಣಕಾರಿ ಸಮಸ್ಯೆಗಳಂತಹ ಸಾಮಾನ್ಯ



ಕಾಯಿಲೆಗಳನ್ನು ಪರಿಣಾಮಕಾರಿಯಾಗಿ ಎದುರಿಸುತ್ತದೆ. ಕಾಶ್ಮೀರಿ ಕಹ್ವಾ (ಮಸಾಲೆಯುಕ್ತ ಶುಂಠಿ-ಹಸಿರು ಚಹಾ) ಮತ್ತು ದಕ್ಷಿಣ ಭಾರತೀಯ ರಸಂ (ಶುಂಠಿ-ಹುಣಸೆ ಸೂಪ್) ನಂತಹ ಪ್ರಾದೇಶಿಕ ಪ್ರಭೇದಗಳು ವಿಶೇಷವಾಗಿ ಋತುಮಾನದ ಪರಿವರ್ತನೆಯ ಸಮಯದಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ಗುಣಲಕ್ಷಣಗಳಿಗೆ ಹೆಸರುವಾಸಿಯಾಗಿದೆ.

ತುರಿದ ಶುಂಠಿ, ಜೇನುತುಪ್ಪ ಹಾಗೂ ನಿಂಬೆ ರಸವನ್ನು ಸೇರಿಸಿ ತಯಾರಿಸಿದ ತ್ವರಿತ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ಶಾಟ್ ವರ್ಷಗಳಲ್ಲಿ ಜನಪ್ರಿಯತೆಯನ್ನು ಗಳಿಸಿದೆ. ಮಾನ್ಸೂನ್ ಸಂಬಂಧಿತ ಉಸಿರಾಟದ ಸೋಂಕುಗಳನ್ನು ನಿವಾರಿಸಲು ತುಂಬಾ ಸಹಾಯ ಮಾಡುತ್ತದೆ ಎಂದು ಆರೋಗ್ಯ ತಜ್ಞರು ಸಲಹೆ ನೀಡುತ್ತಾರೆ. ಮಾನ್ಸೂನ್ ಸಮಯದಲ್ಲಿ ಚರ್ಮಕ್ಕೆ ರಕ್ಷಣಾತ್ಮಕ ಗುರಾಣಿಯಾಗಿ ಕೆಲಸ ಮಾಡುತ್ತದೆ.



ವಿದ್ಯಾರ್ಥಿ ವಿಜಯ
ಡಾ.ಸುಧಾಕರ.ಜಿ. ಲಕ್ಕವಳ್ಳಿ
ಲೇಖಕರು
ಸಾಮಾಜಿಕ ಚಿಂತಕರು
13

**ಗೆಲುವಿನ ಮೆಟ್ಟಿಲೇರುವ ವಿದ್ಯಾರ್ಥಿ ಮೊದಲು ಸಮಯದ ಗೆಳೆಯನಾಗಬೇಕು. ಪಾಠದ ಪವಿತ್ರ ಗಳಿಗೆಯಲ್ಲಿ ಮನಸ್ಸನ್ನು ಅಲೆದಾಡಲು ಬಿಡದೆ, ಏಕಾಗ್ರತೆಯ ಲಗಾಮು ಹಾಕಬೇಕು. ಮೊಬೈಲ್‌ನ ಮೋಹ, ಅನಗತ್ಯ ಮನರಂಜನೆಯ ಸೆಳೆತ, ಕ್ಷಣಿಕ ಸುಖಗಳೆಂಬ ಮರೀಚಿಕೆಯನ್ನು ಗೆದ್ದಾಗಲೇ ಶಿಸ್ತಿನ ಕೋಟೆ ಕಟ್ಟಲು ಸಾಧ್ಯ. ಸಮಯದ ಪ್ರತಿ ಹನಿಯನ್ನು ಜ್ಞಾನದ ಕಲಶದಲ್ಲಿ ತುಂಬಿಕೊಳ್ಳುವ ಸಂಕಲ್ಪವೇ ಸಾಧನೆಯ ಬುನಾದಿ.**

## ಯಶಸ್ಸಿನ ರಿಮೋಟ್ ನಿನ್ನ ಕೈಯಲ್ಲಿ



ವಿದ್ಯಾರ್ಥಿ ಬದುಕಿನ ವಿಜಯಪಥಕ್ಕೆ ದಾರಿದೀಪವೇ ಸ್ವಯಂ ನಿಯಂತ್ರಣ. ಕೈಯಲ್ಲಿರುವ ರಿಮೋಟ್‌ನಿಂದ ಬೇಕಾದ ವಾಹಿನಿಯನ್ನು ಆರಿಸುವಂತೆ, ನಮ್ಮ ಆಲೋಚನೆ, ಅಭ್ಯಾಸ ಮತ್ತು ಸಮಯದ ಮೇಲೆ ನಮಗೆ ಹಿಡಿತವಿದ್ದರೆ ಜೀವನವನ್ನು ಯಶಸ್ಸಿನ ದಿಕ್ಕಿಗೆ ತಿರುಗಿಸಬಹುದು. ಗುರಿಯೆಂಬ ದೀಪವನ್ನು ಬೆಳಗುವ ಸ್ವಿಚ್ ನಮ್ಮ ಅಂತರಂಗದಲ್ಲೇ ಇದೆ. ಹೀಗಾಗಿ ಯಶಸ್ಸಿನ ರಿಮೋಟ್ ನಿಜಕ್ಕೂ ನಮ್ಮ ಕೈಯಲ್ಲಿದೆ.

ವಿಜ್ಞಾನವೂ ಇದನ್ನು ಪುಷ್ಟೀಕರಿಸುತ್ತದೆ. ಸ್ವಯಂ ನಿಯಂತ್ರಣ ಮೆದುಳಿನ ನಿರ್ಣಯ ಶಕ್ತಿಯನ್ನು ಹರಿತಗೊಳಿಸಿ, ಗುರಿಯತ್ತ ಸಾಗುವ ದಾರಿಯನ್ನು ಸುಗಮಗೊಳಿಸುತ್ತದೆ. ನಿತ್ಯದ ಶಿಸ್ತುಬದ್ಧ ಅಭ್ಯಾಸ ಮೆದುಳಿನಲ್ಲಿ ಹೊಸ ನರಸೇತುವೆಗಳನ್ನು ನಿರ್ಮಿಸಿ, ಏಕಾಗ್ರತೆ, ಸ್ಮರಣಶಕ್ತಿ ಮತ್ತು ಆತ್ಮವಿಶ್ವಾಸದ ರೆಕ್ಕೆಗಳನ್ನು ಬಲಪಡಿಸುತ್ತದೆ. ಇದು ಪರೀಕ್ಷೆಗಷ್ಟೇ ಅಲ್ಲ, ಬದುಕಿನ ಪ್ರತಿ ಸವಾಲಿಗೂ ಬೇಕಾದ ಮನೋಬಲ.

ತನ್ನ ಮೇಲೆ ತಾನೇ ಅಂಕುಶವಿಟ್ಟುಕೊಂಡ ವಿದ್ಯಾರ್ಥಿಗೆ ಸವಾಲುಗಳು ಸೋಪಾನಗಳಾಗುತ್ತವೆ. ಅವನು ಸಮಯವೆಂಬ ಸಂಪತ್ತನ್ನು ಅರಿತು, ಪ್ರತಿ ಕ್ಷಣವನ್ನೂ ಸಾಧನೆಯ ಮೆಟ್ಟಿಲಾಗಿಸುತ್ತಾನೆ. ಯಶಸ್ಸಿನ ರಿಮೋಟ್ ಅವನ ಕೈಯಲ್ಲಿದೆ. ಅದನ್ನು ವಿವೇಕದಿಂದ ಬಳಸಿದರೆ ವಿಜಯಲಕ್ಷ್ಮಿ ತಾನಾಗಿಯೇ ಒಲಿದು ಬರುತ್ತಾಳೆ. ಫಲದ ಬೀಜ ಬಿತ್ತಿದರೆ ಫಲದ ಹೂ ಅರಳುವುದು ನಿಶ್ಚಿತ.

# ಅಸ್ತಮಾ ನಿಯಂತ್ರಕ ಭುಜಂಗಾಸನ

**ಈ ಆಸನದಲ್ಲಿ ಭುಜಗಳು ಹಿಂದಕ್ಕೆ ಸರಿದು ಶ್ವಾಸಕೋಶಗಳು ಪೂರ್ಣ ವಿಸ್ತರಿಸುತ್ತವೆ. ಹೆಚ್ಚು ಗಾಳಿಯನ್ನು ಹೀರುವ, ಹಿಡಿದಿಡುವ ತಾಕತ್ತು ಬರುತ್ತದೆ.**

**ಡಯಾಫ್ರಮ್ ಮತ್ತು ಪಕ್ಕೆಲುಬಿನ ಸ್ನಾಯುಗಳು ಗಟ್ಟಿಯಾಗಿ, ಕಟ್ಟಿದ ಕಫ ಸಡಿಲಗೊಂಡು ಹೊರಬೀಳುತ್ತದೆ. ಉಸಿರು ಆಳವಾಗಿ, ನಿಧಾನವಾಗಿ, ಲಯಬದ್ಧವಾಗಿ ಸಾಗುತ್ತದೆ. ನಿಯಮಿತ ಅಭ್ಯಾಸ ಅಸ್ತಮಾ ದಾಳಿಯ ಆವರ್ತನೆ ಕಡಿಮೆ ಮಾಡಿ, ಗೊರಕೆ-ಕೆಮ್ಮಿಗೆ ಕಡಿವಾಣ ಹಾಕುತ್ತದೆ. ಬೆನ್ನುಮೂಳೆ ನಮ್ಯವಾಗಿ ನೋವು ಇಳಿಯುತ್ತದೆ, ಥೈರಾಯ್ಡ್-ಅಡ್ರಿನಲ್ ಗ್ರಂಥಿಗಳು ಚುರುಕಾಗಿ ರೋಗನಿರೋಧಕ ಶಕ್ತಿ ಚಿಗುರುತ್ತದೆ.**




ಡಾ. ಈರಪ್ಪ ಲಕ್ಷ್ಮಣ ಘುಸ್ತಿ

ಅಸ್ತಮಾ ಎಂದರೆ ಉಸಿರಿಗಾಗಿ ನಡೆಸುವ ಮೂಕ ಯುದ್ಧ. ಎದೆಯ ಬಿಗಿತ, ಗೊರಕೆ, ಕೆಮ್ಮು, ಉಸಿರುಗಟ್ಟುವಿಕೆ ಇವು ದಿನದ ನೆಮ್ಮದಿಯನ್ನೇ ಅಪಹರಿಸುತ್ತವೆ. ಮಾತ್ರೆ, ಇನ್‌ಹೇಲರ್‌ಗಳ ಜೊತೆಗೆ ಯೋಗವೆಂಬ ಸ್ನೇಹಿತನನ್ನು ಜೊತೆಗೂಡಿಸಿದರೆ, ಶ್ವಾಸಕೋಶಕ್ಕೆ ಹೊಸ ರೆಕ್ಕೆ ಮೂಡುತ್ತದೆ. ಭುಜಂಗಾಸನ ಅಂತಹದ್ದೊಂದು ಸಂಜೀವಿನಿ. ಹೆಡೆ ಎತ್ತಿದ ನಾಗರಹಾವಿನಂತೆ ದೇಹವನ್ನು ಬಾಗಿಸಿದಾಗ, ಎದೆಯ ಪಂಜರದ ಕಿಟಕಿಗಳೆಲ್ಲ ತೆರೆದುಕೊಳ್ಳುತ್ತವೆ. ಮುಚ್ಚಿದ ಶ್ವಾಸನಾಳಕ್ಕೆ ಬೆಳಕು ಹರಿಯುತ್ತದೆ.

**ಅಭ್ಯಾಸ ಸರಳ:** ಹೊಟ್ಟೆ ಕೆಳಗೆ ಬರುವಂತೆ ಮಲಗಿ, ಅಂಗೈ ಎದೆಯ ಪಕ್ಕ ಊರಿ. ಉಸಿರೆಳೆದುಕೊಳ್ಳುತ್ತ ತಲೆ, ಎದೆ, ಹೊಟ್ಟೆಯ ಮೇಲ್ಭಾಗವನ್ನು ನಿಧಾನ ಎತ್ತಿ. ಹೊಕ್ಕಳು ಮಾತ್ರ ನೆಲಕ್ಕೆ ಅಂಟಿರಲಿ. ಭುಜ ಹಿಂದಕ್ಕೆ, ಎದೆ ಮುಂದಕ್ಕೆ, ದೃಷ್ಟಿ ಮೇಲಕ್ಕೆ. 5-10 ಸೆಕೆಂಡ್ ಸಹಜ ಉಸಿರಾಟದೊಂದಿಗೆ ನಿಲ್ಲಿ. ಉಸಿರು ಬಿಡುತ್ತ ಕೆಳಗಿಳಿದು ಶವಾಸನದಲ್ಲಿ ವಿಶ್ರಮಿಸಿ. ದಿನಕ್ಕೆ 3-5 ಬಾರಿ ಸಾಕು.

**ಆದರೆ ಎಚ್ಚರ:** ಅಂಡವಾಯು, ತೀವ್ರ ಬೆನ್ನುನೋವು, ಸ್ಲಿಪ್ ಡಿಸ್ಕ್, ಇತ್ತೀಚಿನ ಹೊಟ್ಟೆ ಶಸ್ತ್ರಚಿಕಿತ್ಸೆ, ಅಧಿಕ ರಕ್ತದೊತ್ತಡ ಇದ್ದವರು ದೂರವಿರಿ. ಗರ್ಭಿಣಿಯರು, ಬಾಣಂತಿಯರು ಮಾಡಲೇಬಾರದು. ಅಸ್ತಮಾ ಉಲ್ಬಣಗೊಂಡಾಗ ಅಭ್ಯಾಸ ಬೇಡ. ಭುಜಂಗಾಸನ ಪೂರಕ ಮಾತ್ರ ಇನ್‌ಹೇಲರ್, ಔಷಧಿ ನಿಲ್ಲಿಸಬೇಡಿ. ವೈದ್ಯರ ಸಲಹೆ, ಗುರುಗಳ ಮಾರ್ಗದರ್ಶನ ಇದ್ದೇ ಇರಲಿ. ಉಸಿರಿನ ದಾರಿ ಸುಗಮವಾದರೆ, ಬದುಕಿನ ದಾರಿಯೂ ಸುಂದರ.



## ನೃತ್ಯ ದಿಶಾ ಟ್ರಸ್ಟ್‌ನ ಯಶಸ್ವಿ ನೃತ್ಯ ನೀರಾಜನ

• **ಉದಯವಾಹಿನಿ, ಬೆಂಗಳೂರು**

ನಗರದ ಹೆಸರಾಂತ ಭರತನಾಟ್ಯ ಸಂಸ್ಥೆಯಾದ ನೃತ್ಯ ದಿಶಾ ಟ್ರಸ್ಟಿನ ಗುರು 'ಕಲಾಭೂಷಿಣಿ' ಡಾ|| ದರ್ಶಿನಿ ಮಂಜುನಾಥ್ ಅವರ ನಿರ್ದೇಶನದಲ್ಲಿ ಜೆ.ಸಿ. ರಸ್ತೆಯ ಎಡಿಎ ರಂಗಮಂದಿರದಲ್ಲಿ 2026ರ ಸಾಲಿನ ನೃತ್ಯ ನೀರಾಜನ ಕಿರಿಯರ ನೃತ್ಯ ಉತ್ಸವ-13 ''ಹರ್ಷಪ್ರವಾ'' ಕಾರ್ಯಕ್ರಮ ಜರುಗಿತು.

ಡಾ|| ದರ್ಶಿನಿ ಮಂಜುನಾಥ್ ರವರ ಶಿಷ್ಯೆಯರಾದ ಕು|| ಹರ್ಷಿತಾ ಶ್ರೀರಾಮ್, ಕು|| ಪ್ರಾರ್ಥನಾ ಯೋಗಾನಂದ, ಕು|| ವರ್ಷ ಎಸ್. ಏಕ್ಬೋಟೆ ಇವರುಗಳು ಭರತನಾಟ್ಯ ಕಾರ್ಯಕ್ರಮ ನೀಡಿ ಪ್ರಸಂಶೆಗೆ ಪಾತ್ರರಾದರು. ಮೊದಲಿಗೆ ಕಲಾವಿದೆಯರು ಆದಿ ತಾಳ ಮೋಹನ ರಾಗದ ಪುಷ್ಪಾಂಜಲಿಯೊಂದಿಗೆ ಗಣೇಶ ಶ್ಲೋಕವನ್ನು ಪ್ರದರ್ಶಿಸಿ, ಕಾರ್ಯಕ್ರಮ ಪ್ರಾರಂಭಗೊಳಿಸಿ, ಮಿಶ್ರ ಅಲರಿಪು ಪ್ರದರ್ಶಿಸಿದ್ದು, ಮುಂದಿನ ಪ್ರಸ್ತುತಿ ತೋಡಿ ಜತಿಸ್ವರವಾಗಿತ್ತು. ಏಕ ವ್ಯಕ್ತಿ ಪ್ರದರ್ಶನದಲ್ಲಿ, ಕು|| ಪ್ರಾರ್ಥನ ಕಂಡೆ ಕರುಣಾನಿಧಿಯಾ, ಕು|| ವರ್ಷ ಕನಕದಾಸರ ವಿರಚಿತ ಬಾಗಿಲನು ತೆರೆದು, ಕು|| ಹರ್ಷಿತಾ ಹನುಮಂತ ದೇವ ನಮೋ ಕೃತಿ ನರ್ತಿಸಿದರು. ನಂತರ ಮೂರೂ ಕಲಾವಿದರು ''ನಾಮ ದೇವ ಕೀರ್ತನ'' ಪ್ರಸಿದ್ಧ ಮರಾಠಿ ಅಭಂಗ್ ನರ್ತಿಸಿದರು. ಕೊನೆಯಲ್ಲಿ ಕದನಕುತುಹಲ ತಿಲ್ಲಾನ ಹಾಗೂ ಗರುಡ ಗಮನ ಮಂಗಳದೊಂದಿಗೆ ಕಾರ್ಯಕ್ರಮ ಸಂಪೂರ್ಣಗೊಳಿಸಿ ನೆರೆದಿದ್ದ ನೂರಾರು ಪ್ರೇಕ್ಷಕರ ಪ್ರಶಂಸೆಗೆ ಪಾತ್ರರಾದರು.



ಉದಯ ವಾಹಿನಿ
ಪ್ರಾದೇಶಿಕ
ಭಾನುವಾರ
05 ಜುಲೈ 2026
05

# ಮಳೆ ಆತಂಕ ದೂರ ಆಗಿದೆ, ಜಲಾಶಯಗಳಿಗೆ ನೀರು ಬರುತ್ತಿದೆ: ಸಚಿವ ಸತೀಶ್ ಜಾರಕಿಹೊಳಿ

## ಶೇ.29ರಷ್ಟು ಮಳೆ ಕೊರತೆ ಉಂಟಾಗಿದ್ದು, ಈಗ ಆಗುತ್ತಿರುವಂತೆ ಮುಂದೆಯೂ ಮಳೆಯಾದರೆ ಕೊರತೆ! ಆಗಲ್ಲ

• **ಉದಯವಾಹಿನಿ ಬೆಳಗಾವಿ:**

ಸದ್ಯಕ್ಕೆ ಮಳೆ ಆಗುತ್ತಿಲ್ಲ ಎನ್ನುವ ಆತಂಕ ದೂರ ಆಗಿದೆ. ಒಂದು ವಾರ ಹೀಗೆ ಮಳೆ ಆದರೆ, ನಾಲ್ಕೈದು ತಿಂಗಳು ಸಾಕಾಗುವಷ್ಟು ನೀರು ಜಲಾಶಯಗಳಲ್ಲಿ ಸಂಗ್ರಹವಾಗಲಿದೆ. ಮಳೆ ಹೆಚ್ಚಾದರೆ ಇನ್ನೂ ಅನುಕೂಲ ಆಗಲಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಪ್ರಕೃತಿ ನಿರ್ವಹಣಾ ಸಭೆಯನ್ನು ಅಧಿಕಾರಿಗಳೊಂದಿಗೆ ನಡೆಸಿದ ಬಳಿಕ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಆತಂಕ ಪಡುವ ಸಮಸ್ಯೆ ಜಿಲ್ಲೆಯಲ್ಲಿ ಉದ್ಭವಿಸಿಲ್ಲ. ಮೊದಲೇ ಕುಡಿಯುವ ಸಂಬಂಧ ಜಲಾಶಯಗಳಲ್ಲಿ ನೀರನ್ನು ಸಂಗ್ರಹಿಸಿ ಇಟ್ಟಿದ್ದೆವು. ಇವತ್ತಿನಿಂದ ಜಲಾಶಯಗಳಿಗೆ ನೀರು ಬರಲು ಶುರುವಾಗಿದೆ. ನಾಳೆ, ನಾಡಿದ್ದು ನೀರಿನ ಪ್ರಮಾಣ ಮತ್ತಷ್ಟು ಹೆಚ್ಚಾಗಲಿದೆ. ಮುಂದಿನ ಮೂರನಾಲ್ಕು ದಿನ ಒಳ್ಳೆಯ

**1 : ಸವದತ್ತಿ ಸೇರಿ ಕೆಲವೆಡೆ ಮಳೆ**
**2 : 10 ಕಡೆ ಮಾತ್ರ ನೀರಿನ ಸಮಸ್ಯೆ**
**3 : ಒಳ್ಳೆಯ ಮಳೆ ಆಗುವ ನಿರೀಕ್ಷೆ**

ಮಳೆ ಆಗುವ ನಿರೀಕ್ಷೆ ಇದೆ. ಇಷ್ಟಾದರೆ ಸದ್ಯದ ಸಮಸ್ಯೆಯಿಂದ ನಾವು ಪಾರಾಗುತ್ತೇವೆ. ಶೇ.29ರಷ್ಟು ಮಳೆ ಕೊರತೆ ಉಂಟಾಗಿದೆ. ಈಗ ಆಗುತ್ತಿರುವಂತೆ ಮುಂದೆಯೂ ಮಳೆ ಆದರೆ ಕೊರತೆ ಆಗಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಹಾನಗರ ಪಾಲಿಕೆ, ನಗರ ಸಭೆ, ಗ್ರಾಮ ಪಂಚಾಯತ್‌ಗಳು ಸೇರಿ 10 ಕಡೆ ಮಾತ್ರ ನೀರಿನ ಸಮಸ್ಯೆ ಆಗಿದೆ. ರಾಕಸಕೊಪ್ಪ ಜಲಾಶಯಕ್ಕೂ ನೀರು ಬರಲು ಶುರುವಾಗಿದೆ. ಒಂದು ವಾರದಲ್ಲಿ ಅದು ಭರ್ತಿ ಆಗಲಿದೆ. ಇದರಿಂದ ಬೆಳಗಾವಿ ನಗರದಲ್ಲಿ ಕುಡಿಯುವ ನೀರಿಗೆ ಅನುಕೂಲ ಆಗಲಿದೆ. ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಿತ್ತನೆ ಆಗಿದೆ. ಈಗ ಮಳೆ ಆಗುತ್ತಿರುವುದರಿಂದ ಬೆಳೆಗಳಿಗೆ ತುಂಬಾ ಉಪಯುಕ್ತ ಆಗಲಿದೆ ಎಂದರು.



ಉದಯವಾಹಿನಿ ಚಿತ್ರ

> ಮೋಡ ಬಿತ್ತನೆ ಶುರು ಮಾಡಿದ್ದಾರೆ. ನಮ್ಮಲ್ಲಿ ಮಳೆ ಉತ್ತಮವಾಗಿ ಆಗುತ್ತಿದೆ. ಒಂದು ವೇಳೆ ಅವಶ್ಯಕತೆ ಇದ್ದರೆ, ನಮ್ಮಲ್ಲೂ ಮೋಡ ಬಿತ್ತನೆ ಮಾಡಲು ಪ್ರಯತ್ನಿಸುತ್ತೇವೆ ಎಂದು ಹೇಳಿದರು.
> -ಶಾಸಕ ಪ್ರಕಾಶ್ ಕೋಳಿವಾಡ

> ಸರ್ವೋಚ್ಚ ನ್ಯಾಯಲಯದ ಆದೇಶದ ಮೇರೆಗೆ ಬೆಳಗಾವಿ ನಗರದಲ್ಲಿ ಫುಟ್?ಪಾತ್ ಅತಿಕ್ರಮಣ ತೆರವುಗೊಳಿಸಲಾಗುತ್ತಿದೆ. ತೆರವು ಕಾರ್ಯಾಚರಣೆ ಮುಂಚಿತವಾಗಿ ಸಂಬಂಧಿತರಿಗೆ ನೋಟಿಸ್ ನೀಡಿ ಸೂಚನೆ ನೀಡಲು ಅಧಿಕಾರಿಗಳಿಗೆ ತಿಳಿಸುವುದಾಗಿ ತಿಳಿಸಿದರು.
> -ಸತೀಶ್ ಜಾರಕಿಹೊಳಿ

ರಾಮದುರ್ಗ, ಸವದತ್ತಿ ಸೇರಿ ಕೆಲವೆಡೆ ಮಳೆ ಆಗದ ವಿಚಾರಕ್ಕೆ ಮುಂದಿನ 8 ದಿನಗಳಲ್ಲಿ ಅಲ್ಲಿಯೂ ಒಳ್ಳೆಯ ಮಳೆ ಆಗುವ ನಿರೀಕ್ಷೆ ಇದೆ. ಒಂದು ವೇಳೆ ಮಳೆ ಆಗದಿದ್ದರೆ ಏನು ಮಾಡಬೇಕು ಎಂಬ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ, ಸರ್ವೆ ಮಾಡಲು ಕ್ರಮ ವಹಿಸುತ್ತೇವೆ. ಆದರೆ, ಸರ್ವೆ ಮಾಡುವ ಪರಿಸ್ಥಿತಿ ಇನ್ನೂ ಉದ್ಭವಿಸಿಲ್ಲ ಎಂದರು.

### 20 ಸ್ಥಾನಗಳು ಖಾಲಿ ಇವೆ.

**ಸಚಿವ ಸಂಪುಟ ವಿಸ್ತರಣೆ ವಿಚಾರಕ್ಕೆ ಜಿಲ್ಲೆಯ ಯಾವ ಶಾಸಕರಿಗೆ ಸಚಿವ ಸ್ಥಾನ ನೀಡಬೇಕು ಎನ್ನುವುದನ್ನು ಪಕ್ಷದ ಹೈಕಮಾಂಡ್ ನಿರ್ಧರಿಸುತ್ತದೆ. ಸಚಿವ ಸಂಪುಟದಲ್ಲಿ 20 ಸ್ಥಾನಗಳು ಖಾಲಿ ಇವೆ. ಈ ಸಂದರ್ಭದಲ್ಲಿ ಸಚಿವರ ಅವಶ್ಯಕತೆ ಇದೆ. ಯಾವಾಗ ಮಾಡುತ್ತಾರೆ ಅಂತ ಗೊತ್ತಿಲ್ಲ. ಆದರೆ, ಆದಷ್ಟು ಬೇಗನೇ ಸಂಪುಟ ವಿಸ್ತರಣೆ ಆಗಲಿದೆ ಎಂದರು.**

ಬೆಳಗಾವಿ ನಗರದಲ್ಲಿ ನೀರಿನ ಪೈಪ್ ಲೈನ್ ಅಳವಡಿಸುವುದಕ್ಕಾಗಿ ರಸ್ತೆಯನ್ನು ಅಗೆದ ಪರಿಣಾಮ ವಾಹನ ಸವಾರರು, ಸಾರ್ವಜನಿಕರು ಓಡಾಡಲು ಸಂಕಷ್ಟ ಆಗುತ್ತಿದೆ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಸತೀಶ ಜಾರಕಿಹೊಳಿ, ಇದು ಎಲ್ ಆಂಡ್ ಟಿ ಕಂಪನಿ ಮಾಡಿರುವ ಸಮಸ್ಯೆ. ಡಿಸಿ, ಮಹಾನಗರ ಪಾಲಿಕೆ ಆಯುಕ್ತರು ಸೇರಿದಂತೆ ಹಿಂದೆ ನಾನು ಕೂಡ ಅವರ ಜೊತೆಗೆ ಸಭೆ ಮಾಡಿದ್ದೇನೆ. ನಾಲ್ಕೈದು ವರ್ಷಗಳಿಂದ ಈ ರೀತಿ ಅವರು ರಸ್ತೆ ಅಗೆಯುತ್ತಿದ್ದಾರೆ. ರಸ್ತೆ ಸರಿಪಡಿಸುವಂತೆ ಸೂಚಿಸುತ್ತೇನೆ.

ಅಲ್ಲದೇ ಮಳೆಗಾಲದಲ್ಲಿ ಕಾಮಗಾರಿ ಸ್ಥಗಿತಗೊಳಿಸಲು ಸೂಚಿಸಲಾಗುವುದು ಎಂದು ಸತೀಶ ಜಾರಕಿಹೊಳಿ ಸ್ಪಷ್ಟಪಡಿಸಿದರು. ಜಿಲ್ಲೆಯ ವಿವಿಧೆಡೆ ಹದಗೆಟ್ಟಿರುವ ರಸ್ತೆಗಳನ್ನು ಸದ್ಯಕ್ಕೆ ತಾತ್ಕಾಲಿಕವಾಗಿ ದುರಸ್ತಿ ಪಡಿಸಲಾಗುವುದು. ಮಳೆ ನಿಂತ ಮೇಲೆ ಹಂತ ಹಂತವಾಗಿ ಎಲ್ಲಾ ರಸ್ತೆಗಳನ್ನು ಹೊಸದಾಗಿ ನಿರ್ಮಿಸಲಾಗುವುದು ಎಂದು ಮಾಧ್ಯಮಗಳ ಪ್ರಶ್ನೆಯೊಂದಕ್ಕೆ ಸತೀಶ್ ಜಾರಕಿಹೊಳಿ ಉತ್ತರಿಸಿದರು.


# ಚಿತ್ರದುರ್ಗದಲ್ಲಿ ಪ್ರತ್ಯೇಕ ಜಿಲ್ಲಾ ಆಸ್ಪತ್ರೆ ನಿರ್ಮಾಣ ಎಲ್ಲಿ?

• **ಉದಯವಾಹಿನಿ ಚಿತ್ರದುರ್ಗ:**

ನಗರದ ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ ಸರ್ಕಾರಿ ವೈದ್ಯಕೀಯ ಕಾಲೇಜಿನ ಜೊತೆ ವಿಲೀನಗೊಂಡ ನಂತರ ಪ್ರತ್ಯೇಕ ಜಿಲ್ಲಾ ಆಸ್ಪತ್ರೆ ನಿರ್ಮಾಣಗೊಳ್ಳುವುದು ಎಲ್ಲಿ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮನೆ ಮಾಡಿದೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ ಹೊಸ ಆಸ್ಪತ್ರೆ ನಿರ್ಮಾಣಗೊಳ್ಳಲಿದೆ ಎಂದು ಘೋಷಿಸಿದ್ದರೂ ಚಳ್ಳಕೆರೆ ಹೆಸರೂ ಚರ್ಚೆಗೆ ಬಂದಿರುವುದು ಸ್ಥಳೀಯವಾಗಿ ಗೊಂದಲ ಮೂಡಿಸಿದೆ. ಕಳೆದ ಸಾಲಿನ ಬಜೆಟ್‌ನಲ್ಲಿ ಶಾಮನೂರು ಶಿವಶಂಕರಪ್ಪ ಅವರು ವೈದ್ಯಕೀಯ ಕಾಲೇಜು ದೂರವಿರುವ ಹಿನ್ನೆಲೆಯಲ್ಲಿ ಪ್ರತ್ಯೇಕ ಜಿಲ್ಲಾ ಆಸ್ಪತ್ರೆ ನಿರ್ಮಾಣಕ್ಕೆ 91.25 ಕೋಟಿ ಮೀಸಲಿಟ್ಟಿದ್ದರು.

ಕರ್ನಾಟಕ ಗೃಹ ಮಂಡಳಿ ಪೂರಕ ಪುಸ್ತಕಗಳ ನಿಯಮದಿಂದ (ಕೆಎಚ್‌ಬಿ) ಹಣ ಒದಗಿಸುವುದಾಗಿ ತಿಳಿಸಿತ್ತು. ಆಯಾ 150 ಹಾಸಿಗೆಗಳ ಜಿಲ್ಲಾ ಆಸ್ಪತ್ರೆಯನ್ನು 200 ಹಾಸಿಗೆ ಸಾಮರ್ಥ್ಯದ ಜಿಲ್ಲಾ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಕಾರ್ಯದ ಆಲೋಚನೆಯಾಗಿತ್ತು.

ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಆಸ್ಪತ್ರೆ ನಿರ್ಮಿಸುವುದನ್ನು ಬಿಟ್ಟು ಜಿಲ್ಲೆಯಲ್ಲೇ ಒಂದು ದೊಡ್ಡದಾಗಿ ಮಾಡಿ ಯಾವುದಾದರೊಂದು ಆಸ್ಪತ್ರೆ ನಿರ್ಮಾಣದ ಅವಶ್ಯಕತೆ ಕಲ್ಪಿಸಲಾಗಿತ್ತು. ಅದರಂತೆ ಮೊಳಕಾಲ್ಮೂರು ಮೈಲಾರ ಹಳ್ಳಿಯ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ವಿಚಾರವಿನಿಮಯಗಳನ್ನು ನಡೆಸಲಾಯಿತು ಎಂದು ತಿಳಿದುಬಂದಿದೆ. ವೈದ್ಯಕೀಯ ಕಾಲೇಜು ನಿಯಮದ ಅಡಿ ಸಿಬ್ಬಂದಿ ಮತ್ತು ಮೂಲ ಸೌಲಭ್ಯಗಳ ಕೊರತೆ ಇದೆ ಎಂದು ಮಾರ್ಗದರ್ಶನ ನೀಡಲಾಗಿತ್ತು.





ಉದಯವಾಹಿನಿ ಚಿತ್ರ

> ಹೊಸ ಜಿಲ್ಲಾ ಆಸ್ಪತ್ರೆ ನಿರ್ಮಾಣ ಸಂಬಂಧ ಇಲ್ಲಿಯವರೆಗೂ ನಮಗೆ ಯಾವುದೇ ಮಾಹಿತಿ ಬಂದಿಲ್ಲ. ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯನ್ನು ಮೆಡಿಕಲ್ ಕಾಲೇಜು ನಿರ್ದೇಶಕರೇ ನಿರ್ವಹಣೆ ಮಾಡುತ್ತಿದ್ದಾರೆ.-ಡಾ.ಶೃತಿ, ಜಿಲ್ಲಾ ಆರೋಗ್ಯ ಅಧಿಕಾರಿ

ಈ ಸಂಬಂಧ ಆರೋಗ್ಯ ಇಲಾಖೆ ಕೆಎಚ್‌ಬಿಯ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆದು ಲೋಕೋಪಯೋಗಿ ಇಲಾಖೆಯ ನಿರ್ದೇಶಕರಿಗೆ ಮಾಹಿತಿ ನೀಡಿದ್ದು, ಎಲ್ಲವೂ ಅಂದುಕೊಂಡಂತೆ ಆದರೆ ಮೊಳಕಾಲ್ಮೂರು ತಾಲ್ಲೂಕು ಆಸ್ಪತ್ರೆಯೇ ಜಿಲ್ಲಾ ಆಸ್ಪತ್ರೆಯಾಗಿ ಮೇಲ್ದರ್ಜೆಗೇರುವ ಕಾಮಗಾರಿಗೆ ಚಾಲನೆ ದೊರೆಯಬೇಕಿತ್ತು. ಈ ನಡುವೆ ಆರೋಗ್ಯ ಇಲಾಖೆ ಕೆಎಚ್‌ಬಿಗೆ ಹೊಸ ಪ್ರಸ್ತಾವನೆ ಸಲ್ಲಿಸಿದ್ದು, ಚಿತ್ರದುರ್ಗದಲ್ಲಿರುವ 150 ಹಾಸಿಗೆ ಸಾಮರ್ಥ್ಯದ ತಾಲ್ಲೂಕು ಆಸ್ಪತ್ರೆಯನ್ನು 250 ಹಾಸಿಗೆ ಸಾಮರ್ಥ್ಯದ ಪ್ರತ್ಯೇಕ ಜಿಲ್ಲಾ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಬೇಕು ಎಂದು ಕೋರಿದೆ.


# ಟಿಸಿ ಅಳವಡಿಕೆಯಲ್ಲಿ ಭ್ರಷ್ಟಾಚಾರ; ತನಿಖೆಗೆ ಆಗ್ರಹ

• **ಉದಯವಾಹಿನಿ ನಾಯಕನಹಟ್ಟಿ:**

ಬೆಸ್ಕಾಂ ಅಧಿಕಾರಿಗಳು ಕೆಲವು ಪ್ರಭಾವಿ ವ್ಯಕ್ತಿಗಳ ಜಮೀನುಗಳಿಗೆ ನಿಯಮಗಳನ್ನು ಮೀರಿ ಕಾರ್ಯಾದೇಶವಿಲ್ಲದೆ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿ ಭ್ರಷ್ಟಾಚಾರವೆಸಗಿದ್ದಾರೆ' ಎಂದು ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಘಟಕದ ಕಾರ್ಯಾಧ್ಯಕ್ಷ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಆರೋಪಿಸಿದರು.ತಳಕು ಗ್ರಾಮದ ಬೆಸ್ಕಾಂ ಉಪವಿಭಾಗೀಯ ಕಚೇರಿ ಆವರಣದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ನಡೆಸಿದ ಪ್ರತಿಭಟನೆ ವೇಳೆ ಅವರು ಮಾತನಾಡಿದರು.

'ತಳಕು ಹೋಬಳಿಯಲ್ಲಿ ಕೆಲ ರೈತರ ಮತ್ತು ಕೆಲ ಪ್ರಭಾವಿ ರಾಜಕೀಯ ವ್ಯಕ್ತಿಗಳ ಜಮೀನುಗಳಿಗೆ ಬೆಸ್ಕಾಂ ಅಧಿಕಾರಿಗಳು ಎರಡು ವರ್ಷಗಳಿಂದ ನಿಯಮಗಳನ್ನು ಗಾಳಿಗೆ ತೂರಿ 25 ಕೆ.ವಿ. ಸಾಮರ್ಥ್ಯದ ವಿದ್ಯುತ್ ಪರಿವರ್ತಕಗಳ ಬದಲಿಗೆ 63 ಕೆ.ವಿ. ಸಾಮರ್ಥ್ಯದ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿದ್ದಾರೆ. ಬೆಸ್ಕಾಂಗೆ ಯಾವುದೇ ದಾಖಲೆ ಮತ್ತು ಹಣ ಪಾವತಿಸದೇ ಇರುವವರಿಗೆ ವಿದ್ಯುತ್ ಪರಿವರ್ತಕಗಳು, ಕಂಬಗಳು, ವೈರ್‌ಗಳನ್ನು ಅಳವಡಿಸಿ ಲಕ್ಷಾಂತರ ರೂಪಾಯಿ ನಷ್ಟ ಉಂಟುಮಾಡಿದ್ದಾರೆ' ಎಂದು ಆರೋಪಿಸಿದರು.

'ಆದರೆ, ನಿಜವಾದ ರೈತರ ಜಮೀನುಗಳಿರುವ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಮತ್ತು ಆರ್.ಆರ್. ಸಂಖ್ಯೆ ನೀಡುವಲ್ಲಿ ಬೆಸ್ಕಾಂ ವಿವಿಧ ನಿಯಮಗಳನ್ನು ವಿಧಿಸಿದೆ. ಹಲವು ವರ್ಷಗಳಿಂದ ರೈತರು ಆರ್.ಆರ್ ಸಂಖ್ಯೆ ಪಡೆಯಲು ಬೆಸ್ಕಾಂ ಕಚೇರಿಗೆ ಎಡತಾಕಿದರೂ ಪ್ರಯೋಜನವಾಗಿಲ್ಲ. ಭ್ರಷ್ಟಾಚಾರದ ಬಗ್ಗೆ ದಾವಣಗೆರೆ ಮತ್ತು ಹಿರಿಯೂರಿನ ಬೆಸ್ಕಾಂ ಉನ್ನತ ಮಟ್ಟದ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ತನಿಖೆಯಾಗಲೀ, ಶಿಸ್ತುಕ್ರಮವಾಗಲೀ ಕೈಗೊಂಡಿಲ್ಲ. ಇನ್ನಾದರೂ ಅಧಿಕಾರಿಗಳು ಎಚ್ಚೆತ್ತು ಕೊಂಡು ಬೆಸ್ಕಾಂನಲ್ಲಿ ನಡೆದಿರುವ ಭ್ರಷ್ಟಾಚಾರದ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು' ಎಂದು ಆಗ್ರಹಿಸಿದರು.



ಉದಯವಾಹಿನಿ ಚಿತ್ರ


**'ಹಾಗೇ ತಾಳಕು ಮತ್ತು ಮೊಳಕಾಲ್ಮುರು ಭಾಗದ ರೈತರ ಜಮೀನುಗಳಲ್ಲಿರುವ ವಿದ್ಯುತ್ ಪರಿವರ್ತಕಗಳು ಸುಟ್ಟರೆ ಸಕಾಲದಲ್ಲಿ ವಿದ್ಯುತ್ ಪರಿವರ್ತಕಗಳನ್ನು ನೀಡುತ್ತಿಲ್ಲ. ಬೆಸ್ಕಾಂ ಅಧಿಕಾರಿಗಳು ರಾಜಕಾರಣಿಗಳ ಕೈಗೊಂಬೆಯಂತೆ ನಡೆದುಕೊಳ್ಳುತ್ತಿದ್ದಾರೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.**

# ಮಳೆ ಅಭಾವ ಪರಿಸ್ಥಿತಿ ಎದುರಿಸಲು ಸಜ್ಜಾಗಿ ಅಧಿಕಾರಿಗಳಿಗೆ ಖುಷ್ಬು ಗೋಯಲ್ ಚೌಧರಿ ಸೂಚನೆ

• **ಉದಯವಾಹಿನಿ ವಿಜಯಪುರ, :**

ಜಿಲ್ಲೆಯಲ್ಲಿನ ಕುಡಿಯುವ ನೀರಿನ ಲಭ್ಯತೆ, ಹಿಂಗಾರು ಹಾಗೂ ಮುಂಗಾರು ಮಳೆ ಪರಿಸ್ಥಿತಿ, ಮಳೆ ಕೊರತೆಯಾದಲ್ಲಿ ಪರ್ಯಾಯ ಮಾರ್ಗಗಳನ್ನು ಕೈಗೊಳ್ಳುವಂತೆ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಕೈಗಾರಿಕಾ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರೂ ಆಗಿರುವ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಖುಷ್ಬು ಗೋಯಲ್ ಚೌಧರಿ ಅವರು ಹೇಳಿದರು. ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ಇವರ ಸಹಯೋಗದಲ್ಲಿ ನಗರದ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಆಯೋಜಿಸಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮುಂಗಾರು ಮಳೆ ಸಮರ್ಪಕವಾಗಿ ಆಗದೇ ಇದ್ದರೆ, ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದರು. ಇದಕ್ಕೆ ಯಾವ ರೀತಿಯ ಮುನ್ನೆಚ್ಚರಿಕಾ ಯೋಜನೆಗಳನ್ನು ರೂಪಿಸಲಾಗಿದೆ ಎಂಬುದರ ಕುರಿತು ಅಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದರು.





ಉದಯವಾಹಿನಿ ಚಿತ್ರ

ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯ ಉಂಟಾಗದಂತೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ನೀರಿನ ಮೂಲಗಳ ಸಂರಕ್ಷಣೆ, ಪರ್ಯಾಯ ನೀರು ಸರಬರಾಜು ವ್ಯವಸ್ಥೆ ಹಾಗೂ ತುರ್ತು ಸಂದರ್ಭಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಂಬಂಧಪಟ್ಟ ಇಲಾಖೆಗಳು ಪೂರ್ವಸಿದ್ಧತೆ ಮಾಡಿಕೊಂಡಿರಬೇಕು ಎಂದು ಸೂಚಿಸಿದರು.

> ಯಾವುದೇ ಗ್ರಾಮ ವಿದ್ಯುತ್ ಸೌಲಭ್ಯದಿಂದ ವಂಚಿತವಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ರೈತರಿಗೆ ನಿಗದಿತ ಅವಧಿಯ ವಿದ್ಯುತ್ ಪೂರೈಕೆ ನಿರಂತರವಾಗಿ ದೊರೆಯುವಂತೆ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಮರ್ಪಕ ವಿದ್ಯುತ್ ಸೇವೆ ಒದಗಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.-ಖುಷ್ಬು ಗೋಯಲ್ ಚೌಧರಿ

ವಿದ್ಯುತ್ ಪೂರೈಕೆ ಸಮರ್ಪಕವಾಗಿ ಆಗುತ್ತಿದೆಯೇ ಹಾಗೂ ಜಿಲ್ಲೆಯ ಗ್ರಾಮೀಣ ಪ್ರದೇಶಗಳ ಹಳ್ಳಿಗಳಿಗೆ ವಿದ್ಯುತ್ ಸರಬರಾಜು ವ್ಯವಸ್ಥೆ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ, ವಿದ್ಯುತ್ ವ್ಯತ್ಯಯಗಳು ಉಂಟಾಗುತ್ತಿವೆಯೇ ಹಾಗೂ ವಿದ್ಯುತ್ ಸಂಪರ್ಕದಿಂದ ವಂಚಿತವಾಗಿರುವ ಯಾವುದೇ ಗ್ರಾಮ ಅಥವಾ ವಸತಿ ಪ್ರದೇಶಗಳಿವೆಯೇ ಎಂಬುದರ ಕುರಿತು ಅಧಿಕಾರಿಗಳಿಂದ ವಿವರವಾದ ಮಾಹಿತಿ ಪಡೆದರು.

## ನಿವೃತ್ತಿ ಜೀವನ ಹರ್ಷದಾಯಕವಾಗಿರಲಿ - ಎಚ್.ಡಿ.ಮಧುಕೇಶವ

• **ಉದಯವಾಹಿನಿ ಶಿಕಾರಿಪುರ:**


'ಸುದೀರ್ಘ ಸೇವೆ ಸಲ್ಲಿಸಿದ ಶಿಕ್ಷಕರು ಸಮಾಜಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ನಿವೃತ್ತಿ ಜೀವನ ಹರ್ಷದಾಯಕವಾಗಿರಲಿ' ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಎಚ್.ಡಿ.ಮಧುಕೇಶವ ಹೇಳಿದರು.

ಪಟ್ಟಣದ ಗುರುಭವನದಲ್ಲಿ ಈಚೆಗೆ ನಡೆದ ನಿವೃತ್ತ ಶಿಕ್ಷಕರಿಗೆ ಬೀಳ್ಕೊಡುಗೆ, ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.'25-35 ವರ್ಷ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದುತ್ತಿರುವ ಶಿಕ್ಷಕರೆಲ್ಲರೂ ಅಪಾರ ಅನುಭವ ಪಡೆದಿದ್ದು, ಅದು ಮುಂದೆಯೂ ವಿದ್ಯಾರ್ಥಿಗಳಿಗೆ ಸಮಾಜಕ್ಕೆ ಸಿಗುವಂತಾಗಬೇಕು. ವೃತ್ತಿಗೆ ನಿವೃತ್ತಿ ಆಗಿದ್ದರೂ ಅವರೆಲ್ಲರೂ ತಮ್ಮ ಕೈಲಾದ ಸಮಯದವರೆಗೂ ಶಿಕ್ಷಕರಿಗೆ, ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡುವಂತಾಗಬೇಕು. ತಮ್ಮ ಗ್ರಾಮದ, ಸುತ್ತಮುತ್ತಲಿನ ಎಲ್ಲಾ ಯುವಕರಿಗೆ ಮಾರ್ಗದರ್ಶಕರಾಗಿ ಪ್ರವೃತ್ತಿ ಮುಂದುವರಿಸಬೇಕು' ಎಂದು ಶುಭ ಹಾರೈಸಿದರು.'ವೃತ್ತಿಗೆ ಮಾತ್ರ ನಿವೃತ್ತಿ ಇದ್ದು ವಯೋನಿವೃತ್ತಿ ಹೊಂದಿದ ಶಿಕ್ಷಕರು ತಮ್ಮ ಪ್ರವೃತ್ತಿ ಮೂಲಕ ಮುಂದಿನ ಜೀವನ ಸುಂದರಗೊಳಿಸಿಕೊಳ್ಳಬೇಕು. ಜೀವ ಚೈತನ್ಯ ಹೆಚ್ಚಿಸುವ ಕೆಲಸದಲ್ಲಿ ತೊಡಗಿಸಿಕೊಂಡು ನಿವೃತ್ತಿ ಜೀವನ ಸಾರ್ಥಕಗೊಳಿಸಿಕೊಳ್ಳಿ' ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಲೋಕೇಶ್ ಹೇಳಿದರು.

# ಮೈಲೂರು ಮೆಟ್ರಿಕ್ ಬಾಲಕಿಯರ ವಸತಿ ನಿಲಯ ಸ್ಥಳಾಂತರಕ್ಕೆ ವಿರೋಧ

• **ಉದಯವಾಹಿನಿ ಬೀದರ್:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಗರದ ಮೈಲೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ (2603) ವನ್ನು ಘೋಡಂಪಳ್ಳಿಗೆ ಸ್ಥಳಾಂತರಿಸುವ ಪ್ರಕ್ರಿಯೆಯನ್ನು ತಕ್ಷಣವೇ ಕೈಬಿಡುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಮುಖಂಡರು ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ.



ಉದಯವಾಹಿನಿ ಚಿತ್ರ

ಘೋಡಂಪಳ್ಳಿ ಗ್ರಾಮವು ಬೀದರ್ ನಗರದಿಂದ ಸುಮಾರು 15 ಕಿಲೋಮೀಟರ್ ದೂರದಲ್ಲಿದ್ದು, ಸಮರ್ಪಕ ಸಾರಿಗೆ ಸಂಪರ್ಕವಿಲ್ಲದ ನಿರ್ಜನ ಪ್ರದೇಶವಾಗಿದೆ. ಅಲ್ಲದೆ, ತೆಲಂಗಾಣ ಗಡಿಭಾಗ, ಅರಣ್ಯ ಪ್ರದೇಶ ಹಾಗೂ ಸ್ಮಶಾನದ ಸಮೀಪ ಇರುವುದರಿಂದ ವಿದ್ಯಾರ್ಥಿನಿಯರ ಸುರಕ್ಷತೆ ದೃಷ್ಟಿಯಿಂದ ವಸತಿ ನಿಲಯ ಸ್ಥಳಾಂತರ ಸೂಕ್ತವಲ್ಲ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಘೋಡಂಪಳ್ಳಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಅಲ್ಲಿನ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಬಾಲಕಿಯರ ವಸತಿ ನಿಲಯವನ್ನು ಅಲ್ಲಿಗೆ ಸ್ಥಳಾಂತರಿಸುವುದು ವಿದ್ಯಾರ್ಥಿನಿಯರ ಶಿಕ್ಷಣ ಹಾಗೂ ಭದ್ರತೆಗೆ ಧಕ್ಕೆಯಾಗಲಿದೆ ಎಂದು ಸಂಘಟನೆಗಳು ಆತಂಕ ವ್ಯಕ್ತಪಡಿಸಿದ್ದಾರೆ. ಈ ಕುರಿತು ಈಗಾಗಲೇ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಲೋಕಸಭಾ ಸದಸ್ಯರು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಲಾಗಿದೆ. ಜನಸ್ಪಂದನ ಸಭೆಯಲ್ಲಿಯೂ ವಿಷಯ ಪ್ರಸ್ತಾಪಿಸಲಾಗಿತ್ತು. ಇದೇ ವೇಳೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಘೋಡಂಪಳ್ಳಿಯ ನಿಗದಿತ ಕಟ್ಟಡಕ್ಕೆ ಭೇಟಿ ನೀಡಿ ಅಸಮಾಧಾನ ವ್ಯಕ್ತಪಡಿಸಿದ್ದು, ಬಾಲಕಿಯರ ವಸತಿ ನಿಲಯ ನಡೆಸಲು ಆ ಸ್ಥಳ ಸೂಕ್ತವಲ್ಲ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದರು ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

# ದುಶ್ಚಟಗಳಿಂದ ಬದುಕು ಹಾಳು: ಡಾ. ವೀರೇಂದ್ರ ಹೆಗ್ಗಡೆ

## ದುಶ್ಚಟಗಳು ನಮ್ಮ ಬದುಕನ್ನು ಹಾಳು ಮಾಡುತ್ತವೆ. ಕೆಟ್ಟದ್ದನ್ನು ತಿರಸ್ಕರಿಸುವ ಮನೋಭಾವ ನಮ್ಮಲ್ಲಿರಬೇಕು

• **ಉದಯವಾಹಿನಿ ಬೆಳ್ತಂಗಡಿ:**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮತ್ತು ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ವತಿಯಿಂದ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ ಪ್ರಯುಕ್ತ ರಾಜ್ಯದ ಶಾಲೆ-ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ದುಶ್ಚಟಗಳ ವಿರುದ್ಧ

**1 : ಆನ್‌ಲೈನ್ ಮೂಲಕ ಮಾಹಿತಿ ಪಡೆದರು**
**2 : ತಪ್ಪುಗಳಾಗದಂತೆ ಜಾಗೃತೆ ವಹಿಸಬೇಕು**
**3 : ಜನಜಾಗೃತಿ ವೇದಿಕೆ ಮಾಡುತ್ತಾ ಬಂದಿದೆ**

ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಆನ್‌ಲೈನ್ ಮೂಲಕ 'ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಗ್ರಾಮಾಭಿವೃದ್ಧಿ ಯೋಜನೆಯ ಕೇಂದ್ರ ಕಚೇರಿಯಲ್ಲಿ ನಡೆದ ಕಾರ್ಯಕ್ರಮವನ್ನು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರು ಉದ್ಘಾಟಿಸಿದರು. ರಾಜ್ಯದ 1,281 ಶಾಲೆ-ಕಾಲೇಜುಗಳ 1,31,039 ವಿದ್ಯಾರ್ಥಿಗಳು ಏಕ ಕಾಲದಲ್ಲಿ ಆನ್‌ಲೈನ್ ಮೂಲಕ ಮಾಹಿತಿ ಪಡೆದರು. ''ಯುವ ಜನತೆ ನಮ್ಮ ದೇಶದ ಆಸ್ತಿ. ಅವರು ದುಶ್ಚಟಗಳ ಮೊರೆ ಹೋಗದಂತೆ ಜಾಗ್ರತೆ ವಹಿಸಬೇಕಾದ ಅಗತ್ಯ ಇಂದು ನಮ್ಮೆದುರಿಗಿದೆ. ಪಂಚೇಂದ್ರಿಯಗಳು ಆಕರ್ಷಿಸುತ್ತವೆ. ಆದರೆ ಅವುಗಳನ್ನು ಹತೋಟಿಯಲ್ಲಿಟ್ಟುಕೊಳ್ಳಬೇಕಾದ ಕರ್ತವ್ಯ ನಮ್ಮದು. ಪ್ರಜ್ಞಾಪೂರ್ವಕವಾಗಿ ತಪ್ಪುಗಳಾಗದಂತೆ ಜಾಗೃತೆ ವಹಿಸಬೇಕು. ದುಶ್ಚಟಗಳು ನಮ್ಮ ಬದುಕನ್ನು ಹಾಳು ಮಾಡುತ್ತವೆ.

ಕೆಟ್ಟದ್ದನ್ನು ತಿರಸ್ಕರಿಸುವ ಮನೋಭಾವ ನಮ್ಮಲ್ಲಿರಬೇಕು. ದುಶ್ಚಟಗಳಿಂದ ದೂರವಿದ್ದರೆ ಸುಂದರ ಬದುಕು ನಮ್ಮೆದುರಿಗಿದೆ. ಇವುಗಳು ತನ್ನನ್ನು ಮಾತ್ರ ಕೆಡಿಸುವುದಲ್ಲದೆ ಸಮಾಜವನ್ನೇ ಕೆಡಿಸುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ದಾರಿ ತಪ್ಪದೆ ಸದಾ ಎಚ್ಚರಿಕೆಯಿಂದಿರಬೇಕು'' ಎಂದು ಡಾ. ಹೆಗ್ಗಡೆ ಅವರು ಮಾರ್ಗದರ್ಶನ ನೀಡಿದರು.

ಹೇಮಾವತಿ ವೀ. ಹೆಗ್ಗಡೆಯವರು ಮಾತನಾಡಿ, 'ಯುವ ಜನತೆ ಮತ್ತು ವಿದ್ಯಾರ್ಥಿಗಳನ್ನು ಮಾದಕ ವ್ಯಸನಗಳಿಂದ ದೂರವಿರಿಸುವ ಪ್ರಯತ್ನಗಳನ್ನು ಗ್ರಾಮಾಭಿವೃದ್ಧಿ ಯೋಜನೆಯ ಜನಜಾಗೃತಿ ವೇದಿಕೆ ಮಾಡುತ್ತಾ ಬಂದಿದೆ. ಮದ್ಯಮುಕ್ತ ಸಮಾಜದ ನಿರ್ಮಾಣದ ಪ್ರಯತ್ನ ಆಂದೋಲನದ ರೀತಿಯಲ್ಲಿ ನಡೆಯುತ್ತಿದೆ. ಮಾದಕ ವ್ಯಸನದಲ್ಲಿ ನಮ್ಮ ದೇಶ ಬಹಳ ಮುಂದಿದೆ. ಜೀವನದಲ್ಲಿ ಎಂದಿಗೂ ಮೌಲ್ಯ ಮತ್ತು ನೈತಿಕತೆಯನ್ನು ಕಳೆದುಕೊಳ್ಳಬಾರದು. ನಾವು ನಮ್ಮಲ್ಲಿರುವ ದೌರ್ಬಲ್ಯಗಳಿಂದ ಬದುಕನ್ನು ಹಾಳುಗೆಡವಬಾರದು. ನಾವು ಜಾಗೃತರಾಗಿ ವಿದ್ಯಾವಂತರಾಗಿ, ಇತರರಿಗೆ ಮಾರ್ಗದರ್ಶಕರಾಗಿ ಬದುಕಬೇಕು. ಮಾದಕವಸ್ತು ವ್ಯಕ್ತಿ ಮತ್ತು ಸಮಾಜಕ್ಕೆ ನೋವನ್ನು ನೀಡುತ್ತದೆ. ನಾವು ಬದುಕಿರುವಷ್ಟು ದಿನ ಸುತ್ತಮುತ್ತಲಿನವರಿಗೆ ಬೆಳಕನ್ನು ನೀಡಬೇಕು. ಬೆಳಕು ನೀಡುವ ಶಕ್ತಿ ಇಂದಿನ ಯುವಕರಲ್ಲಿದೆ. ಅದನ್ನರಿತು ಈ ಸಮಾಜವನ್ನು ಮುನ್ನಡೆಸಬೇಕಿದೆ ಎಂದರು. ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯನಿರ್ವಾಹಕ ನಿರ್ದೇಶಕ ಅನಿಲ್ ಕುಮಾರ್ ಎಸ್.ಎಸ್. ಅವರ ವಿನೂತನ ಚಿಂತನೆ ಮತ್ತು ಮಾರ್ಗದರ್ಶನದಲ್ಲಿ ಈ ಕಾರ್ಯಕ್ರಮ ನಡೆಯಿತು. ಜನಜಾಗೃತಿ ವೇದಿಕೆಯ ಪ್ರಾದೇಶಿಕ ನಿರ್ದೇಶಕ ವಿವೇಕ್ ವಿನ್ಸೆಂಟ್ ಪಾಯ್ಸ್ ಅವರು ಸ್ವಾಗತಿಸಿದರು. ಯೋಜನೆಯ ಟ್ರಸ್ಟಿಗಳಾದ ಡಾ. ಹರೀಶ್ ಕೃಷ್ಣ ಸ್ವಾಮಿ, ಮುಖ್ಯ ಹಣಕಾಸು ಅಧಿಕಾರಿಗಳಾದ ಶಾಂತಾರಾಮ್ ಆರ್. ಪೈ, ಪ್ರಾದೇಶಿಕ ನಿರ್ದೇಕರಾದ ಡಿ. ಜಯರಾಮ್ ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

> ಮಾದಕ ವಸ್ತುಗಳ ಬಳಕೆ, ದುರ್ಬಳಕೆ, ದುಷ್ಪರಿಣಾಮಗಳು, ಎದುರಿಸಬೇಕಾದ ಕಾನೂನು ಕ್ರಮ ಮತ್ತು ಸಾಮಾಜಿಕ ಸಮಸ್ಯೆಗಳ ಕುರಿತು ಸವಿಸ್ತಾರ ಮಾಹಿತಿ ನೀಡಿದರು.
> -ಡಾ. ಎಚ್.ಎನ್. ವೆಂಕಟೇಶ ಪ್ರಸನ್ನ

> 'ಯುವ ಸಮುದಾಯ ತಮ್ಮ ಜಾಗೃತ ಮನಸ್ಸನ್ನು ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಉಪಯೋಗಿಸಬೇಕು. ಅವರು ಯಾವುದೇ ಮಾದಕ ವ್ಯಸನಕ್ಕೆ ಬಲಿಯಾಗದೆ ದೇಶದ ಸಂಪನ್ಮೂಲ ವ್ಯಕ್ತಿಗಳಾಗಿ ಜನಸೇವೆ, ಸಮಾಜ ಸೇವೆಯಲ್ಲಿ ತೊಡಗಿಕೊಳ್ಳುವ ಮೂಲಕ ಈ ಸಮಾಜವನ್ನು ಕಾಪಾಡಬೇಕು ಎಂದು ಮಾರ್ಗದರ್ಶನ ನೀಡಿದರು.
> -ಡಾ. ದೇವಿಪ್ರಸಾದ್ ಶೆಟ್ಟಿ

### ಜನಜಾಗೃತಿ ವೇದಿಕೆ

**ಇದುವರೆಗೆ ಜನಜಾಗೃತಿ ವೇದಿಕೆ ಮೂಲಕ ಸುಮಾರು 24,500 ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮಗಳನ್ನು ಆಯೋಜಿಸಿ 21 ಲಕ್ಷ ವಿದ್ಯಾರ್ಥಿಗಳಲ್ಲಿ ದುಶ್ಚಟದ ವಿರುದ್ಧ ಜಾಗೃತಿ ಮೂಡಿಸಲಾಗಿದೆ. ಈ ನಿಟ್ಟಿನಲ್ಲಿ 1300 ಸಂಪನ್ಮೂಲ ವ್ಯಕ್ತಿಗಳಿಗೆ ತರಬೇತುದಾರರ ತರಬೇತಿಯನ್ನು ನೀಡಲಾಗಿದೆ.**

# ಮಿನಿ ನ್ಯೂಸ್

## ಮಲ್ಲಿಕಾರ್ಜುನ ಶಿವಯೋಗಿಗಳ ಮಂದಿರದ ಗರ್ಭಗುಡಿ ಶಿಲಾಪೂಜೆ

• **ಉದಯವಾಹಿನಿ ಜಮಖಂಡಿ, :**

ತಾಲ್ಲೂಕಿನ ಹುಲ್ಯಾಳ ಗ್ರಾಮದ ಶ್ರೀಗುರುದೇವಾಶ್ರಮದ ಆವರಣದಲ್ಲಿ ನಿರ್ಮಾಣಗೊಳ್ಳುತ್ತಿರುವ ವೇದಾಂತಕೇಸರಿ ಮಲ್ಲಿಕಾರ್ಜುನ ಶಿವಯೋಗಿಗಳ ಮಂದಿರದ ಗರ್ಭಗುಡಿ ನಿರ್ಮಾಣಕ್ಕೆ ಶಿಲಾಪೂಜೆ ನೆರವೇರಿಸಲಾಯಿತು. ಮುಧೋಳ ತಾಲ್ಲೂಕಿನ ಶಿರೋಳ ಗ್ರಾಮದ ರಾಮಾರೂಢ ಮಠದ ಶಂಕರಾರೂಢ ಮಹಾಸ್ವಾಮಿಗಳು ಶಾಸ್ತ್ರೋಕ್ತವಾಗಿ ಶಿಲಾಪೂಜೆಯನ್ನು ನೆರವೇರಿಸಿದರು. ಶ್ರೀಗುರುದೇವಾಶ್ರಮದ ಹರ್ಷಾನಂದ ಮಹಾಸ್ವಾಮಿಗಳು ಕಾರ್ಯಕ್ರಮದ ನೇತೃತ್ವ ವಹಿಸಿದ್ದರೆ, ಋಷಿಕೇಶದ ಗಂಗಾಧರ ಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ವಿಜಯಪುರ ಜ್ಞಾನ ಯೋಗಾಶ್ರಮದ ಸಿದ್ಧೇಶ್ವರ ಮಹಾಸ್ವಾಮಿಗಳ ಸಂಕಲ್ಪದಂತೆ, ಅವರ ಗುರುಗಳಾದ ವೇದಾಂತಕೇಸರಿ ಮಲ್ಲಿಕಾರ್ಜುನ ಶಿವಯೋಗಿಗಳ ಸ್ಮರಣಾರ್ಥ ಮಂದಿರ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಇದೀಗ ಗರ್ಭಗುಡಿ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ.

## ಕರಾವಳಿ ಅಭಿವೃದ್ಧಿ ಮಂಡಳಿ ಪ್ರಗತಿ ಪರಿಶೀಲನೆ ಸಭೆ

• **ಉದಯವಾಹಿನಿ ಮಂಗಳೂರು-**

ಕರಾವಳಿ ಪ್ರದೇಶಗಳ ಅಭಿವೃದ್ಧಿಗೆ ಸಂಬಂಧಿಸಿದ ಎಲ್ಲಾ ಕಾಮಗಾರಿಗಳನ್ನು ಆದ್ಯತೆಯೊಂದಿಗೆ ನಿಗಧಿತ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಸಂಬಂಧಿತ ಅಧಿಕಾರಿಗಳಿಗೆ ಕರಾವಳಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಂ.ಎ. ಗಫೂರ್ ನಿರ್ದೇಶನ ನೀಡಿದರು.

ಅವರು ಕರಾವಳಿ ಅಭಿವೃದ್ಧಿ ಮಂಡಳಿಯ ವತಿಯಿಂದ ನಡೆದ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ವಿವಿಧ ಅನುಷ್ಠಾನ ಸಂಸ್ಥೆಗಳೊಂದಿಗೆ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಗತಿಯಲ್ಲಿರುವ ವಿವಿಧ ಕಾಮಗಾರಿಗಳ ಸ್ಥಳ ಪರಿಶೀಲನೆಯನ್ನು ಮುಂದಿನ ದಿನಗಳಲ್ಲಿ ಕೈಗೊಳ್ಳುವುದಾಗಿ ಅವರು ತಿಳಿಸಿದರು. ಸಭೆಯಲ್ಲಿ ಕರಾವಳಿ ಅಭಿವೃದ್ಧಿ ಮಂಡಳಿಯಿಂದ ವಿವಿಧ ಅನುಷ್ಠಾನ ಸಂಸ್ಥೆಗಳ ಮೂಲಕ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳ ಪ್ರಗತಿಯನ್ನು ಸಮಗ್ರವಾಗಿ ಪರಿಶೀಲಿಸಲಾಯಿತು.

## ಬೆಳೆ ವಿಮೆ ಅವಧಿ ವಿಸ್ತರಣೆಗೆ ಕೇಂದ್ರ ಸರ್ಕಾರಕ್ಕೆ ಕೋಟ ಪತ್ರ

• **ಉದಯವಾಹಿನಿ ಉಡುಪಿ:**



ಉದಯವಾಹಿನಿ ಚಿತ್ರ

2026-27 ನೇ ಸಾಲಿನ ಹವಾಮಾನ ಆಧರಿತ ಬೆಳೆ ವಿಮೆ ಯೋಜನೆಯ ನೋಂದಾವಣೆ ಅವಧಿ ಜೂ. 30ರ ಅಂತ್ಯಕ್ಕೆ ಮುಕ್ತಾಯಗೊಳ್ಳುತ್ತಿದ್ದು, ಎಲ್ಲ ರೈತರ ನೋಂದಾವಣೆ ಸಾಧ್ಯವಾಗಿಲ್ಲದ ಕಾರಣ ನೋಂದಾವಣೆಯನ್ನು ಒಂದು ತಿಂಗಳ ಅವಧಿಗೆ ವಿಸ್ತರಿಸಬೇಕು. ಉಡುಪಿ-ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರು ಕೇಂದ್ರದ ಕೃಷಿ ಮತ್ತು ತೋಟಗಾರಿಕಾ ಮಂತ್ರಿ ಶಿವರಾಜ್ ಸಿಂಗ್ ಚೌಹಾಣ್ ಮತ್ತು ಕೇಂದ್ರದ ಕೃಷಿ ಕಾರ್ಯದರ್ಶಿಯವರಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ. ವಿಶೇಷವಾಗಿ ಅಡಿಕೆ, ಕಾಳುಮೆಣಸು ಸೇರಿದಂತೆ ಇನ್ನಿತರ ತೋಟಗಾರಿಕಾ ಬೆಳೆಗಳಿಗೆ ವಿಮೆ ಮಾಡಿಸಿಕೊಳ್ಳಲು ರೈತರು ಆಸಕ್ತಿ ಹೊಂದಿದ್ದಾರೆ. ಆದರೆ ಜಿಲ್ಲೆಯಲ್ಲಿ ತಡವಾಗಿ ಬಂದ ಮಳೆ ಮತ್ತು ಪ್ರತಿಕೂಲ ಹವಾಮಾನ, ಕೃಷಿ ಚಟುವಟಿಕೆ ಹಾಗೂ ರೈತಾಪಿ ವರ್ಗದ ಕೆಲಸದ ಒತ್ತಡ ಹಾಗೂ ಸಾಲು ಸಾಲಾಗಿ ಬಂದ ಸರ್ಕಾರಿ ರಜೆಗಳಿಂದ ಬ್ಯಾಂಕ್ ವ್ಯವಹಾರ ವಿಳಂಬವಾಗಿದ್ದು, ರೈತರು ವಿಮಾ ಸೌಲಭ್ಯವನ್ನು ಪಡೆಯಲು ತೊಂದರೆ ಅನುಭವಿಸುತ್ತಿದ್ದಾರೆ.

ಅಲ್ಲದೆ ಬೆಳೆ ವಿಮೆಯ ಯೋಜನೆಯಡಿ ತಾಂತ್ರಿಕ ದೋಷಗಳನ್ನು ಸರಿಪಡಿಸುವುದು ವಿಳಂಬವಾದ ಹಿನ್ನೆಲೆಯಲ್ಲಿ ಅನೇಕ ರೈತರು ವಿಮಾ ಯೋಜನೆಯನ್ನು ಪಡೆಯಲು ವಂಚಿತರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಈ ಹವಾಮಾನ ಆಧರಿತ ಬೆಳೆ ವಿಮೆ ಯೋಜನೆಯ ಪ್ರಯೋಜನ ಎಲ್ಲಾ ರೈತಾಪಿ ವರ್ಗಕ್ಕೆ ಸಿಗುವಂತೆ ಅವಧಿಯನ್ನು ಮುಂದಿನ 1 ತಿಂಗಳುಗಳ ಕಾಲ ವಿಸ್ತರಿಸಬೇಕು ಎಂದು ಕೋಟ ಪತ್ರದಲ್ಲಿ ಆಗ್ರಹಿಸಿದ್ದಾರೆ.

## ಉತ್ತಮ ಆಹಾರ ಪದ್ಧತಿ ರೂಢಿಸಿಕೊಂಡರೆ ಎಲ್ಲರ ಆರೋಗ್ಯ ಚೆನ್ನಾಗಿರುತ್ತದೆ

• **ಉದಯವಾಹಿನಿ ಸಾಗರ:**

'ಉತ್ತಮ ಆಹಾರ ಪದ್ಧತಿ ರೂಢಿಸಿಕೊಂಡರೆ ಎಲ್ಲರ ಆರೋಗ್ಯ ಚೆನ್ನಾಗಿರುತ್ತದೆ' ಎಂದು 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರವೀಂದ್ರ ಆರ್. ಹೇಳಿದರು. ಕಾನೂನು ಸೇವಾ ಸಮಿತಿಯ ತಾಲ್ಲೂಕು ಘಟಕ, ವಕೀಲರ ಸಂಘ ಹಾಗೂ ಬೆಂಗಳೂರಿನ ಸ್ಪಾಸ್ನ ಹೆಲ್ತ್ ಸಂಸ್ಥೆ ನ್ಯಾಯಾಲಯದ ಆವರಣದಲ್ಲಿ ಏರ್ಪಡಿಸಿದ್ದ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.'ನಾವು ಸೇವಿಸುವ ಆಹಾರ ಅನೇಕ ಕಾಯಿಲೆಗಳಿಗೂ ಕಾರಣವಾಗುತ್ತದೆ. ನಮ್ಮ ಸಾಂಪ್ರದಾಯಿಕ ಆಹಾರ ಪದ್ಧತಿ ಆರೋಗ್ಯಕ್ಕೆ ಪೂರಕ. ಜಂಕ್ ಫುಡ್ ಸಂಸ್ಕೃತಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಈ ಬಗ್ಗೆ ಎಚ್ಚರ ಅಗತ್ಯ' ಎಂದು ಕಿವಿಮಾತು ಹೇಳಿದರು.'ನಮ್ಮ ವೃತ್ತಿ, ಉದ್ಯೋಗದಲ್ಲಿ ಬಿಡುವು ಮಾಡಿಕೊಂಡು ಯೋಗ, ನಡಿಗೆ, ವ್ಯಾಯಾಮದಂತಹ ಚಟುವಟಿಕೆಗೆ ಪ್ರತಿದಿನವೂ ಸಮಯ ಮೀಸಲಿಡಬೇಕು. ಇದರಿಂದ ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯವೂ ಉತ್ತಮವಾಗಿರುತ್ತದೆ. ಸ್ಪರ್ಧಾತ್ಮಕ ಯುಗವು ಹೆಚ್ಚಿನ ಅವಧಿ ಕೆಲಸ ಮಾಡಲೇಬೇಕಾದ ಅನಿವಾರ್ಯತೆ ಸೃಷ್ಟಿಸಿದೆ. ಇದರ ಜೊತೆಗೆ ವಿಶ್ರಾಂತಿ, ನಿದ್ದೆಗೂ ಸಾಕಷ್ಟು ಸಮಯ ನೀಡುವುದು ಆರೋಗ್ಯದ ದೃಷ್ಟಿಯಿಂದ ಮುಖ್ಯವಾದುದು' ಎಂದು ಸಲಹೆ ನೀಡಿದರು.

## ಮತದಾರರ ಹಕ್ಕು ಕಾಪಾಡುವ ಕರ್ತವ್ಯ ನಮ್ಮದು : ಡಾ. ಶಿಂಧೆ

• **ಉದಯವಾಹಿನಿ ಔರಾದ :**

ಪ್ರಜಾಪ್ರಭುತ್ವದ ಯಶಸ್ಸಿಗೆ ಮತದಾರರ ಹಕ್ಕುಗಳ ಸಂರಕ್ಷಣೆ ಅತ್ಯಂತ ಮಹತ್ವದ್ದಾಗಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕನ ಹೆಸರು ಮತದಾರರ ಪಟ್ಟಿಯಲ್ಲಿ ಸರಿಯಾಗಿ ದಾಖಲಾಗಿರುವುದನ್ನು ಖಚಿತಪಡಿಸಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಡಾ. ಭೀಮಸೇನರಾವ ಶಿಂಧೆ ಹೇಳಿದರು. ತಾಲ್ಲೂಕಿನ ಹುಲ್ಯಾಳ ಗ್ರಾಮದಲ್ಲಿ ವಿಶೇಷ ಮತದಾರರ ಪಟ್ಟಿ (ಎಸ್ ಐಆರ್) ಪರಿಷ್ಕರಣೆ ಕುರಿತು ರಿಟರ್ನಿಂಗ್ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಮಾತನಾಡಿದ ಅವರು ಮತದಾರರ ಪಟ್ಟಿಯಲ್ಲಿ ಯಾವುದೇ ಅರ್ಹ ಮತದಾರರ ಹೆಸರು ಕೈಬಿಡದಂತೆ, ಮೃತರು, ಸ್ಥಳಾಂತರಗೊಂಡವರು ಅನರ್ಹರ ಹೆಸರುಗಳನ್ನು ನಿಯಮಾನುಸಾರ ಪರಿಷ್ಕರಿಸುವ ಕಾರ್ಯವನ್ನು ಪಾರದರ್ಶಕವಾಗಿ ನಡೆಸಬೇಕು ಎಂದು ಅವರು ಅಧಿಕಾರಿಗಳಿಗೆ ತಿಳಿಸಿದರು.

